ಸಂಪುಟ: ೦೬/ ಸಂಚಿಕೆ: ೨೪೮/ಶನಿವಾರ ದಿನಾಂಕ : ೩೦-೧೧-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 248/ SATURDAY Date : 30-11-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

### ॥ ಸಪ್ತಋಷಿವಾಣಿ ॥

ಬದುಕಿನಲ್ಲಿ ಮಾಡುವ ಕೆಲಸ ಯಾವುದಾದರೇನು,
ಅದು ನಮಗೆ ಒಂದು ತುತ್ತು ಅನ್ನ, ಮಾನ ಮುಚ್ಚಲು ಬಟ್ಟೆ ಕೊಡುತ್ತಿದ್ದರೆ ಅದರ ಮೇಲೆ ಯಾವತ್ತು ಗೌರವ ಇರಲಿ.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ, ಉಡುಪಿ

## ನಾಳೆ ದಾನಮ್ಮದೇವಿ ಜಾತ್ರೆ

ಮೂಡಲಗಿ : ನಗರದ ಬಸವೇಶ್ವರ ನಗರದಲ್ಲಿರುವ ದಾನಮ್ಮದೇವಿ ದೇವಸ್ಥಾನದ ಜಾತ್ರೆ ನಾಳೆ ರವಿವಾರ ಡಿ 1 ರಂದು ಛಟ್ಟಿ ಅಮಾವಾಸ್ಯೆಯಂದು ಮುಂಜಾನೆ 6 ಗಂಟೆಗೆ ದಾನಮ್ಮದೇವಿಗೆ ಅಭಿಷೇಕ ಜರುಗುವದು,12ಕ್ಕೆ ಮುತ್ತೈದೆಗೆ ಉಡಿ ತುಂಬುವದು ಕಾರ್ಯಕ್ರಮ ನಂತರ ಮಹಾಪ್ರಸಾದ ಜರುಗುವದು ಸಂಜೆ 7 ಗಂಟೆಗೆ ಕಾರ್ತಿಕ ದೀಪೋತ್ಸವ ಕಾರ್ಯಕ್ರಮ ಜರುಗುವದು ಸಕಲ್ ಸದ್ಭಕ್ತರು ಆಗಮಿಸಿ ದೇವಿಯ ದರ್ಶನ ಪಡೆದು ಮಹಾಪ್ರಸಾದ ಸ್ವೀಕರಿಸಬೇಕು ಎಂದು ಸಂಘಟಕರು ತಿಳಿಸಿದ್ದಾರೆ,

## ಬೆಳಗಾವಿ ಅಧಿವೇಶನ ಭದ್ರತೆಗೆ

### 6 ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜನೆ: ಎಡಿಜಿಪಿ ಹಿತೇಂದ್ರ



ಬೆಳಗಾವಿ: ಡಿ.9 ರಿಂದ 19ರವರೆಗೆ ಚಳಿಗಾಲ ಅಧಿವೇಶನದಲ್ಲಿ ಸಾಕಷ್ಟು ಪ್ರತಿಭಟನೆಗಳು ಆಗುತ್ತವೆ. ಗಣ್ಯರು, ಜನಪ್ರತಿನಿಧಿಗಳು ಭೇಟಿ ನೀಡುತ್ತಾರೆ. ಸಂಚಾರ ನಿರ್ವಹಣೆ ಮಾಡಬೇಕಾಗುತ್ತದೆ. ಹಾಗಾಗಿ, ಈ ಎಲ್ಲದರ ಸಿದ್ಧತೆ ಹೇಗೆ ನಡೆಯುತ್ತದೆ ಎಂದು ಪರೀಶಿಲನೆಗೆ ಬಂದಿದ್ದೇನೆ ಎಂದು ಕಾನೂನು ಮತ್ತು ಸುವ್ಯವಸ್ಥೆ ಎಡಿಜಿಪಿ ಹಿತೇಂದ್ರ ಆರ್. ತಿಳಿಸಿದರು.

ಬೆಳಗಾವಿ ನಗರ ಪೊಲೀಸ್ ಆಯುಕ್ತರ ಕಚೇ–ರಿಯಲ್ಲಿ ಪೊಲೀಸ್ ಅಧಿಕಾರಿಗಳ ಸಭೆಗೂ ಮೊದಲು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಅಧಿವೇಶನ ಬಂದೋಬಸ್ತ್?ಗೆ 8 ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸೇರಿ 6 ಸಾವಿರ ಸಿಬ್ಬಂದಿಗಳನ್ನು ನಿಯೋಜಿಸಿದ್ದೇವೆ. ಭದ್ರತೆಗೆ ನಿಯೋಜನೆಗೊಂಡಿರುವ ಸಿಬ್ಬಂದಿಗಳಿಗೆ ಊಟ, ವಸತಿ ಸೌಕರ್ಯಕ್ಕಾಗಿ ಟೆಂಟ್ ಸಿಟಿ ನಿರ್ಮಿಸಲಾಗುತ್ತಿದೆ. ಈ ಬಾರಿ ಹೆಚ್ಚಿನ ಚಳಿ ಇದೆ. ಭದ್ರತೆಗೆ ಬರುವ ಸಿಬ್ಬಂದಿ ಚಳಿಯಿಂದ ರಕ್ಷಣೆ ಪಡೆಯಲು ಉಲ್ಲನ್ ಹೊದಿಕೆ ತೆಗೆದುಕೊಂಡು ಬರುವಂತೆ ಹೇಳಿದ್ದೇವೆ. ಒಂದು ವೇಳೆ ತೆಗೆದುಕೊಂಡು ಬಾರದ ಸಿಬ್ಬಂದಿಗಳಿಗೆ ನಾವೇ ವ್ಯವಸ್ಥೆ ಮಾಡುತ್ತೇವೆ ಎಂದರು.

ಬೆಳಗಾವಿಯಲ್ಲಿ ಸಿಬ್ಬಂದಿ ಕೊರತೆ ವಿಚಾರವಾಗಿ ಪ್ರತಿಕ್ರಿಯಿಸಿ, ವಿವಿಧ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ. ನೇಮಕಾತಿ ಆದೇಶ ಕೊಡುವುದಷ್ಟೇ ಬಾಕಿ ಇದೆ. ಖಾಲಿ ಇರುವ ಮತ್ತು ಹೆಚ್ಚುವರಿ ಹುದ್ದೆಗಳ ಭರ್ತಿಗೆ ಪ್ರಸ್ತಾವನೆ ಕಳುಹಿಸಲಾಗಿದೆ. ಮುಂದಿನ ದಿನಗಳಲ್ಲಿ ಸಿಬ್ಬಂದಿ ಕೊರತೆ ನೀಗಿಸಲಾಗುವುದು ಎಂದು ಭರವಸೆ ನೀಡಿದರು.

ಎಂಇಎಸ್ ಮಹಾಮೇಳಾವ್ ಕುರಿತು ಮಾತನಾಡಿ, ಕಳೆದ ಎರಡು ವರ್ಷಗಳಿಂದ ಮಹಾಮೇಳಾವ್?ಗೆ ಅವಕಾಶ ಕೊಟ್ಟಿಲ್ಲ. ಹಾಗಾಗಿ, ಕಳೆದ ವರ್ಷ ಮಹಾರಾಷ್ಟ್ರ ಗಡಿಯಲ್ಲಿ ಹೋಗಿ ಪ್ರತಿಭಟಿಸಿದ್ದಾರೆ. ಈ ಬಾರಿಯೂ ಅವರಿಗೆ ಅವಕಾಶ ಕೊಡುವುದಿಲ್ಲ. ಆದರೂ ಮಹಾಮೇಳಾವ್ ಮಾಡಿದರೆ ಅವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದರು.

ಈ ವೇಳೆ ಉತ್ತರ ವಲಯ ಐಜಿಪಿ ವಿಕಾಸಕುಮಾರ ವಿಕಾಸ್, ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್ ಇದ್ದರು.

## ಸದ್ಯಕ್ಕೆ ಸಚಿವ ಸಂಪುಟ ಪುನಾರಚನೆ ಇಲ್ಲ : ಮುಖ್ಯಮಂತ್ರಿ ಸ್ಪಷ್ಟನೆ



ಹೊಸದಿಲ್ಲಿ: "ಸದ್ಯಕ್ಕೆ ಸಚಿವ ಸಂಪುಟ ಪುನಾರಚನೆ ಅಥವಾ ವಿಸ್ತರಣೆ ಇಲ್ಲ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಶುಕ್ರವಾರ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಚಿವ ಸಂಪುಟ ವಿಸ್ತರಣೆ ಅಥವಾ ಪುನಾರಚನೆ ಕುರಿತಾದ ಪ್ರಶ್ನೆಗಳಿಗೆ ಉತ್ತರ ಕೊಡಬೇಕಾದವರು ಮಾಧ್ಯಮಗಳವರೇ ಹೊರತು ನಾನಲ್ಲ. ಮಾಧ್ಯಮಗಳೇ ಈ ಬಗ್ಗೆ ಸುದ್ದಿಗಳನ್ನು ಬಿತ್ತರಿಸುತ್ತಿವೆ. ಸಂಭವನೀಯ ಸಚಿವರ ಪಟ್ಟಿಯನ್ನೂ ಪ್ರಕಟಿಸುತ್ತಿವೆ. ಹೀಗಾಗಿ ಸಂಪುಟ ಪುನಾರಚನೆ, ವಿಸ್ತರಣೆ ಕುರಿತಾದ ಪ್ರಶ್ನೆಗಳಿಗೆ ಮಾಧ್ಯಮಗಳೇ ಉತ್ತರಿಸಬೇಕು ಎಂದರು.

ಸಂಪುಟ ಪುನಾರಚನೆ ರಚನೆ, ವಿಸ್ತರಣೆ ಕುರಿತಂತೆ ರಾಹುಲ್ ಗಾಂಧಿ ಅಥ–ವಾ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಚರ್ಚೆ ಮಾಡಿಲ್ಲ. ನಾಗೇಂದ್ರ ಅವರು ಸಂಪುಟಕ್ಕೆ ಸೇರ್ಪಡೆ ಆಗಲಿದ್ದಾರೆ. ಆದರೆ ಈಗಲೇ ಅಲ್ಲ ಎಂದರು.

**ಸಮಾವೇಶಕ್ಕೆ ಕೆಪಿಸಿಸಿ ಅಧ್ಯಕ್ಷರನ್ನೂ ಆಹ್ವಾನಿಸಿದ್ದಾರೆ :** ಹಾಸನದಲ್ಲಿ ಡಿಸೆಂಬರ್ 5ರಂದು ಕಾಂಗ್ರೆಸ್ ಪಕ್ಷ ಹಾಗೂ ಹಿಂದುಳಿದ ವರ್ಗಗಳ ಒಕ್ಕೂಟದ ಆಶ್ರಯದಲ್ಲಿ ಸ್ವಾಭಿಮಾನಿ ಸಮಾವೇಶ ಅಯೋಜಿಸಲಾಗಿದೆ. ಸಮಾವೇಶಕ್ಕೆ ಕೆಪಿಸಿಸಿ ಅಧ್ಯಕ್ಷರು ಹಾಗೂ ರಾಜ್ಯ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರನ್ನೂ ಸಂಘಟಕರು ಆಹ್ವಾನಿಸಿದ್ದಾರೆ. ಸಮಾವೇಶ ಕುರಿತಂತೆ ಹೈಕಮಾಂಡ್‌ಗೆ ಅನಾಮಧೇಯ ಪತ್ರ ಬರೆದಿರುವ ಬಗ್ಗೆ ಮಾಹಿತಿ ಇಲ್ಲ. ಖರ್ಗೆ ಅವರೂ ಈ ಬಗ್ಗೆ ಚರ್ಚೆ ಮಾಡಲಿಲ್ಲ ಎಂದು ಸಿದ್ದರಾಮಯ್ಯ ಅವರು ತಿಳಿಸಿದರು.

## ಕೇಂದ್ರದಿಂದ ನಬಾರ್ಡ್ ಹಣ ಕಡಿತ

### ರೈತರು ಲೇವಾದೇವಿದಾರರ ಸುಳಿಗೆ ಸಿಲುಕಲಿದ್ದಾರೆ: ಮುಖ್ಯಮಂತ್ರಿ



ನವದೆಹಲಿ/ಬೆಂಗಳೂರು: "ರಾಜ್ಯದ ರೈತರಿಗೆ ನೀಡಬೇಕಾಗಿದ್ದ ನಬಾರ್ಡ್ ಹಣದಲ್ಲಿ ಶೇ.58ರಷ್ಟನ್ನು ಕೇಂದ್ರ ಸರ್ಕಾರ ಕಡಿತಗೊಳಿಸಿರುವುದರಿಂದ ರೈತರು ಅಧಿಕ ಬಡ್ಡಿಗೆ ಸಾಲ ಕೊಡುವ ಲೇವಾದೇವಿದಾರರ ಸುಳಿಗೆ ಸಿಲುಕಲಿದ್ದಾರೆ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದೆಹಲಿಯಲ್ಲಿ ಮಾತನಾಡಿದ ಅವರು, "ರೈತರಿಗೆ ನೀಡುತ್ತಿದ್ದ ಸಬ್ಸಿಡಿ ಸಾಲ ಕಡಿತಗೊಳಿಸಿದ್ದರಿಂದ ರಾಜ್ಯದಲ್ಲಿ ಮತ್ತು ದೇಶದಲ್ಲಿ ಆಹಾರ ಉತ್ಪಾದನೆಯ ಮೇಲೆ ಕೆಟ್ಟ ಪರಿಣಾಮ ಬೀರಲಿದೆ" ಎಂದರು. ರಾಜ್ಯದ ರೈತರಿಗೆ ಮಾತ್ರ ನಬಾರ್ಡ್ ಸಾಲದ ಪ್ರಮಾಣ ಕಡಿಮೆ ಮಾಡಿಲ್ಲ. ಇಡೀ ದೇಶದಲ್ಲಿ ಕಡಿತಗೊಳಿಸಲಾಗಿದೆ ಎನ್ನುವ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಸಿಎಂ, "ಇದರಿಂದ ಇಡೀ ದೇಶದ ರೈತರನ್ನು ಸಂಕಷ್ಟಕ್ಕೆ ದೂಡಿದಂತಾಗಿದೆ. ಇಡೀ ದೇಶದ ಕೃಷಿ ಉತ್ಪಾದನೆ ಮೇಲೆ ಕೆಟ್ಟ ಪರಿಣಾಮ ಬೀರಲಿದೆ" ಎಂದು ಹೇಳಿದ್ದಾರೆ.

"ನಬಾರ್ಡ್ ಶೇ 4.5ರಷ್ಟು ಬಡ್ಡಿಗೆ ರೈತರ ಸಾಲದ ಹಣ ನೀಡುತ್ತಿತ್ತು. ನಾವು ರೈತರಿಗೆ ಬಡ್ಡಿ ರಹಿತವಾಗಿ ಸಾಲ ನೀಡಿ ಈ 4.5% ಬಡ್ಡಿಯನ್ನು ಸರ್ಕಾರವೇ ಭರಿಸುತ್ತಿತ್ತು. ಈಗ ರಾಷ್ಟ್ರೀಕೃತ ವಾಣಿಜ್ಯ ಬ್ಯಾಂಕ್‌ಗಳಿಂದ ಸಾಲ ಪಡೆಯುವಂತೆ ಕೇಂದ್ರ ಸರ್ಕಾರ ಹೇಳುತ್ತಿದೆ. ಶೇ.10ರ ಬಡ್ಡಿ ದರದಲ್ಲಿ ವಾಣಿಜ್ಯ ಬ್ಯಾಂಕ್‌ಗಳು ಸಾಲ ನೀಡುತ್ತವೆ. ಇದರಿಂದ ಬ್ಯಾಂಕ್‌ಗಳಿಗೆ ಲಾಭ ಆಗುತ್ತದೆಯೇ ಹೊರತು ರೈತರಿಗೆ ಅನುಕೂಲ ಇಲ್ಲ" ಎಂದರು.

"15ನೇ ಹಣಕಾಸು ಆಯೋಗದಲ್ಲೂ ರಾಜ್ಯಕ್ಕೆ ಅನ್ಯಾಯ ಆಯಿತು. ಭದ್ರಾ ಮೇಲ್ದಂಡೆ ಯೋಜನೆಗೆ 5,000 ಕೋಟಿ ರೂ. ಘೋಷಿಸಿ ಒಂದು ಪೈಸೆಯನ್ನೂ ಕೊಡಲಿಲ್ಲ. ಫೆರಿಫೆರಲ್ ರಿಂಗ್ ರಸ್ತೆಗೂ ಕೊಡಲಿಲ್ಲ. ಇವೆಲ್ಲದರಿಂದ 11,000 ಕೋಟಿ ರೂ. ರಾಜ್ಯಕ್ಕೆ ನಷ್ಟವಾಗಿದ್ದನ್ನೂ ಪ್ರಧಾನಮಂತ್ರಿಯವರಿಗೆ ನೆನಪಿಸಿದ್ದೇವೆ. ಹೀಗಾಗಿ, ಈ ಬಾರಿ ಮತ್ತೆ ನಬಾರ್ಡ್ ಮೂಲಕ ಆಗಿರುವ ಅನ್ಯಾಯವನ್ನು ಸರಿಪಡಿಸಲು ಮನವಿ ಮಾಡಿದ್ದೇವೆ" ಎಂದು ಹೇಳಿದ್ದಾರೆ.

**ಮಣ್ಣಿನ ಮಗ ಮಂತ್ರಿ ಏನು ಮಾಡುತ್ತಿದ್ದಾರೆ?:** "ರಾಜ್ಯಕ್ಕೆ ನಿರಂತರ ಅನ್ಯಾಯ ಆಗುತ್ತಿದೆ. ಮಹದಾಯಿ, ಮೇಕೆದಾಟು ಯೋಜನೆಗೆ ಅನುಮತಿ ನೀಡುತ್ತಿಲ್ಲ. ಇಷ್ಟಾದರೂ ರಾಜ್ಯದಿಂದ ಆಯ್ಕೆ ಆಗಿರುವ ಬಿಜೆಪಿ ಸಂಸದರು ಬಾಯಿ ಬಿಡುತ್ತಿಲ್ಲ. ಮಣ್ಣಿನ ಮಗ ಅಂದುಕೊಂಡಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಏನು ಮಾಡುತ್ತಿದ್ದಾರೆ. ರಾಜ್ಯಸಭಾ ಸದಸ್ಯರಾದ ಮಾಜಿ ಪ್ರಧಾನಿ ದೇವೇಗೌಡರೂ ರಾಜ್ಯಕ್ಕೆ ಆಗುತ್ತಲೇ ಇರುವ ಅನ್ಯಾಯಗಳ ವಿರುದ್ಧ ಬಾಯಿ ಬಿಡುತ್ತಿಲ್ಲ ಏಕೆ" ಎಂದು ಪ್ರಶ್ನಿಸಿದರು.

## ನಿಲ್ಲದ ಬಸ್ : ವಿದ್ಯಾರ್ಥಿಗಳಿಂದ ಪ್ರತಿಭಟನೆ



**ಸಂಕೇಶ್ವರ:** ಪರೀಕ್ಷಾ ಸಮಯದಲ್ಲಿಯೂ ಕೂಡಾ ಸಾರಿಗೆ ಸಂಸ್ಥೆಯ ಬಸ್‌ಗಳನ್ನು ನಿಲ್ಲಿಸದೇ ಇರುವ ಕುರಿತು ಆಕ್ರೋಶಗೊಂಡ ವಿದ್ಯಾರ್ಥಿಗಳು ಚಾಲಕನ ವಿರುದ್ಧ 2 ಗಂಟೆಗಳ ಕಾಲ ಪ್ರತಿಭಟನೆ ನಡೆಸಿದರು.

ತಾಲ್ಲೂಕಿನ ಕಮತನೂರ ಗ್ರಾಮದ ವಿದ್ಯಾರ್ಥಿಗಳು ಪರೀಕ್ಷೆಗೆ ತೆರಳುವ ಉದ್ದೇಶದಿಂದ ಬೇಗ ಬಸ್ ನಿಲ್ದಾಣಕ್ಕೆ ಬಂದಿದ್ದರೂ ಕೆ–ಎಸ್‌ಆರ್‌ಸಿ ಬಸ್ ಚಾಲಕ ಬಸ್ ನಿಲ್ಲಿಸದೇ ವೇಗವಾಗಿ ಹೋದರು. ಇದರಿಂದ ಕೆರಳಿದ ಮಕ್ಕಳು ಸುಮಾರು 2 ಗಂಟೆಗಳ ಕಾಲ ರಸ್ತೆ ತಡೆ ನಡೆಸಿದರು.

ಗ್ರಾಮದಿಂದ ವಿದ್ಯಾರ್ಥಿಗಳು ನಿಡಸೋಸಿ, ಮಜಲಟ್ಟಿ, ಚಿಕ್ಕೋಡಿಯ ಶಾಲಾ , ಕಾಲೇಜುಗಳಿಗೆ ಸರಿಯಾದ ಸಮಯಕ್ಕೆ ಹೋಗಲು ಅನುಕೂಲ ಆಗುತ್ತಿಲ್ಲ. ಪ್ರತಿನಿತ್ಯ ಈ ತೊಂದರೆ ಕುರಿತು ಗಮನ ಸೆಳೆದರೂ ಸಂಬಂಧಿಸಿದವರು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ದೂ–ರಿದರು.

ಬಸ್ ಖಾಲಿ ಇದ್ದರು ಸಹಿತ, ವಿದ್ಯಾರ್ಥಿಗಳಿಗೆ ಬಸ್ ನಿಲುಗಡೆ ಮಾಡುತ್ತಿಲ್ಲ, ಹಲವು ಬಾರಿ ಡಿಪೋ ಮ್ಯಾನೇಜರ್ ಅವರಿಗೆ ಮನವಿ ಮಾಡಿದ್ದೇವೆ. ಈ ಕುರಿತು ಚಾಲಕನ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

<u>ಹೆಸ್ಕಾಂ ಅಧ್ಯಕ್ಷರಾಗಿ ಸೈಯದ್ ಅಜ್ಜಂಪೀರ ಖಾದ್ರಿ ಅಧಿಕಾರ ಸ್ವೀಕಾರ</u>

## ಹೆಸ್ಕಾಂ ಇಲಾಖೆಯನ್ನು ಮಾದರಿ ಇಲಾಖೆಯನ್ನಾಗಿ ಮಾಡಲು ಪಣ -ಸೈಯದ್ ಅಜ್ಜಂಪೀರ ಖಾದ್ರಿ



ಹುಬ್ಬಳ್ಳಿ ನ.29: ಹೆಸ್ಕಾಂ ಇಲಾಖೆಯನ್ನು ಮಾದರಿ ಇಲಾಖೆಯನ್ನಾಗಿ ಮಾಡಲು ಪಣ ತೊಟ್ಟು ಕೆಲಸ ಮಾಡುತ್ತೇನೆ ಎಂದು ಸೈಯದ್ ಅಜ್ಜಂಪೀರ ಖಾದ್ರಿ ಹೇಳಿದರು.

ಇಂದು ನವನಗರದ ಹೆಸ್ಕಾಂ ಕಚೇರಿಯಲ್ಲಿ ಹೆಸ್ಕಾಂ ಅಧ್ಯಕ್ಷರಾಗಿ ಅಧಿಕಾರ ಸ್ವೀಕಾರ ಕಾರ್ಯಕ್ರಮದಲ್ಲಿ ಅಧಿಕಾರ ಸ್ವೀಕರಿಸಿದ ಬಳಿಕ ಅವರು ಮಾತನಾಡಿದರು.

ರೈತ ದೇಶದ ಬೆನ್ನೆಲುಬು. ರೈತರಿಗೆ ಸಮಯಕ್ಕೆ ಸರಿಯಾಗಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು. ಭಾರತ ದೇಶದಲ್ಲಿ ಗೃಹ ಜ್ಯೋತಿ ಯೋಜನೆ ಮಾದರಿಯಾಗಿದೆ. ಇಲಾಖೆ ಅಧಿಕಾರಿಗಳ ಸಹಕಾರ ತೆಗೆದುಕೊಂಡು ಕಾರ್ಯನಿರ್ವಹಿಸುತ್ತೇನೆ. ಹೆಸ್ಕಾಂ ವ್ಯಾಪ್ತಿಯ ಪ್ರದೇಶಗಳಿಗೆ ಸಂಚರಿಸಿ, ಸಮಸ್ಯೆಗಳನ್ನು ಪರಿಹರಿಸಲಾಗುವುದು. ನಮ್ಮ ಸರ್ಕಾರ ಬಡವರು, ರೈತರು ಮತ್ತು ಕೂಲಿ ಕಾರ್ಮಿಕರ ಪರವಾಗಿದೆ. ಹೆಸ್ಕಾಂ ಸಂಸ್ಥೆ ಒಳ್ಳೆಯ ಕೆಲಸ ಮಾಡುವ ಸಂಸ್ಥೆಯಾಗಿರುತ್ತದೆ. ನನಗೆ ನೀಡಿರುವ ಜವಾಬ್ದಾರಿಯನ್ನು ಅರಿತು ಕೆಲಸ ಮಾಡುತ್ತೇನೆ ಎಂದರು.

ವಿವಿಧ ಧರ್ಮಗಳ ಧರ್ಮ ಗುರುಗಳು ಆಶೀರ್ವಚನ ನೀಡಿದರು.

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ತಮ್ಮ ಕಚೇ–ರಿಯಲ್ಲಿ ಸೈಯದ್ ಅಜ್ಜಂಪೀರ ಖಾದ್ರಿ ಅವರು ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾದ ವೈಶಾಲಿ ಎಂ.ಎಲ್. ಅವ–ರಿಂದ ಅಧಿಕಾರ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಸಚಿವರಾದ ಸತೀಶ ಜಾರಕಿಹೊಳಿ, ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್ ಪಾಟೀಲ, ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರಾದ ಬಿ.ಝೆಡ್. ಜಮೀರ್ ಅಹ್ಮದ್ ಖಾನ್, ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಪ್ರಸಾದ್ ಅಬ್ಬಯ್ಯ, ಶಾಸಕರಾದ ಶ್ರೀನಿವಾಸ ಮಾನೆ, ಯಾಸೀರ್ ಖಾನ್ ಪಠಾಣ, ಮಾಜಿ ಸಚಿವರಾದ ಎ. ಎಂ.ಹಿಂಡಸಗೇರಿ, ಮಾಜಿ ಸಂಸದರಾದ ಪ್ರೊ.ಐ.ಜಿ.ಸನದಿ ಸೇರಿದಂತೆ ಹೆಸ್ಕಾಂ ಇಲಾಖೆಯ ಅಧಿಕಾರಿಗಳು ಇತರರು ಉಪಸ್ಥಿತರಿದ್ದರು.

## ಮುಗಳಖೋಡ ಶ್ರೀಮಠಕ್ಕೆ ಭೇಟಿ ನೀಡಿದ ಕುಲಪತಿಗಳು...



ಮುಗಳಖೋಡ: ಪಟ್ಟಣದ ಪವಾಡ ಪುರುಷ ಶ್ರೀ ಯಲ್ಲಾಲಿಂಗೇಶ್ವರ ಬೃಹನ್ ಮಠಕ್ಕೆ ಗುಜರಾತ್, ಅಲಿಗಡ, ಹಾಗೂ ತಮಿಳುನಾಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಸಂಜೀವ್ ಮಿಟ್ಟಲ್, ಡಾ. ಅಬ್ದುಲ್ ಅಲಿಮ್, ಡಾ. ವೆಂಕಟೇಶನ ರಾಮನಾಥನ್ ಸೇರಿದಂತೆ ಬೇರೆ ಬೇರೆ ವಿಶ್ವವಿದ್ಯಾಲಯಗಳ ಕುಲಪತಿಗಳು ಆಗಮಿಸಿ ಶ್ರೀ ಯಲ್ಲಾಲಿಂಗೇಶ್ವರ ಕರ್ತೃ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಿ ಶ್ರೀ ಡಾ. ಮುರುಘರಾಜೇಂದ್ರ ಮಹಾಸ್ವಾಮಿಗಳ ಆಶೀರ್ವಾದ ಪಡೆದುಕೊಂಡರು.

ಸಮೀಪದ ಮೂಡಲಗಿ ಶಿಕ್ಷಣ ಸಂಸ್ಥೆಯ ಮಹಾವಿದ್ಯಾಲಯಕ್ಕೆ ನ್ಯಾಕ್ ತಂಡದೊಂದಿಗೆ ಪರಿಶೀಲನೆಗಾಗಿ ಆಗಮಿಸಿದ ಅವರು ಮುಗಳಖೋಡ ಮಠಕ್ಕೆ ಭೇಟಿ ನೀಡಿ ಸತತ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಕೊಂಡು ಕಷ್ಟ ತೋಡಿ ಬಂದ ಭಕ್ತರಿಗೆ ಆಶೀರ್ವದಿಸಿ ಅವರ ಹಸಿವು ನೀಗಿಸುವ ಮಠ ಇದಾಗಿದೆ. ಅನ್ನ ದಾಸೋಹ, ಅಕ್ಷರ ದಾಸೋಹಗಳಂತ ಧಾರ್ಮಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಕ್ಷೇತ್ರಗಳಲ್ಲಿ ಮುರುಘರಾಜೇಂದ್ರ ಶ್ರೀಗಳ ಕೊಡುಗೆ ಅಪಾರವಾಗಿವೆ ಎಂದು ಚರ್ಚಿಸಿದರು.

ಶ್ರೀಗಳು ಆಗಮಿಸಿದ ಎಲ್ಲ ಅತಿಥಿಗಳನ್ನು ಶಾಲು ಹೊದಿಸಿ ಸತ್ಕಾರದಿಂದ ಗೌರವಿಸಿ ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಶ್ರೀ ವೀರಮಹಾಂತ ಶಿವಾಚಾರ್ಯ, ಸಿಪಿಐ ಅಲ್ಲಮಪ್ರಭು ಹಿರೇಗೌಡರ, ಮೂಡಲಗಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ವೆಂಕಟೇಶ್ ಸೋನವಾಲಕರ, ಪ್ರಾಧ್ಯಾಪಕರಾದ ಪ್ರೊ. ಎಸ್. ಬಿ. ಖೋತ, ಪ್ರೊ. ಎಸ್. ಎಲ್. ಚಿತ್ರಗಾರ, ಪ್ರೊ ಬಾಲಶೇಖರ್ ಬಂದಿ, ನ್ಯಾಯವಾದಿ ಮತ್ತು ಖ್ಯಾತ ನಿರೂಪಕ ಸೋಮು ಹೊರಟ್ಟಿ, ಶ್ರೀಮಠದ ಸೇವಾ ಸಮಿತಿ ಹಾಗೂ ಎಲ್ಲ ಕಾರ್ಯಕರ್ತರು ಉಪಸ್ಥಿತ–ರಿದ್ದರು.

## ಪೆಟ್ರೋಲ್ ಬಂಕ್ ಹಿಂದಯೆ ಇರುವ ಕಬ್ಬಿಗೆ ಹೊತ್ತಿದ್ದ ಬೆಂಕಿ ನಂದಿಸಲು ಪ್ರಯತ್ನಿಸುತ್ತಿರುವ ಗ್ರಾಮಸ್ಥರು

ಬೈಲಹೊಂಗಲ–ತಾಲೂಕಿನ ಉಡಿಕೇರಿ ಗ್ರಾಮದ ಬಸ್ ನಿಲ್ದಾಣದ ಬಳಿ ಇರುವ ಹೊಲದಲ್ಲಿ ಬೆಳೆದ ಕಬ್ಬಿನ ಬೆಳೆಗೆ ಶುಕ್ರವಾರ ಆಕಸ್ಮಿಕವಾಗಿ ವಿದ್ಯುತ್ ಶಾರ್ಟ ಸರ್ಕಿಟಗೊಂಡು ಸುಮಾರು 18 ಎಕರೆಯಲ್ಲಿ ಬೆಳೆದು ನಿಂತಿದ್ದ ಕಬ್ಬು ಸಂಪೂರ್ಣ ಸುಟ್ಟು ಭಸ್ಮವಾಗಿದೆ.

ಉಡಿಕೇರಿ ಗ್ರಾಮದ ಪ್ರಗತಿಪರ ರೈತ ಮಹಾಂತೇಶ ಪರಮೇಶ್ವರ ಗೂಳಪ್ಪನವರ ಅವರಿಗೆ ಸೇರಿದ ಹೊಲದಲ್ಲಿ ಬೆಳೆದ ಕಬ್ಬು ಎನ್ನಲಾಗಿದ್ದು ಅವಘಡದಿಂದ ಸುಮಾರು 45 ಲಕ್ಷ ರೂ ಮೌಲ್ಯದ ಕಬ್ಬು ಬೆಂಕಿಗಾಹುತಿಯಾಗಿದೆ. ಪೆಟ್ರೋಲ್ ಬಂಕ್ ಬಳಿಯೆ ಕಬ್ಬಿನ ಹೊಲವಿದ್ದು ಗ್ರಾಮಸ್ಥರ ಒಗ್ಗಟ್ಟಿನ ಹೋರಾಟದಿಂದ ಭಾರಿ ಅನಾಹುತ ತಪ್ಪಿದೆ.

ಅಗ್ನಿಶಾಮಕ ದಳದ ವಾಹನ ಬರುವವರೆಗೆ ಇಡೀ ಗ್ರಾಮದ ಮಹಿಳೆಯರು ಮಕ್ಕಳೆನ್ನದೆ ಪ್ರತಿಯೊಬ್ಬರು ತಮ್ಮ ಮಮನೆಗಳಲ್ಲಿನ ಕೊಡ ಬಿಂದಿಗೆ ಬಕೆಟ್‌ಗಳಲ್ಲಿನ ನೀರು ತುಂಬಿಕೊಂಡು ಬಂದು



ನೂರಾರು ರೈತರ ನೆರವಿನಿಂದ ಬೆಂಕಿ ನಂದಿಸಲು ಹರಸಾಹಸ ಪಟ್ಟಿದ್ದಾರೆ ಸವದತ್ತಿ ಬೈಲಹೊಂಗಲ ಕಿತ್ತೂರು ಅಗ್ನಿಶಾಮಕ ವಾಹನಗಳು ಬಂದು ಸ್ಥಳೀಯರ ನೆರವಿನಿಂದ ಬೆಂಕಿ ನಂದಿಸಿದ್ದಾರೆ

ಬೈಲಹೊಂಗಲ ಹೆಸ್ಕಾಂ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ ವರದಿ ಮಾಡಿಕೊಂಡಿದ್ದಾರೆ. ಈ ಕುರಿತು ದೊಡವಾಡ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿಗೆ ರೂ.100 ಕೋಟಿ ಮಂಜೂರು- ಜಗದೀಶ



**ಬೆಳಗಾವಿ:** 'ಸವದತ್ತಿಯ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದ ಅಭಿವೃದ್ಧಿಗೆ ಕೇಂದ್ರ ಪ್ರವಾಸೋದ್ಯಮ ಸಚಿವಾಲಯ ರೂ. 100 ಕೋಟಿ ಅನುದಾನ ಮಂಜೂರು ಮಾಡಿದೆ' ಎಂದು ಸಂಸದ ಜಗದೀಶ ಶೆಟ್ಟರ್ ಹರ್ಷ ವ್ಯಕ್ತಪಡಿಸಿದ್ದಾರೆ.

'ಕೇಂದ್ರ ಪ್ರವಾಸೋದ್ಯಮ ಸಚಿವಾಲಯದ 2024–25ನೇ ಸಾಲಿನ ಯೋಜನೆಯಡಿ ಈ ಅನುದಾನ ಸಿಗಲಿದೆ. ಕರ್ನಾಟಕದಲ್ಲಿ ಆಯ್ಕೆಯಾದ ಎರಡು ದೇವಸ್ಥಾನಗಳಲ್ಲಿ ಯಲ್ಲಮ್ಮ ದೇವಿ ದೇವಸ್ಥಾನವೂ ಒಂದಾಗಿದೆ. ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರನ್ನು ಇತ್ತೀಚೆಗೆ ಭೇಟಿಯಾಗಿ, ಈ ಯೋಜನೆಗೆ ಅನುಮೋದನೆ ನೀಡುವಂತೆ ಕೋರಿದ್ದೆ.

ಅದಕ್ಕೆ ಸ್ಪಂದಿಸಿ ಅನುಮೋದನೆ ಕೊಟ್ಟಿದ್ದಾರೆ' ಎಂದು ತಿಳಿಸಿದ್ದಾರೆ.

'ರೂ. 100 ಕೋಟಿ ಅನುದಾನದಿಂದ ದೇವಸ್ಥಾನದಲ್ಲಿ ಹೆಚ್ಚಿನ ಮೂಲಸೌಕರ್ಯ ಸೃಷ್ಟಿಯಾಗಲಿವೆ. ಭಕ್ತರಿಗೆ ಅನುಕೂಲವಾಗಲಿದೆ

# ದೆಹಲಿಯಲ್ಲಿ ಪ್ರಧಾನಿ ಮೋದಿ ಭೇಟಿಯಾದ ಸಿಎಂ ಸಿದ್ದರಾಮಯ್ಯ

**ನವದೆಹಲಿ:** ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶುಕ್ರವಾರದಂದು ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ್ದ, ಉಭಯ ನಾಯಕರು ಕುಶಲೋಪರಿ ವಿಚಾರಿಸಿದರು. ಇನ್ನು ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕರ್ನಾಟಕದ ಪ್ರಮುಖ ವಿಷಯಗಳ ಕುರಿತು ಚರ್ಚಿಸಿ ಅನುದಾನ ಒದಗಿಸುವಂತೆ ಮೋದಿಗೆ ಅವರಿಗೆ ಮನವಿ ಮಾಡಿದ್ದಾರೆ. ಅನುದಾನ, ಕರ್ನಾಟಕದ ನೀರಾವರಿ ಯೋಜನೆಗೆ ಸಂಬಂಧಿಸಿದಂತೆ ಮೋದಿ ಮುಂದೆ ಬೇಡಿಕೆ ಇಟ್ಟಿದ್ದಾರೆ.ನಬಾರ್ಡ್‌ನ ನೆರವು ಕಡಿತ ಮಾಡಿರುವುದನ್ನು ಸರಿಪಡಿಸಬೇಕು. ಭದ್ರಾ ಮೇಲ್ದಂಡೆ ಯೋಜನೆಗೆ ಈ ಹಿಂದೆ ಘೋಷಣೆ ಮಾಡಿದಂತೆ ಅನುದಾನವನ್ನು ಕೂಡಲೇ ಒದಗಿಸಬೇಕು.ಮಹದಾಯಿ ಸಹಿತ ಕರ್ನಾಟಕದ ನೀರಾವರಿ ಯೋಜನೆಗೆ ಅನುಮತಿ ಕೊಡಿಸಬೇಕು. ಕರ್ನಾಟಕದ ಎಲ್ಲಾ ಮಹಾನಗರಗಳ ಅಭಿವೃದ್ಧಿಗೆ ಪೂರಕವಾಗಿ ಅನುದಾನವನ್ನು ಒದಗಿಸಬೇಕೆಂದು ಮೋದಿಗೆ ಮನವಿ ಮಾಡಿದ್ದಾರೆ. ಇದಕ್ಕೆ ಪ್ರಧಾನಿ ಸಹ ಪೂರಕವಾಗಿಯೇ ಸ್ಪಂದಿಸಿದ್ದಾರೆ.

ಮೋದಿ ಮುಂದೆ ಸಿದ್ದರಾಮಯ್ಯ ಇಟ್ಟ 4 ಬೇಡಿಕೆಗಳಾವುವು?

ಇನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ಯಾವೆಲ್ಲಾ ಬೇಡಿಕೆ ಇಡಲಾಗಿದೆ ಎನ್ನುವ ಬಗ್ಗೆ ಹಂಚಿಕೊಂಡಿದ್ದು, ಅವು ಈ ಕೆಳಗಿನಂತಿವೆ.

ಅಲ್ಪಾವಧಿ ಬೆಳೆ ಸಾಲ ವಿತರಣೆಗೆ ಸಾಧ್ಯವಾಗುವಂತೆ ಪ್ರಸಕ್ತ ಸಾಲಿನಲ್ಲಿ ರಾಜ್ಯಕ್ಕೆ ಒದಗಿಸಿರುವ ನಬಾರ್ಡ್ ನೆರವು ಕಡಿತಗೊಳಿಸಿರುವುದರಿಂದ ರಾಜ್ಯದ ರೈತಾಪಿ ವರ್ಗ ಸಂಕಷ್ಟಕ್ಕೆ ಈಡಾಗಿದೆ. 2023–24ರ ಸಾಲಿನಲ್ಲಿ ರೂ.5600 ಕೋಟಿಗಳನ್ನು ಮಂಜೂರು ಮಾಡಲಾಗಿತ್ತು. 2024 –25ರ ಸಾಲಿನಲ್ಲಿ ರೂ. 2,340 ಕೋಟಿಗಳನ್ನು ಮಂಜೂರು ಮಾಡಲಾಗಿದೆ. ಇದರಿಂದಾಗಿ ನಬಾರ್ಡ್ ನೆರವು ಪ್ರಸಕ್ತ ಸಾಲಿನಲ್ಲಿ ಶೇ.58 ರಷ್ಟು ಕಡಿತವಾಗಿದೆ. ರಾಜ್ಯವು ಹೆಚ್ಚುವರಿ ಬಡ್ಡಿ ಸಹಾಯಧನವನ್ನು ನೀಡದ ಹೊರತು, ಇದು ರಾಜ್ಯದ ರೈತಾಪಿ ವರ್ಗದ ಆರ್ಥಿಕ ವೆಚ್ಚದ ಮೇಲೆ ಗಂಭೀರ ಪರಿಣಾಮ ಬೀರುವುದಲ್ಲದೆ, ರಾಜ್ಯದ ಆರ್ಥಿಕ ಸ್ಥಿತಿಯ ಮೇಲೂ ಪರಿಣಾಮ ಬೀರಲಿದೆ.




ಆದ್ದರಿಂದ ಈ ಕೂಡಲೇ ಇದನ್ನು ಪರಾಮರ್ಶಿಸಿ ನಬಾರ್ಡ್ ನೆರವು ಹೆಚ್ಚಿಸಲು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿದೆ. ರಾಜ್ಯದ ರೈತರು ಅಲ್ಪಾವಧಿ ಬೆಳೆ ಸಾಲಗಳನ್ನು ಪಡೆಯಲು ಯಾವುದೇ ರೀತಿಯ ತೊಂದರೆಯಾಗದಂತೆ ತಾವು ಹಣಕಾಸು ಸಚಿವಾಲಯಕ್ಕೆ ಸೂಕ್ತ ನಿರ್ದೇಶನ ನೀಡುವಂತೆ ಮನವಿ ಮಾಡಿದ್ದಾರೆ.

2. ಈ ಮೊದಲೇ ತಮ್ಮಲ್ಲಿ ಮನವಿ ಮಾಡಿರುವಂತೆ, ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ 2023–24 ರ ಕೇಂದ್ರ ಬಜೆಟ್ ನಲ್ಲಿ ಅನುಮೋದನೆಯಾಗಿರುವ ರೂ. 5300 ಕೋಟಿ ಅನುದಾನ ಬಿಡುಗಡೆ ಮಾಡುವ ಕೇಂದ್ರ ಹಣಕಾಸು ಸಚಿವರ ಭರವಸೆ ಈವರೆಗೆ ಈಡೇರಿಲ್ಲ. ತ್ವರಿತ ನೀರಾವರಿ ಲಾಭ ಕಾರ್ಯಕ್ರಮದಡಿ ನೆರವು ಒದಗಿಸಲು ಸಚಿವ ಸಂಪುಟದ ಟಿಪ್ಪಣಿಯನ್ನು ಸಿದ್ದಮಾಡಿರುವ ಬಗ್ಗೆ ತಿಳಿದುಬಂದಿದೆ. ಪ್ರಸಕ್ತ ಯೋಜನೆ ಶೀಘ್ರ ಅನುಮೋದನೆಗೊಂಡಲ್ಲಿ ಭದ್ರಾ ಮೇಲ್ದಂಡೆ ಯೋಜನೆ ವ್ಯಾಪ್ತಿಗೆ ಒಳಪಡುವ ಮಧ್ಯ ಕರ್ನಾಟಕದ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ಅನುಕೂಲವಾಗುತ್ತದೆ. ಆದ್ದರಿಂದ ಈ ಪ್ರಸ್ತಾವನೆಗೆ ಶೀಘ್ರ ಅನುಮೋದನೆ ನೀಡುವಂತೆ ಮೋದಿಗೆ ಮನವಿ ಮಾಡಿದ್ದಾರೆ. ಶುಷ್ಕ ವಲಯಕ್ಕೆ ಸೇರಿದ ಕರ್ನಾಟಕದಂತಹ ರಾಜ್ಯದಲ್ಲಿ ನೀರಾವರಿ ಸೌಲಭ್ಯ ಸಾಮರ್ಥ್ಯಗಳನ್ನು ಸಬಲಗೊಳಿಸುವುದು ಅತ್ಯಗತ್ಯವಾಗಿದೆ. ಈ ಕಾರ್ಯವನ್ನು ಬಹುತೇಕ ರಾಜ್ಯವು ತನ್ನ ಸಂಪನ್ಮೂಲಗಳಿಂದಲೇ ಭ–ರಿಸುತ್ತಿದೆ. ಆದರೆ, ಜಲ ಶಕ್ತಿ ಸಚಿವಾಲಯ ಹಾಗೂ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯಗಳಲ್ಲಿ ಯೋಜನೆಗಳ ತೀರುವಳಿ ಬಾಕಿ ಇರುವುದು ನಮ್ಮ ಯೋಜನೆಗಳನ್ನು ವಿಳಂಬ ಮಾಡಿದೆ. ಕಾವೇರಿ ನದಿ ಪಾತ್ರದ ಮೇಕೇದಾಟು ಯೋಜನೆ ಹಾಗೂ ಮಹದಾಯಿ ನದಿಯ ಕಳಸಾಬಂಡೂರಿ ಯೋಜನೆಗಳಗತ್ತ ತಾವು ತುರ್ತು ಗಮನ ಹರಿಸಬೇಕಿದೆ ಜಲಶಕ್ತಿ ಹಾಗೂ ಅರಣ್ಯ, ಪರಿಸರ ಸಚಿವಾಲಯಗಳಿಂದ ಶೀಘ್ರ ತೀರುವಳಿ ದೊರಕಿಸಿಕೊಡಲು ಕೋರಿದ್ದಾರೆ.

ಕೊನೆಯದ್ದಾಗಿ, 15ನೇ ಹಣಕಾಸು ಆಯೋಗ ಕರ್ನಾಟಕ ರಾಜ್ಯಕ್ಕೆ ಸರಿಯಾದ ನ್ಯಾಯ ಒದಗಿಸುತ್ತಿಲ್ಲ ಎಂದು ನಾವು ನಿರಂತರವಾಗಿ ಪ್ರಸ್ತಾಪಿಸುತ್ತಾ ಬಂದಿದ್ದೇವೆ. ತೆರಿಗೆ ಹಂಚಿಕೆಯಲ್ಲಿ ರಾಜ್ಯದ ಪಾಲನ್ನು ಶೇ.1ರಷ್ಟು ಕಡಿಮೆ ಮಾಡಿರುವ ಶಿಫಾರಸ್ಸನ್ನು ಹಣಕಾಸು ಇಲಾಖೆ ಸರಿಪಡಿಸಬೇಕಾಗಿದೆ. ಹಣಕಾಸು ಆಯೋಗವು ರಾಜ್ಯಕ್ಕೆ ಹಂಚಿಕೆ ಕಡಿಮೆಯಾಗಿರುವುದಕ್ಕೆ ಪರಿಹಾರವಾಗಿ ರೂ.5495 ಕೋಟಿ ಅನುದಾನ ಬಿಡುಗಡೆಗೆ ಮತ್ತು ಪೆರಿಫೆರಲ್ ರಿಂಗ್ ರಸ್ತೆ ಮತ್ತು ನೀರಿನ ಮೂಲಗಳ ಪುನರುಜ್ಜೀವನಕ್ಕೆ ರೂ.6ಸಾವಿರ ಕೋಟಿ ವಿಶೇಷ ಅನುದಾನ ನೀಡುವ ಬಗ್ಗೆ ಶಿಫಾರಸು ಮಾಡಿದೆ. ಕನಿಷ್ಟ ಪಕ್ಷ ಹಣ–ಕಾಸು ಆಯೋಗ ಈ ಎರಡು ಶಿಫಾರಸ್ಸುಗಳನ್ನು ಒಪ್ಪಿಕೊಳ್ಳಬೇಕಾಗಿದೆ.ನಾವು ಇನ್ನೂ 15ನೇ ಹಣ–ಕಾಸು ಆಯೋಗದ ಅವಧಿಯಲ್ಲಿರುವುದರಿಂದ ರಾಜ್ಯಕ್ಕೆ ಹೆಚ್ಚುವರಿ ಅನುದಾನ ಒದಗಿಸಲು ಹಣ–ಕಾಸು ಇಲಾಖೆಗೆ ನಿರ್ದೇಶನ ನೀಡುವಂತೆ ಪುನಃ ಕೇಳಿಕೊಂಡಿದ್ದಾರೆ.

# ಬಹುಮಾನ ಪಡೆದ ಫಂಡರಪೂರಿ ಗೌಳಿ ಎಮ್ಮೆ



ಬೈಲಹೊಂಗಲ– ಪಟ್ಟಣದಲ್ಲಿ ಶ್ರೀ ಮರಡಿ ಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಕೃಷಿಮೇಳ, ಜಾನುವಾರು ಪ್ರದರ್ಶನದಲ್ಲಿ ಬೆಳಗಾವಿಯ ಗಾಂಧಿ ನಗರದ ಫಂಡರಪೂರಿ ಗೌಳಿ ಎಮ್ಮೆ ರೈತರನ್ನು ಆಕರ್ಷಿಸಿತು.

ಪಶು ಪಾಲನೆಯನ್ನೆ ತಮ್ಮ ಉದ್ಯೋಗ ಮಾಡಿಕೊಂಡಿರುವ ಎಮ್ಮೆ ಮಾಲಿಕ ಪ್ರಕಾಶ ಸಂಪಗಾಂವಿ ಅವರ ಈ ಎಮ್ಮೆ ಪ್ರದರ್ಶನದಲ್ಲಿ ಮೊದಲ ಬಹುಮಾನ ಗಿಟ್ಟಿಸಿಕೊಂಡಿತು. ಎಮ್ಮೇಯನ್ನು ಅನೇಕ ರೈತರು 1 ಲಕ್ಷ 50 ಸಾವಿರದ ವರೆಗೂ ಬೆಲೆ ಕಟ್ಟಿ ಖರೀದಿಸಲು ಕೇಳಿದರೂ ಮಾಲಿಕ ಒಪ್ಪಲಿಲ್ಲ. ಪ್ರತಿ ದಿನದ ಮುಂಜಾನೆ, ಸಂಜೆ 6 ಲೀಟರ್ ಹಾಲು ನೀಡುವ ಈ ಎಮ್ಮೆಗೆ ತೊಗರಿ ನುಚ್ಚು, ಹತ್ತಿಕಾಳು ಹಿಂಡಿ ನೀಡಲಾಗುತ್ತಿದೆ. ಎಮ್ಮೆಯನ್ನು ಕುಟುಂಬದ ಸದಸ್ಯ ಎಂದು ಕಾಳಜಿವಹಿಸಿ ಸಾಕಲಾಗುತ್ತಿದೆ ಎಂದು ಮಾಲಿಕ ತಿಳಿಸಿದರು.

ಯಮಹ ಬೈಕ್ ಶಬ್ದಕ್ಕೆ ಅದರ ಹಿಂದೆ ಎಮ್ಮೆ ವೇಗವಾಗಿ ಒಡುವದನ್ನು ಕಂಡು ರೈತರು ಆನಂದಿಸಿದರು. ಎಮ್ಮೆಯನ್ನು ಶರ್ತಿಗೆ ಒಯ್ಯಲಾಗುತ್ತಿದ್ದು, ಅನೇಕ ಬಹುಮಾನ ಗಿಟ್ಟಿಸಿಕೊಂಡಿದೆ ಎಂದು ಮಾಲಿಕ ಪ್ರಕಾಶ ಸಂಪಗಾಂವಿ ತಿಳಿಸಿದರು.

# ತಾಲೂಕಿನ ಹತ್ತನೇ ಕನ್ನಡ ಸಾಹಿತ್ಯ ಸಮ್ಮೇಳನ



ಬಸವನಬಾಗೇವಾಡಿ: ನ. 27 ತಾಲೂಕಿನ ಸುಕ್ಷೇತ್ರ ಇವಣಗಿ ಗ್ರಾಮದಲ್ಲಿ ಡಿ.2 ರಂದು ಹಮ್ಮಿಕೊಂಡಿರುವ ಬಸವನಬಾಗೇವಾಡಿ ತಾಲೂಕಿನ ಹತ್ತನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಮನಗೂಳಿ ಪಟ್ಟಣದ ಸಾಹಿತಿ, ಶಿಕ್ಷಕ ಸಿದ್ದರಾಮ ಈರಗೊಂಡಪ್ಪ ಬಿರಾದಾರ ಅವರನ್ನು ಬುಧವಾರ ಸಂಜೆ ಸ್ಥಳೀಯ ಬಸವೇಶ್ವರ ದೇವಸ್ಥಾನ ಆವರಣದಲ್ಲಿರುವ ತಾಲೂಕು ಕಸಾಪ ಕಾರ್ಯಾಲಯದಲ್ಲಿ ಜರುಗಿದ ಆಯ್ಕೆ ಸಮಿತಿಯಲ್ಲಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಾಸಿಂಪೀರ ವಾಲೀಕಾರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಹತ್ತನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷತೆಗೆ ಎಂಟು ಸಾಹಿತಿಗಳು ಅರ್ಜಿ ಸಲ್ಲಿಸಿದ್ದರು. ಎಂಟು ಅರ್ಜಿಗಳನ್ನು ಆಯ್ಕೆ ಸಮಿತಿ ಪರಿಶೀಲನೆ ಮಾಡಿದಾಗ ಸಿದ್ದರಾಮ ಬಿರಾದಾರ ಉಳಿದ ಸಾಹಿತಿಗಳಿಗಿಂತ ಸಾಹಿತಿಕವಾಗಿ, ಶೈಕ್ಷಣಿಕವಾಗಿ ಸೇರಿದಂತೆ ಇತರೇ ವಿಷಯಗಳ ಕುರಿತು ಹೆಚ್ಚು ಪುಸ್ತಕಗಳನ್ನು ರಚಿಸಿದ್ದು ಪರಿಗಣಿಸಿ ಇವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಸಮ್ಮೇಳನ ಸರ್ವಾಧ್ಯಕ್ಷತೆಗೆ ಸಿದ್ದರಾಮ ಬಿರಾದಾರ ಅವರ ಹೆಸರನ್ನು ಹಾಸಿಂಪೀರ ವಾಲೀಕಾರ, ಶಿವು ಮಡಿಕೇಶ್ವರ,ಯಮನಪ್ಪ ಮಿಣಜಗಿ ಸೂಚಿಸಿದರು. ತಾಲೂಕು ಕಸಾಪ ಗೌರವಾಧ್ಯಕ್ಷ ಬಸವರಾಜ ಸೋಮಪುರ, ತಾಲೂಕು ಕಸಾಪ ಅಧ್ಯಕ್ಷ ಶಿವಾನಂದ ಡೋಣೂರ, ತಾಲೂಕು ಕಸಾಪ ಮಾಜಿ ಅಧ್ಯಕ್ಷ ಆರ್.ಜಿ.ಅಳ್ಳಗಿ ಅನುಮೋದಿಸಿದರು. ಎಸ್.ಎಲ್.ಓಂಕಾರ, ಬಸವರಾಜ ಮೇಟಿ ಅಂಗೀಕ–ರಿಸಿದರು. ಸಭೆಯಲ್ಲಿ ಆಯ್ಕೆ ಸಮಿತಿ ಸದಸ್ಯರಾದ ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಡಾ.ಮಾಧವ ಗುಡಿ, ವಕೀಲರಾದ ವೀರಣ್ಣ ಮರ್ತುರ, ರವಿ ರಾಠೋಡ, ಚಂದ್ರಶೇಖರ ಸುಭಾನಪ್ಪರ, ಜಿಲ್ಲಾ ದತ್ತಿ ಸಂಚಾಲಕ ರಾಜೇಸಾಬ ಶಿವನಗುತ್ತಿ, ಎಂ.ಎನ್.ಅಂಗಡಗೇರಿ, ಶಾಂತಾ ಚೌರಿ, ಬಿ.ವ್ಹಿ.ಚಕ್ರಮನಿ ಇತರರು ಇದ್ದರು ಎಂದು ಹಾಸಿಂಪೀರ ವಾಲೀಕಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಗಸಿ ದ್ವಾರ ಬಾಗಿಲು ನಿರ್ಮಾಣ ಕಾಮಗಾರಿಯ ಭೂಮಿ ಪೂಜೆ ಕಾರ್ಯಕ್ರಮ



ಸಿಂದಗಿ: ಸಿಂದಗಿ ಪಟ್ಟಣವನ್ನು ಅತ್ಯಂತ ಸೌಂದರ್ಯೀಕರಣಗೊಳಿಸಲು ಮತ್ತು ಧೂಳ ಮುಕ್ತ ನಗರವನ್ನಾಗಿ ಮಾಡಲು ನಾನು ಪಣ ತೊಟ್ಟಿದ್ದೇನೆ. ಸಾರ್ವಜನಿಕರ ಸಹಕಾರ ಅತ್ಯಂತ ಅಗತ್ಯವಾಗಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ಪಟ್ಟಣದ ಮೋರಟಗಿ ರಸ್ತೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಜಯಪುರ ಅನುಷ್ಠಾನ ಕೆ.ಆರ್.ಐ.ಡಿ.ಎಲ್. ಸಿಂದಗಿ 2023–24 ನೇ ಸಾಲಿನ ಮುಖ್ಯ ಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ಅಂದಾಜು ರೂ 25 ಲಕ್ಷಗಳಲ್ಲಿ ವಿಜಯಪುರ ಜಿಲ್ಲೆಯ ಸಿಂದಗಿ ನಗರದ ಅಗಸಿ ದ್ವಾರ ಬಾಗಿಲು ನಿರ್ಮಾಣ ಕಾಮಗಾರಿಗೆ ಬುಧವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಸಿಂದಗಿ ಜನತೆಯ ಬಹುದಿನದ ಬೇಡಿಕೆಯಾಗಿರುವ ಅಗಸಿ ಮಹದ್ವಾರ ಬಾಗಿಲು ಅತ್ಯಂತ ಅಚ್ಚುಕಟ್ಟಾಗಿ ನಿರ್ಮಾಣಗೊಳ್ಳಲಿದೆ. ಮುಂಬರುವ ದಿನಗಳಲ್ಲಿ ಪಟ್ಟಣದ ಎಲ್ಲ ರಸ್ತೆಗಳನ್ನು ಅಭಿವೃದ್ಧಿಪಡಿಸುವುದು, 24*7 ನೀರಿನ ಯೋಜನೆ, ರಸ್ತೆಯ ವಿದ್ಯುತ್ ಕಂಬಗಳ ನಿರ್ಮಾಣ ಸೇ–ರಿದಂತೆ ಹಲವು ಮೂಲಭೂತ ಯೋಜನೆಗಳನ್ನು ಹಮ್ಮಿಕೊಂಡಿದ್ದೇವೆ ಎಂದರು.

ಇದೇ ಸಂದರ್ಭದಲ್ಲಿ ಉಜ್ಜಯಿನಿ ಸದ್ಧರ್ಮ ಸಿಂಹಾಸನದೀಶ್ವರ ಪೂಜ್ಯಶ್ರೀ ಜಗದ್ಗುರು ಡಾ. ಸಿದ್ದಲಿಂಗರಾಜ ದೇಶಕೇಂದ್ರ ಶಿವಾಚಾರ್ಯ ಭಗವದ್ಪಾದಂಗಳವರು ಸಾನಿಧ್ಯ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಕೊಣ್ಣೂರು ಹೊರಗಿನ ಮಠದ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು, ಸಿಂದಗಿ ಊರಿನ ಹಿರೇಮಠದ ಪೂಜ್ಯಶ್ರೀ ಶಿವಾನಂದ ಶಿವಾಚಾರ್ಯರು, ಕನ್ನೊಳ್ಳಿ ಹಿರೇಮಠದ ಪೂಜಶ್ರೀ ಸಿದ್ದಲಿಂಗ ಶಿವಾಚಾರ್ಯರು, ಆದಿಶೇಷ ಸಂಸ್ಥಾನ ಹಿರೇಮಠದ ರಾಜಯೋಗಿ ನಾಗರತ್ನ ವಿರಾಜೇಂದ್ರ ಮಹಾಸ್ವಾಮಿಗಳು,

ಪುರಸಭೆ ಅಧ್ಯಕ್ಷ ಶಾಂತವೀರ ಬಿರಾದಾರ, ಉಪಾಧ್ಯಕ್ಷ ರಾಜಣ್ಣ ನಾರಾಯಣಕರ, ಅಶೋಕ ವಾರದ, ಸೋಮನಗೌಡ ಬಿರಾದಾರ, ಶ್ರೀಕಾಂತ್ ಬ್ಯಾಕೋಡ, ಬಸವರಾಜ ಯರನಾಳ, ಸಾಯಬಣ್ಣ ಪುರದಾಳ, ಸೈಪನ್ ನಾಟೀಕಾರ, ಶರಣು ಶ್ರೀಗಿರಿ, ಕಾಂತಪ್ಪ ಅಂಬಲಗಿ, ರವಿ ನಾಗೂರ, ಸುನೀಲ ಹಳ್ಳೂರ, ಮಲ್ಲಿಕಾರ್ಜುನ್ ಬಮ್ಮಣ್ಣಿ, ಚನ್ನು ಪಟ್ಟಣಶೆಟ್ಟಿ, ಬಾಬು ಕಮತಗಿ, ಸಂಗನಬಸು ಬಿರಾದಾರ, ಅಜರ್ ನಾಟೀಕಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ರಾಷ್ಟ್ರೀಯ ಮತದಾರರ ದಿನಾಚರಣೆ: ವಿವಿಧ ಸ್ಪರ್ಧೆಗಳು

ಬೆಳಗಾವಿ : ಪ್ರೌಢ ಶಾಲಾ ಮಕ್ಕಳಿಗೆ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಶುಕ್ರವಾರ (ನ.29) ವಿವಿಧ ಸ್ಪರ್ಧೆಯನ್ನು ಏರ್ಪಡಿಸಲಾಗಿ–ತ್ತು. ಜಿಲ್ಲಾ ನೋಡಲ್ ಅಧಿಕಾರಿಗಳಾದ ರವಿ ಏನ್ ಬಂಗಾರಪ್ಪನವರ ಅವರು ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿದರು.

ಜಿಲ್ಲೆಯ ಎಲ್ಲ ತಾಲೂಕಿನ ಒಟ್ಟು 164 ವಿದ್ಯಾರ್ಥಿಗಳು ಕಾರ್ಯಕ್ರದಲ್ಲಿ ಭಾಗವಹಿಸಿ ರಸಪ್ರಶ್ನೆ, ನಿಬಂಧ, ಭಿತ್ತಿಚಿತ್ರ ಸ್ಪರ್ಧೆಯಲ್ಲಿ ಬಹುಮಾನ ಹಾಗೂ ಪ್ರಶಸ್ತಿಯನ್ನು ಪಡೆದುಕೊಂಡರು.

ಬೈಲಹೊಂಗಲ ತಾಲೂಕಿನ ಚಿಕ್ಕಬಾಗೇವಾಡಿಯ ಸರಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿ ಸುಕನ್ಯಾ ಹುಬ್ಬಳ್ಳಿ, ಚಂದ್ರಕಾಂತಿ ತುಳೋಜಿ ಅವರು ರಸಪ್ರಶ್ನೆಯಲ್ಲಿ ಪ್ರಥಮ ಸ್ಥಾನ ಪಡೆದರು. ಹುಲ್ಲೊಳ್ಳಿಯ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ಭರತೇಶ ಚೌಗಲಾ ಬಿತ್ತಿಚಿತ್ರದಲ್ಲಿ ಪ್ರಥಮ ಸ್ಥಾನ ಹಾಗೂ ಅರ್ಚನಾ ಚೌಗಲಾ ಅವರ ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದರು. ಸವದತ್ತಿಯ ಸ್ವಾಮಿ ವಿವೇಕಾನಂದ ಪ್ರೌಢ ಶಾಲೆಯ ಸೃಷ್ಟಿ ಪೆಂಡೆದ ಇಂಗ್ಲಿಷ್ ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಕಾರ್ಯಕ್ರಮದಲ್ಲಿ ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ಜಿ. ಎಮ್. ಸಯ್ಯದ್, ಎನ್. ಎಂ. ಮದನಬಾವಿ, ವಿಷಯ ಪರಿವೀಕ್ಷಕರಾದ ಜಿ.ಎಸ್. ಕಂಬಳಿ, ಆರ್. ಎ. ದೇವರುಷಿ, ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಾದ ಎಂ. ಬಿ. ಪಾಟೀಲ, ಅಪರ್ಣಾ ಕಡಬಿ, ಬಿ. ವಿ. ಅಡಿವರ್, ಶಿಕ್ಷಕರು ಭಾಗವಹಿಸಿದರು.

# ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಬಸವನಬಾಗೇವಾಡಿಯಿಂದ ಬ್ಯಾಲ್ಯಾಳದವರೆಗೂ ಬಸ್ ವ್ಯವಸ್ಥೆ ಕಲ್ಪಿಸುವಂತೆ ರೈತ ಸಂಘದಿಂದ ಮನವಿ



**ಬಸವನಬಾಗೇವಾಡಿ,** : ಪಟ್ಟಣದಿಂದ ನಿಡಗುಂದಿ ತಾಲೂಕಿನ ಬ್ಯಾಲ್ಯಾಳ ಗ್ರಾಮದವರೆಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಬಸ್ ವ್ಯವಸ್ಥೆ ಕಲ್ಪಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ನೇತೃತ್ವದಲ್ಲಿ ವಿದ್ಯಾರ್ಥಿಗಳು ಗುರುವಾರ ಸ್ಥಳೀಯ ಬಸ್ ಡಿಪೋ ವ್ಯವಸ್ಥಾಪಕ ಬಿ.ಬಿ.ಚಿತ್ತವಾಡಗಿ ಅವರಿಗೆ ಮನವಿ ಸಲ್ಲಿಸಿದರು.

ಅವರು ಸಲ್ಲಿಸಿದ ಮನವಿಯಲ್ಲಿ ಪಟ್ಟಣದಿಂದ ತಾಲೂಕಿನ ಇವಣಗಿ, ಹಂಚಿನಾಳ, ನರಸಲಗಿ, ನರಸಲಗಿ ತಾಂಡಾ, ಅಂಬಳನೂರ, ಅಂಬಳನೂರ ತಾಂಡಾ, ಕಣಕಾಲ ಮಾರ್ಗವಾಗಿ ನಿಡಗುಂದಿ ತಾಲೂಕಿನ ಬ್ಯಾಲ್ಯಾಳ ಗ್ರಾಮದವರೆಗೂ ಸರಿಯಾದ ಸಮಯಕ್ಕೆ ಸರಿಯಾದ ಬಸ್ ವ್ಯವಸ್ಥೆ ಇಲ್ಲದ ಕಾರಣದಿಂದಾಗಿ ಈ ಗ್ರಾಮಗಳಿಂದ ಬಸವನಬಾಗೇವಾಡಿಯ ವಿವಿಧ ಶಾಲಾ–ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಶಾಲಾ–ಕಾಲೇಜುಗಳಿಗೆ ಸರಿಯಾದ ಸಮಯಕ್ಕೆ ಬಾರದಂತಾಗಿದೆ. ಇದ–ರಿಂದಾಗಿ ಅವರೆಲ್ಲರೂ ಶಿಕ್ಷಣದಿಂದ ವಂಚಿತರಾಗುವ ಪರಿಸ್ಥಿತಿ ಇದೆ. ಅದರಲ್ಲೂ ವಿದ್ಯಾರ್ಥಿನಿಯರಿಗೆ ತುಂಬಾ ತೊಂದರೆಯಾಗುತ್ತಿದೆ. ಬಸ್ ಘಟಕ ವ್ಯವಸ್ಥಾಪಕರು ಈ ಮಾರ್ಗವಾಗಿ ಬೆಳಗ್ಗೆ ಎಂಟು ಗಂಟೆಗೆ, ಮಧ್ಯಾಹ್ನ ಎರಡು ಗಂಟೆಗೆ , ಸಂಜೆ 5 ಗಂಟೆಗೆ ಬಸ್ ವ್ಯವಸ್ಥೆ ಕಲ್ಪಿಸುವ ಮೂಲಕ ಈ ಗ್ರಾಮಗಳಿಂದ ಬಸವನಬಾಗೇವಾಡಿಗೆ ಬರುವ ವಿದ್ಯಾರ್ಥಿಗಳಿಗೆ ತುಂಬಾ ಅನುಕೂಲ ಮಾಡಿಕೊಟ್ಟಂತಾಗುತ್ತದೆ. ಕೂಡಲೇ ಬಸ್ ಘಟಕ ವ್ಯವಸ್ಥಾಪಕರು ಬಸವನಬಾಗೇವಾಡಿಯಿಂದ ಇವಣಗಿ, ಹಂಚಿನಾಳ, ನರಸಲಗಿ,ಕಣ–ಕಾಲ ಮಾರ್ಗವಾಗಿ ಬ್ಯಾಲ್ಯಾಳ ಗ್ರಾಮದವರೆಗೂ ಬಸ್ ವ್ಯವಸ್ಥೆ ಕಲ್ಪಿಸಬೇಕೆಂದು ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮನಗೌಡ ಪಾಟೀಲ, ತಾಲೂಕು ಅಧ್ಯಕ್ಷ ಪರಶುರಾಮ ಅಡಗಿಮನಿ, ಮುಖಂಡರಾದ ಅರುಣ ಚಲವಾದಿ, ವಿದ್ಯಾರ್ಥಿಗಳಾದ ದ್ಯಾಮನಗೌಡ ಪಾಟೀಲ, ಗಣೇಶ ಹಿರೇಮಠ, ವಿನೋದ ಪಾಟೀಲ, ಅವ್ವಣ್ಣ ಮಾದರ, ವಿಜಯ ಹಿರೇಮಠ, ಗಾಯತ್ರಿ ಸಜ್ಜ, ಪೂಜಾ ಬಡಿಗೇರ, ಭೂಮಿಕಾ ಕೋಲಕಾರ, ಮಂಜುಳಾ ಹಿರೇಕುರಬರ, ನಿಖಿತಾ ಪಾಟೀಲ,ಅವ್ವಮ್ಮ ಕೋಳೂರ, ಶಿಲ್ಪಾ ಕೋಳೂರ, ರಮೇಶ ಚಲವಾದಿ, ಪವಿತ್ರಾ ಮಾದರ, ಬೋರಮ್ಮ ಕೋಳೂರ, ಪ್ರಿಯಾಂಕ ಗ್ವಾತಗಿ, ಅಕ್ಷತಾ ಪಾಟೀಲ ಇತರರು ಇದ್ದರು.

# ಪುರಾಣ ಪ್ರವಚನ ಕಾರ್ಯಕ್ರಮ



ಸಿಂದಗಿ: ತಾಲೂಕಿನ ಯಂಕಂಚಿ ಗ್ರಾಮದ ಕುಂಟೋಜಿ ಹಿರೇಮಠದಲ್ಲಿ ಲಿಂ. ರುದ್ರಮುನಿ ಶಿವಾಚಾರ್ಯರ 47ನೇ ಪುಣ್ಯಾರಾಧನೆ ನಿಮಿತ್ತ ನಂ. 28 ರಿಂದ ಡಿ.9 ರವರೆಗೆ ಪ್ರತಿದಿನ ರಾತ್ರಿ 8 ಗಂಟೆಗೆ ಉಜ್ಜಯಿನಿ ಶ್ರೀಮದ್ ಸಿದ್ದಲಿಂಗ ಜಗದ್ಗುರುಗಳ ಪುರಾಣ ಪ್ರವಚನ ಕಾರ್ಯಕ್ರಮ ಜರುಗಲಿದೆ.

ಡಿ.28ರ ಪುರಾಣ ಪ್ರಾರಂಭೋತ್ಸವದ ದಿವ್ಯ ಸಾನಿಧ್ಯವನ್ನು ಮುಧೋಳ ಗಂಜಿಗಟ್ಟಿ ಶ್ರೀಮಠದ ಡಾ. ವೈಜನಾಥ ಶಿವಲಿಂಗ ಶಿವಾಚಾರ್ಯರು, ಮಳ್ಳಿಯ ರುದ್ರಮುನಿ ಶಿವಾಚಾರ್ಯರು ವಹಿಸಿಕೊಳ್ಳುವರು. ಕಾರ್ಯಕ್ರಮದ ನೇತೃತ್ವವನ್ನು ರೋಡಗಿ ವಿರಕ್ತಮಠದ ಅಭಿನವ ಶಿವಲಿಂಗೇಶ್ವರ ಸ್ವಾಮಿಗಳು, ಕಡಕೋಳ ಹಿರೇಮಠದ ರಾಜಗುರು ಮಹಾಲಿಂಗ ಸ್ವಾಮಿಗಳು,ಕೋರವಾರ ಚೌಕಿಮಠದ ಸದ್ಗುರು ಶಂಕರಾ ನಂದ ಮಹಾಸ್ವಾಮಿಗಳು ವಹಿಸಿಕೊಳ್ಳಲಿದ್ದಾರೆ. ಚಳಕಾಪುರ ಸಿದ್ಧಾರೂಢ ಮಠದ ಸದ್ಗುರು ಶಂಕರಾನಂದ ಮಹಾಸ್ವಾಮಿಗಳು, ನಾಲತವಾಡ ಹಿರೇಮಠದ ಶ್ರೀಗಳು, ಖಾನಾಪುರ ಶ್ರೀಮಠದ ಶ್ರೀಗಳು, ಹೊನ್ನಳ್ಳಿ ಶ್ರೀಮಠದ ಶ್ರೀಗಳು, ಅಲ್ಲಾಪುರ್ ಶ್ರೀ ಮಠದ ಶ್ರೀಗಳು ಸಮ್ಮುಖ ವಹಿಸಲಿದ್ದಾರೆ. ಕಾರ್ಯಕ್ರಮವನ್ನು ಉದ್ದಿಮೆದಾರ ವೆಂಕಟೇಶ ಗುತ್ತೇದಾರ, ಚಿಕ್ಕರೂಗಿ ಈರಣ್ಣ ಶಾಸ್ತ್ರಿಗಳು ನೆರವೇರಿಸಲಿದ್ದಾರೆ. ಪುರಾಣ ಪ್ರವಚನವನ್ನು ಅಮರೇಶ್ವರ ಶಾಸ್ತ್ರಿಗಳು ಉಣಬಡಿಸುವರು. ಸಂಗೀತ ಸೇವೆಯನ್ನು ಪಡದಳ್ಳಿ ಕಲ್ಲಯ್ಯ ಸ್ವಾಮಿಗಳು, ತಬಲಾ ಸೇವೆಯನ್ನು ಪ್ರಾಣೇಶ ಯಡ್ರಾಮಿ ನಡೆಸಿಕೊಡುವರು ಎಂದು ಯಂಕಂಚಿ ಶ್ರೀಮಠದ ಪೀಠಾಧಿಪತಿ ಅಭಿನವ ರುದ್ರಮುನಿ ಶಿವಾಚಾರ್ಯರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಇಲಾಖೆಯ ಅಧಿಕಾರಿಗಳ ಸಭೆ



**ಸಿಂದಗಿ:** ಒಳಚರಂಡಿ ಕಾಮಗಾ–ರಿಗೆ ನೀಡಿದ ಅವಧಿ ಮುಗಿದರು ಕಾಮಗಾರಿ ಇದುವರೆಗೆ ಪೂರ್ಣಗೊಂಡಿಲ್ಲ. ಅವರಿಗೆ ನೋಟೀಸ್ ನೀಡಿ ಎಂದು ಈಗಾಗಲೇ ತಿಳಿಸಿದರು ಯಾವುದೇ ಕ್ರಮ ಜರುಗಿಸಿಲ್ಲ. ನಿಮಗೆ ಯಾವುದಾದದರೂ ತೊಂದರೆಗಳಿದ್ದರೆ ನಮ್ಮ ಗಮನಕ್ಕೆ ತನ್ನಿ ಆಟಕ್ಕುಂಟು ಲೆಕ್ಕಕ್ಕಿಲ್ಲ ಎಂಬಂತೆ ಕಾಮಗಾರಿ ಮಾಡಿದರೇ ಆಗದು ಎಂದು ಒಳಚರಂಡಿ ಇಲಾಖೆಯ ಅಧಿಕಾರಿ ಎಂ.ಎಲ್. ಹೋನಕಟ್ಟಿ ಅವರಿಗೆ ಪುರಸಭೆ ಅಧ್ಯಕ್ಷ ಶಾಂತವೀರ ಬಿರಾದಾರ ಎಚ್ಚರಿಸಿದರು.

ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಪುರಸಭೆ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಹಮ್ಮಿಕೊಂಡ ವಿವಿಧ ಇಲಾಖೆಯ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ರಸ್ತೆ ಅತಿಕ್ರಮಣ ತೆರವು ಕಾರ್ಯಾಚರಣೆ ಮಾಡಲಾಗಿದೆ. ನೀವು ಅಂದು ಎಲ್ಲಿಗೆ ರಸ್ತೆ ಇದೆಯೋ ಅದರ ಪಕ್ಕದಲ್ಲಿ ಅರಣ್ಯ ಇಲಾಖೆ ಗಿಡಗಳು ಹಚ್ಚಿದರೇ, ವಿದ್ಯುತ್ ಇಲಾಖೆಯವರು ವಿದ್ಯುತ್ ಕಂಬಗಳು ಪಕ್ಕದಲ್ಲಿ ಹಾಕಿದ್ದಾರೆ. ಹಾಕುವ ಮುಂಚೆ ಯೋಚಿಸಿದರೇ ಇಂದು ರಸ್ತೆ ಮಧ್ಯದಲ್ಲಿ ಕಂಬಗಳು ಬರುತ್ತಿರಲಿಲ್ಲ. ಇದೀಗ ರಸ್ತೆಯ ಮೇಲಿರುವ ಕಂಬಗಳನ್ನು ಸ್ಥಳಾಂತರಿಸಬೇಕಾದರೆ ಅದಕ್ಕೆ ಪುರಸಭೆ ಹಣ ಪಾವತಿಸಬೇಕು ಎನ್ನುತೀರಿ ಆದರೆ ಕಂಬಗಳ ಸ್ಥಳಾಂತರಿಸಲು ಸುಮಾರು 50–60ಲಕ್ಷ ರೂ. ಕಟ್ಟಬೇಕಾಗುತ್ತದೆ ಅಷ್ಟೊಂದು ಆದ–ಾಯ ಪುರಸಭೆ ಹೊಂದಿಲ್ಲ. ನಮ್ಮ ಬಜೆಟ್ ನಲ್ಲಿ ಜನರಿಗೆ ಮೂಲಭೂತ ಸೌಕರ್ಯ ನೀಡಬೇಕಾಗಿದೆ ನೀವು ಆದಾಯಕ್ಕಿಂತಲೂ ಹೆಚ್ಚಿನ ಹಣ ವಿದ್ಯುತ್ ಇಲಾಖೆಗೆ ಕಟ್ಟುವುದು ಹೇಗೆ ನೀವು ಮಾಡಿರುವ ತಪ್ಪಿಗೆ ಪುರಸಭೆಗೆ ಹೊರೆ ಹಾಕುವುದು ಸರಿಯಲ್ಲ. ಪುರಸಭೆ ವತಿಯಿಂದ ಜೆಸಿಬಿ ವಾಹನ ಸೌಲಭ್ಯ ಒದಗಿಸುತ್ತೇವೆ. ಅರಣ್ಯ ಇಲಾಖೆಯ ಗಿಡಗಳು ಮತ್ತು ವಿದ್ಯುತ್ ಕಂಬಗಳು ಸ್ಥಳಾಂತರ ಮಾಡಿ ಕೊಡಿ ಎಂದು ತಿಳಿಸಿದರು.

ಪುರಸಭೆ ಚೆಕ್ ಗಳು ಬೇಕಾಬಿಟ್ಟಿಯಾಗಿ ಸಂದಾಯವಾಗುತ್ತಿವೆ ಅಧ್ಯಕ್ಷರು ಹಾಗೂ ಮುಖ್ಯಾಧಿಕಾರಿಗಳ ಗಮನಕ್ಕೆ ಬರುತ್ತಿಲ್ಲವೇ ಎಂಬ ಮಾತುಗಳು ಕೇಳಿಬರುತ್ತಿವೆ ಎಂಬ ವರದಿಗಾರರ ಪ್ರಶ್ನೆಗೆ ಪುರಸಭೆಯ ಮುಖ್ಯಾಧಿಕಾರಿ ಎಸ್. ರಾಜಶೇಖರ ಉತ್ತರಿಸಿದ ಅವರು, ಹಾಗೆ ಆಗಲು ಸಾಧ್ಯವಿಲ್ಲ. ಒಂದು ವೇಳೆ ಬೋಗಸ್ ಚೆಕ್ ಇದ್ದರೇ ಅವರು ಮೇಲೆ ಸೂಕ್ತ ಕ್ರಮ ಜರುಗಿಸಲಾಗುವುದು. ಮತ್ತು ಸಂಭಂದಿಸಿದ ಬ್ಯಾಂಕಗಳೊಂದಿಗೆ ಈಗಾಗಲೇ ಒಂದು ಸುತ್ತಿನ ಮಾತುಕತೆ ಮಾಡಲಾಗಿದೆ ಎಂದು ಹೇಳಿದರು.

******

# ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ವಿಧಾನಸಭೆ ಮುಖ್ಯ ಸಚೇತಕ ಅಶೋಕ ಪಟ್ಟಣ ಚಾಲನೆ



ರಾಮದುರ್ಗ: ರಾಮದುರ್ಗ ಪಟ್ಟಣ ಸೇರಿದಂತೆ ಮತಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ರಾಜ್ಯ ಸರಕಾರದಿಂದ ಅಗತ್ಯ ಅನುದಾನ ಮಂಜೂರು ಮಾಡಿಸಿ, ಅಭಿವೃದ್ಧಿಗೆ ಶ್ರಮಿಸುತ್ತೇನೆ. ಜನಪರ ಕೆಲಸಗಳಿಗೆ ಜನತೆ ಸಹಕಾರ ನೀಡಬೇಕು ಎಂದು ವಿಧಾನಸಭೆ ಮುಖ್ಯ ಸಚೇತಕ ಹಾಗೂ ಶಾಸಕ ಅಶೋಕ ಪಟ್ಟಣ ಭರವಸೆ ನೀಡಿದರು.

ತಾಲೂಕಿನ ಹಿರೇಕೊಪ್ಪ ಕೆ.ಎಸ್ ಗ್ರಾಮದಲ್ಲಿ 2 ಕೋಟಿ ವೆಚ್ಚದಲ್ಲಿ ಸಣ್ಣ ನೀರಾವರಿ ಇಲಾಖೆಯ ಅನುದಾನದ ಅಡಿಯಲ್ಲಿ ಖಬರಸ್ಥಾನದ ಹತ್ತಿರ ಇರುವ ಹಳ್ಳಕ್ಕೆ ಬ್ರೀಡ್ಜ್ ಕಂ. ಬ್ಯಾರೇಜ ನಿರ್ಮಾಣ, ರಾಮದುರ್ಗ ಪುರಸಭೆ ವ್ಯಾಪ್ತಿಯ ಭಾಗ್ಯನಗರದಲ್ಲಿ 1 ಕೋಟಿ ವೆಚ್ಚದಲ್ಲಿ ರಸ್ತೆ ಸುಧಾರಣೆ ಕಾಮಗಾರಿಗಳಿಗೆ ಶುಕ್ರವಾರ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಮತ ಕ್ಷೇತ್ರದ ಸಂಪೂರ್ಣ ಅಭಿವೃದ್ಧಿ ಕಾಮಗಾರಿಗಳ ಬಗೆಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದೇನೆ.

ಹಂತ ಹಂತವಾಗಿ ಸರಕಾರದಿಂದ ಅನುದಾನ ಮಂಜೂರಾದ ತಕ್ಷಣ ಎಲ್ಲಾ ಕಾಮಗಾರಿಗಳನ್ನು ಕೈಗೊಳ್ಳುತ್ತೇನೆ. ಸರಕಾರದಿಂದ ದೊರೆತ ಅನುದಾನ ಸದ್ಬಳಕೆಯಾಗಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಗುತ್ತಿಗೆದಾರ–ರಿಂದ ಗುಣಮಟ್ಟದ ಕಾಮಗಾರಿ ಮಾಡಿಸಿಕೊಳ್ಳಬೇಕು. ಗ್ರಾಮೀಣ ಹಾಗೂ ಪಟ್ಟಣ ಪ್ರದೇಶದ ಜನತೆ ಗುತ್ತಿಗೆದಾರರಿಗೆ ಸಹಕಾರ ನೀಡಿ, ಗುಣಮಟ್ಟದ ಕಾಮಗಾರಿ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಹಿರೇಕೊಪ್ಪ ಕೆ.ಸ್ ಗ್ರಾಮದಲ್ಲಿ ನಡೆದ ಸಮಾರಂಭದಲ್ಲಿ ಗ್ರಾ.ಪಂ ಅಧ್ಯಕ್ಷ ಹಣಮಪ್ಪ ಸಣದಿ, ಮಾಜಿ ಗ್ರಾ.ಪಂ ಅಧ್ಯಕ್ಷ ಇಮಾಮಸಾಬ ಬೇಪಾರಿ, ಸದಸ್ಯರಾದ ಫಕ್ರುಸಾಬ ಬೇಪಾರಿ, ಮುಖಂಡರು ಹಾಗೂ ಗುತ್ತಿಗೆದಾರರಾದ ಸತೀಶ ಜಿನಗಾ, ಪೀರು ತಳವಾರ, ಶಂಕ್ರಪ್ಪ ಕಂಟಿ, ಸಣ್ಣ ನೀರಾವರಿ ಇಲಾಖೆಯ ಎಇಇ ಲಕ್ಷ್ಮಣ ಬಂಡಿವಡ್ಡರ, ಪಟ್ಟಣದಲ್ಲಿ ನಡೆದ ಸಮಾರಂಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಈರಣ್ಣ ಗುಡದಾರಿ, ಮುಖಂಡರಾದ ಪ್ರದೀಪ ಪಟ್ಟಣ, ಅನಿಕೇತ ಪಟ್ಟಣ, ಪುರಸಭೆ ಸದಸ್ಯರಾದ ನಾಗರಾಜ ಕಟ್ಟಿಮನಿ, ನೀತಾ ಬೀಳಗಿ, ಶಂಕರ ಸೂಳಿಭಾವಿ, ಸರಿತಾ ದೂತ್, ಶಾರವ್ವ ಶಿರಿಯನ್ನವರ, ಪುರಸಭೆ ಮಾಜಿ ಅಧ್ಯಕ್ಷ ಭಾಷಾ ಮೊರಬ, ಮಾಜಿ ಜಿ.ಪಂ ಸದಸ್ಯ ಜಹೂರ ಹಾಜಿ, ಶೇಖರ ಸಿದ್ಲಿಂಗಪ್ಪನವರ, ಇಮಾಮ ಕಲಾದಗಿ, ದುರಗಪ್ಪ ಬಂಡಿವಡ್ಡರ, ಪುರಸಭೆ ಆರೋಗ್ಯ ನಿರೀಕ್ಷಕ ಚಂದನ ಪಾಟೀಲ ಸೇರಿದಂತೆ ಇತರರಿದ್ದರು.

*******

# ಲಿಂಗೈಕ್ಯ ಪೂಜ್ಯಶ್ರೀ ಚೆನ್ನವೀರ ಮಹಾಸ್ವಾಮಿಗಳ 131 ನೇ ಜಯಂತೋತ್ಸವ



ಸಿಂದಗಿ: ಸರ್ಕಾರಗಳು ಮಾಡಬೇಕಾಗಿರುವ ಕಾರ್ಯಗಳನ್ನು ಮಠಮಾನ್ಯಗಳು ಮಾಡುತ್ತಿರುವುದು ಅತ್ಯಂತ ಶ್ಲಾಘನೀಯವಾಗಿದೆ. ಅದರಲ್ಲಿ ಸಿಂದಗಿಯ ಸಾರಂಗಮಠ ಧರ್ಮ ಪ್ರಚಾರ ಧರ್ಮ ಪ್ರಚಾರ ಮಾಡುವುದರ ಜೊತೆಗೆ ಶಿಕ್ಷಣ ಅನ್ನದಾಸೋಹ ಸಂಸ್ಕಾರ ಜ್ಞಾನ ನೀಡುತ್ತಿರುವುದು ಈ ಭಾಗದ ಜನತೆಯ ಪುಣ್ಯದ ಫಲವಾಗಿದೆ ಎಂದು ಸಂಸ್ಕೃತ ವಿಶ್ವವಿದ್ಯಾಲಯ ಬೆಂಗಳೂರಿನ ನಿವೃತ್ತ ಪ್ರಾಧ್ಯಾಪಕ ಡಾ.ಸಿ. ಶಿವಕುಮಾರಸ್ವಾಮಿ ಹೇಳಿದರು.

ಸಿಂದಗಿಯ ಸಾರಂಗಮಠದ ಲಿಂಗೈಕ್ಯ ಪೂಜ್ಯಶ್ರೀ ಚೆನ್ನವೀರ ಮಹಾಸ್ವಾಮಿಗಳ 131 ನೇ ಜಯಂತೋತ್ಸವದ ನಿಮಿತ್ಯ ಚೆನ್ನವೀರ ಮಹಾಸ್ವಾಮೀಜಿ ಪ್ರತಿಷ್ಠಾನ ಕೊಡಮಾಡುವ ಶ್ರೀ ಶಿವಯೋಗಿ ಶಿವಾಚಾರ್ಯ ರಾಷ್ಟ್ರೀಯ ಪ್ರಶಸ್ತಿಯನ್ನು ಸ್ವೀಕರಿಸಿ ಮಾತನಾಡಿದರು.

ಹಿಂದಿನ ಕಾಲದ ರಾಜಾಶ್ರಯ ಪದ್ಧತಿಯಲ್ಲಿ ಅನೇಕ ಕವಿಗಳು, ಸಾಧಕರು ಪ್ರಚಾರಕ್ಕೆ ಬಂದರು ರಾಜಾಶ್ರಯ ಹೋದ ಮೇಲೆ ಮಠಗಳು ಆ ಕಾರ್ಯವನ್ನು ಮಾಡುತ್ತಿವೆ ಎಂದ ಅವರು ಇಂಡಿ ತಾಲೂಕಿನ ಸಾಲೋಟಗಿ ಗ್ರಾಮದ ಶ್ರೀ ಶಿವಯೋಗಿ ಶಿವಾಚಾರ್ಯರು 8 ರಿಂದ 10 ನೇ ಶತಮಾನದ ಅವಧಿಯಲ್ಲಿ ವೀರಶೈವ ಸಿದ್ಧಾಂತ ಶಿಖಾಮಣಿ ಗ್ರಂಥವನ್ನು ರಚಿಸಿ ಧರ್ಮ ಮಾರ್ಗ ಪ್ರವರ್ತಕರಾಗಿದ್ದವರು. ಸಿದ್ಧಾಂತ ಶಿಖಾಮಣಿ ಕುರಿತಾಗಿ ಈ ನಾಡಿನಲ್ಲಿ ಅನೇಕ ವಾದ ವಿವಾದಗಳು ನಡೆಯುತ್ತಿವೆ ಅವರಿಗೆ ನಾವು ಸೂಕ್ತ ಉತ್ತರವನ್ನು ದಾಖಲೆ ಸಮೇತವಾಗಿ ನೀಡಿದ್ದೇನೆ. ಮೊಟ್ಟ ಮೊದಲ ಬಾರಿಗೆ ಸ್ತ್ರೀಯರಿಗೆ ಶಿವ ದೀಕ್ಷೆ, ಸಮಾನತೆ ಸಂಸ್ಕಾರ ನೀಡಿದ ಜಗತ್ತಿನ ಏಕೈಕ ಧರ್ಮ ವೀರಶೈವ ಧರ್ಮ ವೀರಶೈವ ಧರ್ಮದ ನೆಲೆಯಿಂದ ಬಂದ ಸಿದ್ಧಾಂತ ಶಿಖಾಮಣಿಯನ್ನು ಶಿವಾದ್ವೈವ ಸಿದ್ಧಾಂತ ಎಂದು ಕರೆಯುತ್ತಾರೆ. ಮಾನವನು ಮಹಾದೇವನಾಗಲು ಇರುವ ಎಲ್ಲ ಕಲ್ಪನೆಗಳು ಸಿದ್ಧಾಂತ ಶಿಖಾಮಣಿಯಲ್ಲಿ ಅಡಗಿವೆ. ಶಿವಯೋಗಿ ಶಿವಾಚಾರ್ಯರ ಹೆಸರಿನ ಮೇಲೆ ಸಿಂದಗಿ ಸಾರಂಗ ಮಠ ಶ್ರೀ ಶಿವಯೋಗಿ ಶಿವಾಚಾರ್ಯ ರಾಷ್ಟ್ರೀಯ ಪ್ರಶಸ್ತಿ ನೀಡುತ್ತಿರುವುದು ಅಭಿನಂದನಾಯ್ರ ಕಾರ್ಯವಾಗಿದೆ.ಎಂದರು.

ಈ ವೇಳೆ ಶ್ರೀ ಶಿವಯೋಗಿ ಶಿವಾಚಾರ್ಯ ಪ್ರಶಸ್ತಿಯನ್ನು ಉಜ್ಜಯಿನಿಯ ಸದ್ಧರ್ಮ ಸಿಂಹಾಸನದೀಶ್ವರ ಶ್ರೀ ಶ್ರೀ ಶ್ರೀ 1008 ಜಗದ್ಗುರು ಸಿದ್ದಲಿಂಗರಾಜ ದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದಂಗಳವರು ಡಾ. ಸಿ. ಶಿವಕುಮಾರ ಸ್ವಾಮಿ ಅವರಿಗೆ ನೀಡಿ ಗೌರವಿಸಿದರು.

ಇದೇ ಸಂದರ್ಭದಲ್ಲಿ ಸಿಂದಗಿ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ–ಕ್ಕೆ ಕರ್ನಾಟಕ ರಾಜ್ಯ ಸರ್ಕಾರದ ಆದ–ೇಶದನ್ವಯ ಶ್ರೀ ಚೆನ್ನವೀರ ಸ್ವಾಮೀಜಿ ಬಸ್ ನಿಲ್ದಾಣ ಎಂದು ನಾಮಕರಣ ಮಾಡಲಾಯಿತು.

ಈ ವೇಳೆ ಶಾಸಕ ಅಶೋಕ ಮನಗೂಳಿ ಮಾತನಾಡಿ, ಮಠಗಳು ಕೇವಲ ಧರ್ಮದ ಹೇಳುವುದಿಲ್ಲ ಅದರ ಜೊತೆಗೆ ಸಾವಿರಾರು ಬಡ ವಿದ್ಯಾರ್ಥಿಗಳಿಗೆ ಅನ್ನ ಅಕ್ಷರ ಜ್ಞಾನ ಸಂಸ್ಕಾರ ನೀಡಿ ಅವರ ಬದುಕನ್ನು ಹಸನ ಮಾಡಲು ಮುಂದಾಗುತ್ತವೆ ಅದರಲ್ಲಿ ಸಿಂದಗಿಯ ಸಾರಂಗಮಠದ ಕಾರ್ಯ ಅನನ್ಯವಾಗಿದೆ ಎಂದ ಅವರು ಸಿಂದಗಿ ಬಸ್ ನಿಲ್ದಾಣಕ್ಕೆ ತಮ್ಮ ಅತ್ಯಂತ ಮೌಲ್ಯದ ಭೂಮಿಯನ್ನ ದಾನವಾಗಿ ಸರ್ಕಾರಕ್ಕೆ ನೀಡಿದ ಲಿಂಗೈಕ್ಯ ಕಾಯಕವೇ ಚೆನ್ನವೀರ ಮಹಾಸ್ವಾಮಿಗಳ ಕಾರ್ಯ ಅತ್ಯಂತ ಸೃಜನಾತ್ಮಕವಾಗಿದೆ ಆ ದಿಶೆಯಲ್ಲಿ ಸಿಂದಗಿ ಮಹಾಜನತೆಯ ಬಹುದಿನಗಳ ಬೇಡಿಕೆಯಾಗಿರುವ ಸಿಂದಗಿ ಬಸ್ ನಿಲ್ದಾಣಕ್ಕೆ ಪೂಜ್ಯಶ್ರೀ ಚೆನ್ನವೀರ ಮಹಾಸ್ವಾಮಿಗಳ ಹೆಸರು ಇಡಬೇಕು ಎಂದು ಸುಮಾರು ವರ್ಷಗಳ ಬೇಡಿಕೆಯಾಗಿತ್ತು ಅದನ್ನು ಸರ್ಕಾರದ ಮಟ್ಟದಲ್ಲಿ ಹೋರಾಟ ಮಾಡಿ ಇಂದು ಯಶಸ್ವಿಗೊಂಡಿದೆ ಈ ಕಾರ್ಯ ನನ್ನ ಅಧಿಕಾರ ಅವಧಿಯಲ್ಲಿಯೇ ಅತ್ಯಂತ ಹಿರಿಯ ಕಾರ್ಯ ಎಂದು ನಾನು ಬಯಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಶಾಸಕ ಅಶೋಕ ಮನಗೂಳಿ ಅವರ ಕುಟುಂಬಕ್ಕೆ ಉಜ್ಜಯಿನಿ ಜಗದ್ಗುರುಗಳು ಸನ್ಮಾನಿಸಿ ಗೌರವಿಸಿದರು.

ಸಮಾರಂಭದ ಸಾನಿಧ್ಯ ವಹಿಸಿದ ಉಜ್ಜಯಿನಿ ಪೀಠದ ಶ್ರೀಮತ್ ಉಜ್ಜಯನಿ ಸದ್ಧರ್ಮ ಸಿಂಹಾಸನಾದೀಶ್ವರ ಶ್ರೀ 1008 ಜಗದ್ಗುರು ಸಿದ್ದಲಿಂಗರಾಜ ದೇಶಿ ಕೇಂದ್ರ ಶಿವಾಚಾರ್ಯ ಭಗವತ್ಪಾದಂಗಳು ಆಶೀರ್ವಚನ ನೀಡಿ, ಸಿದ್ಧಾಂತ ಶಿಖಾಮಣಿ ಗ್ರಂಥವು ಸಮಸ್ತ ಮನುಕುಲಕ್ಕೆ ಉಪದೇಶ ಮಾಡುವ ಗ್ರಂಥ ಸಿದ್ಧಾಂತ ಶಿಖಾಮಣಿ. ಇದನ್ನು ವಿ?ರಶೆ?ವರ ಧರ್ಮಗ್ರಂಥ ಎಂದು ಕರೆದಿದ್ದರೂ ಅದು ವೀರಶೈವ–ರಿಗಷ್ಟೇ ಸೀಮಿತವಾಗಿಲ್ಲ. ಜಗತ್ತಿನ ಎಲ್ಲ ಧರ್ಮದವರೂ ಇದನ್ನು ಓದುವುದ–ರಿಂದ ಇದನ್ನು ಜಾಗತಿಕ ಧರ್ಮಗ್ರಂಥ ಎನ್ನಲಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ ಸಾರಂಗಮಠದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯರು ಮಾತನಾಡಿದರು. ವೇದಿಕೆಯ ಮೇಲೆ ಶಹಪೂರಿನ ಸುಗುರೇಶ್ವರ ಶ್ರೀಗಳು, ಕೊಣ್ಣೂರು ಹೊರಗಿನ ಕಲ್ಯಾಣ ಮಠದ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು, ಕನ್ನೊಳ್ಳಿ ಹಿರೇಮಠದ ಪೂಜ್ಯಶ್ರೀ ಸಿದ್ದಲಿಂಗ ಶಿವಾಚಾರ್ಯರು, ಸಿಂದಗಿ ಊರನ ಹಿರೇಮಠದ ಶ್ರೀ ಶಿವಾನಂದ ಶ್ರೀಗಳು ಸೇರಿದಂತೆ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ಆಡಳಿತ ಮಂಡಳಿಯ ನಿರ್ದೇಶಕರು ವೇದಿಕೆ ಮೇಲೆ ಉಪಸ್ಥಿತರಿದ್ದರು. ಡಾ ರವಿ ಗೋಲಾ ಮತ್ತು ಪೂಜಾ ಹಿರೇಮಠ ನಿರೂಪಿಸಿದರು, ಡಾ ಶರಣಬಸವ ಜೋಗುರ ಸ್ವಾಗತಿಸಿದರು.

*********

# ದೆಹಲಿಯ ಗ್ಲ್ಯಾಮ್ ರಿಟೇಲ ಪ್ರೈ. ಲಿ. ಗೆ ಗ್ರಾಹಕರ ಆಯೋಗದ ದಂಡ ವಿಧಿಸಿ, ಪರಿಹಾರಕ್ಕೆ ಆದೇಶ

ಧಾರವಾಡ : ಹುಬ್ಬಳ್ಳಿಯ ಅಮೋಘ ಕಲ್ಯಾಣಮಠ ಎಂಬುವವರು ಎದುರದಾರರಾದ ಗ್ಲ್ಯಾಮ್ ರೀಟೇಲ್ ಪ್ರೈ. ಲಿ.ನ ವೆಬಸೈಟಿನ ಮುಖಾಂತರ ದಿ:19/05/2024 ರಂದು ಕಾರಿಗೆ ಸಂಬಂಧಪಟ್ಟ ವಸ್ತುಗಳನ್ನು ಖರೀದಿಸಲು ಬಯಸಿದ್ದರು. ಇಬ್ಬರೂ ಮಧ್ಯೆ ಒಪ್ಪಂದದಂತೆ ಅದರ ಒಟ್ಟು ಮೊತ್ತ ರೂ.70,000/- ಅಂತಾ ನಿಗದಿಯಾಗಿತ್ತು. ಎದುರುದಾರರು ಮೇಲಿನ ಮೊತ್ತದ 50% ಪಾವತಿಸುವಂತೆ ದೂರುದಾರರಿಗೆ ಹೇಳಿದ್ದರು. ಅದರಂತೆ ದೂರುದಾರರು ಎದುರುದಾರರ ಬ್ಯಾಂಕ್ ಖಾತೆಗೆ ಪೇಟಿಯಮ್ ಮುಖಾಂತರ ರೂ.35,000/- ಹಣವನ್ನು ಪಾವತಿಸಿದ್ದರು. ಎದುರುದಾರರು ಮುಂದಿನ 10-15 ದಿನಗಳಲ್ಲಿ ವಸ್ತುಗಳನ್ನು ಕಳುಹಿಸುವುದಾಗಿ ಹೇಳಿದ್ದರು. ಆದರೆ ಇವತ್ತಿನವರೆಗೂ ಯಾವುದೇ ವಸ್ತುಗಳನ್ನು ದೂರುದಾರರಿಗೆ ಕಳುಹಿಸಿರುವುದಿಲ್ಲ ಮತ್ತು ಹಣವನ್ನು ಸಹ ಮರಳಿ ಕೊಟ್ಟಿರಲಿಲ್ಲ. ದೂರುದಾರ/ಗ್ರಾಹಕ ಎದುರುದಾರರ ಈ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರರು ದಿ:20.08.2024ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ. ಭೂತೆ ಹಾಗೂ ವಿಶಾಲಾಕ್ಷಿ. ಬೋಳಶೆಟ್ಟಿ ಮತ್ತು ಪ್ರಭು. ಹಿರೇಮಠ ಸದಸ್ಯರು, ದೂರುದಾರರು ತಮ್ಮ ಪ್ರಕರಣ ಸಾಬೀತು ಪಡಿಸಲು ಹಾಜರುಪಡಿಸಿದ ದಾಖಲೆಗಳನ್ನು ಪರಿಶೀಲಿಸಿದ ಆಯೋಗ ದೂರುದಾರರು ದಿ:19/05/2024ರಂದು ಎದುರುದಾರರ ವೆಬ್ ಸೈಟ್ ಮುಖಾಂತರ ಕಾರಿಗೆ ಸಂಬಂಧಪಟ್ಟಂತಹ ವಸ್ತುಗಳನ್ನು ಖರೀದಿಸುವ ಸಲುವಾಗಿ 50% ಹಣ ಪಾವತಿಸಿರುವುದು ದಾಖಲೆಗಳ ಮುಖಾಂತರ ಕಂಡುಬಂದಿರುತ್ತದೆ ಮತ್ತು ದೂರುದಾರ ಹಾಗೂ ಎದುರುದಾರರ ವಾಟ್ಸ್‌ಪ್ ಸಂದೇಶಗಳ ಮುಖಾಂತರ ಎದುರುದಾರರು ವಸ್ತುಗಳ ವಿವರಣೆ ಮತ್ತು ಅವುಗಳ ಬೆಲೆ ಮತ್ತು ಹಣ ಪಾವತಿಸಲು ಕಳುಹಿಸಿದ ಯು.ಪಿ.ಆಯ್ ಅನ್ನು ಕಳುಹಿಸಿರುವುದು ಮತ್ತು ಹಣ ಪಾವತಿಸಿದ್ದನ್ನು ಒಪ್ಪಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಎದುರುದಾರರು ದೂರುದಾರರ ವಸ್ತುಗಳನ್ನು ಕಳುಹಿಸದೇ ಸೇವಾ ನ್ಯೂನ್ಯತೆ ಎಸಗಿದ್ದಾರೆಂದು ಅಭಿಪ್ರಾಪಟ್ಟು ದೂರುದಾರರು ಪಾವತಿ ಮಾಡಿದಂತಹ ರೂ.35,000/-ಗಳನ್ನು ದಿ:19/05/2024 ರಿಂದ ಶೇ10% ರಂತೆ ಬಡ್ಡಿ ಲೆಕ್ಕ ಹಾಕಿ ಪೂರ್ತಿ ಹಣ ಸಂದಾಯವಾಗುವವರೆಗೆ ದೂರುದಾರರಿಗೆ ಕೊಡುವಂತೆ ಆದೇಶಿಸಿದೆ. ದೂರುದಾರರಿಗೆ ಆಗಿರುವ ಮಾನಸಿಕ ಹಿಂಸೆ ಮತ್ತು ತೊಂದರೆಗೆ ರೂ.25,000/- ಪರಿಹಾರ ಹಾಗೂ ರೂ.10,000/- ಪ್ರಕರಣದ ಖರ್ಚು ವೆಚ್ಚ ಒಂದು ತಿಂಗಳೊಳಗಾಗಿ ದೂರುದಾರರಿಗೆ ಕೊಡುವಂತೆ ಎದುರುದಾರರಾದ ಗ್ಲ್ಯಾಮ ರೀಟೇಲ್ ಪ್ರೈ. ಲಿ. ಗೆ ಆಯೋಗ ನಿರ್ದೇಶಿಸಿದೆ.

# ಜಿಲ್ಲಾ ಆಸ್ಪತ್ರೆ ಸಖಿ ಒನ್ ಸ್ಟಾಪ್ ಸೆಂಟರ್‌ಗೆ ನ್ಯಾ ಮಹಾಂತೇಶ್ ದರಗದ್ ಅನೀರಿಕ್ಷಿತ ಭೇಟಿ: ಪರಿಶೀಲನೆ



ಕೊಪ್ಪಳ : ಕೊಪ್ಪಳದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನ್ಯಾ. ಮಹಾಂತೇಶ್ ಎಸ್ ದರಗದ್ ಅವರು ಗುರುವಾರ ಕೊಪ್ಪಳದ ಜಿಲ್ಲಾ ಆಸ್ಪತ್ರೆಯ ಫಾರ್ಮಸಿ, ಆಸ್ಪತ್ರೆಯ ಊಟದ ಕೊಠಡಿಗೆ ಹಾಗೂ ಸಖಿ ಒನ್ ಸ್ಟಾಪ್ ಸೆಂಟರ್ ಅನೀರಿಕ್ಷಿತ ಭೇಟಿ ನೀಡಿದರು.

ನ್ಯಾಯಾಧೀಶರ ಭೇಟಿ ಸಮಯದಲ್ಲಿ ಫಾರ್ಮಸಿಯಲ್ಲಿನ ಔಷಧದ ಬಗ್ಗೆ ಸಿಬ್ಬಂದಿಗಳೊಂದಿಗೆ ವಿಚಾರಿಸಿ ಔಷಧಿಗಳು ಸರಿಯಾಗಿ ಜಾರಿಯಾಗಿವೆ ಇಲ್ಲ ಎಂದು ಪರಿಶೀಲನೆ ಮಾಡಿದರು. ನಂತರ ಸಖಿ ಒನ್ ಸ್ಟಾಪ್ ಸೆಂಟರಿನಲ್ಲಿರುವ ರೋಗಿಗಳನ್ನು ವಿಚಾರಿಸಿ ಸರಿಯಾದ ಚಿಕಿತ್ಸೆ ಬಗ್ಗೆ ವೈದ್ಯರೊಂದಿಗೆ ಸಂವಹನ ನಡೆಸಿದರು. ಆಸ್ಪತ್ರೆಯ ಊಟದ ಕೊಠಡಿಯಲ್ಲಿ ದಿನಕ್ಕೆ ಎಷ್ಟು ರೋಗಿಗಳಿಗೆ ಊಟ ಕೊಡಲಾಗುವುದು ಎಂದು ವಿಚಾರಿಸಿ, ಮೊಟ್ಟೆ ಹಾಲು ಹಾಗೂ ಕಾಳುಗಳನ್ನು ಪರಿಶೀಲಿಸಿ ಒಳ್ಳೆಯ ಆಹಾರವಿದೆ ಎಂದು ಖಚಿತಪಡಿಸಿಕೊಂಡು. ಆಸ್ಪತ್ರೆಗೆ 300 ಕ್ಕಿಂತ ಹೆಚ್ಚು ರೋಗಿಗಳು ಚಿಕಿತ್ಸೆಗಾಗಿ ಬರುವುದರಿಂದ ಸೂಕ್ತ ಚಿಕಿತ್ಸೆ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸಿಬ್ಬಂದಿಗಳ ಕುಂದು ಕೊರತೆಗಳನ್ನು ಆಲಿಸಿ, ಆಸ್ಪತ್ರೆಯಲ್ಲಿನ ವಿವಿಧ ಕೆಲಸ ಕಾರ್ಯಗಳ ಕುರಿತು ಪರಿಶೀಲಿಸಿದರು.

## ಚೂರು-ಪಾರು

### ಸರ್ಕಾರಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ (ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ) ತರಬೇತಿಗಾಗಿ ಅರ್ಜಿ ಆಹ್ವಾನ

ಧಾರವಾಡ : 2024-25 ನೇ ಸಾಲಿಗೆ ಭಾರತೀಯ ಶುಶ್ರೂಷಾ ಪರಿಷತ್ತಿನ ಮಾರ್ಗಸೂಚಿಯಂತೆ ಧಾರವಾಡ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರಿಗೆ ತರಬೇತಿ ಕೇಂದ್ರಕ್ಕೆ 24 ತಿಂಗಳ ತರಬೇತಿಗಾಗಿ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ನಿಗದಿತ ಅರ್ಜಿಗಳನ್ನು www.karhfw.gov.in ವೆಬ್ ಸೈಟ್‌ನಲ್ಲಿ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ (SIHFW) ನಲ್ಲಿ ಡೌನ್ಲೋಡ್ ಮಾಡಿಕೊಂಡು ಸೂಕ್ತ ದಾಖಲೆಗಳೊಂದಿಗೆ ದ್ವಿ-ಪ್ರತಿಯಲ್ಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಧಾರವಾಡ ಇಲ್ಲಿಗೆ ನವೆಂಬರ 30, 2024 ರಂದು ಸಂಜೆ 5:30 ಗಂಟೆಯೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ ನಿರ್ದೇಶಕರ ಕಚೇರಿ ದೂರವಾಣಿ ಸಂಖ್ಯೆ : 080-23206123/6, ಇ-ಮೇಲ್: directorsihfw.bg@gmail.com ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಧಾರವಾಡ ದೂರವಾಣಿ ಸಂಖ್ಯೆ: 0836-2447483 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪುರುಷ ಸಂತಾನಹರಣ ಶಸ್ತ್ರಚಿಕಿತ್ಸೆ ಬೃಹತ್ ಶಿಬಿರ

ಕಾರವಾರ - ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ನೋ ಸ್ಕಾಲಪೆಲ್ ವ್ಯಾಸಕ್ಟೋಮಿ ಪಾಕ್ಷಿಕದನ್ವಯ ಇಂದಿನಿಂದಲೇ ನಿರ್ಧರಿಸೋಣ, ಕುಟುಂಬ ಯೋಜನೆಯ ಬಗ್ಗೆ ದಂಪತಿಗಳು ಕೂಡಿ ಚರ್ಚಿಸೋಣ ಎಂಬ ಪ್ರಸಕ್ತ ಸಾಲಿನ ಘೋಷ ವಾಕ್ಯದೊಂದಿಗೆ, ನ.28 ರಿಂದ ಡಿ.4 ರವರೆಗೆ ಸೇವಾ ಸಪ್ತಾಯ ಕಾರ್ಯಕ್ರಮ ಕೈಗೊಂಡಿದ್ದು, ಅರ್ಹ ಪುರುಷರಿಗೆ ಕುಟುಂಬ ಕಲ್ಯಾಣ ವಿಧಾನಗಳ ಸೇವೆ ಹಾಗೂ ಎನ್‌ಎಸ್‌ವಿ ಶಸ್ತ್ರಚಿಕಿತ್ಸೆ ನಡೆಸುವ ಸಲುವಾಗಿ ಪುರುಷ ಸಂತಾನಹರಣ ಶಸ್ತ್ರಚಿಕಿತ್ಸೆ ಬೃಹತ್ ಶಿಬಿರವನ್ನು ನ.30 ರಂದು ಕುಮಟಾ ತಾಲೂಕು ಆಸ್ಪತ್ರೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಪುರುಷ ಸಂತಾನಹರಣ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡವರಿಗೆ ಸರಕಾರದಿಂದ ರೂ.1100 ಗೌರವಧನ ನೀಡಲಾಗುವುದು. ಪುರುಷರಿಗೆ ಸಂತಾನಹರಣ ಶಸ್ತ್ರ ಚಿಕಿತ್ಸೆಯನ್ನು ಅತ್ಯಲ್ಪ ಅವಧಿಯೊಳಗೆ ಮಾಡಲಾಗುತ್ತದೆ. ಗಾಯವಿರದು, ನೋವಿರದು, ಹೊಲಿಗೆ ಕೂಡ ಇಲ್ಲ. ಆಸ್ಪತ್ರೆಯಲ್ಲಿ ದಾಖಲಾಗಬೇಕಿಲ್ಲ. ಚಿಕಿತ್ಸೆ ಮಾಡಿದ ಗುರುತು ಸಹ ಇರುವುದಿಲ್ಲ. ಪುರುಷರಿಗೆ ಗಾಯ, ರಕ್ತಸ್ರಾವ, ನೋವು ಮಾಡದೇ ಸಂತಾನಹರಣ ಚಿಕಿತ್ಸೆ ಮಾಡಲಾಗುವುದು.

ವೃತ್ತಿ ವ್ಯಾಪಾರಕ್ಕೆ ಹಾಗೂ ಕೂಲಿ ಕೆಲಸ ಮತ್ತು ಕೃಷಿ ಕೆಲಸ ಮಾಡಲು ಯಾವುದೇ ಧಕ್ಕೆ ಇಲ್ಲಾ. ಚಿಕಿತ್ಸೆಯಿಂದ ಯಾವುದೇ ಹಾನಿ ಇಲ್ಲಾ. ಲೈಗಿಂಕ ಸಾಮರ್ಥ್ಯಕ್ಕೆ ಯಾವುದೇ ಧಕ್ಕೆ ಇರದು. ಸಂಭೋಗದ ತೃಪ್ತಿ ಮೊದಲಿನಂತೆಯೆ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸರ್ಕಾರಿ ಆಸ್ಪತ್ರೆ, ಆರೋಗ್ಯ ಸಿಬ್ಬಂದಿಯವರು ಹಾಗೂ ಆಶಾ ಕಾರ್ಯಕರ್ತೆಯರನ್ನು, ಅಥವಾ 104 ಸಹಾಯವಾಣಿಯನ್ನು ಸಂಪರ್ಕಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿ ಡಾ.ನೀರಜ್ ಬಿ.ವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಾಲಕ ಮತ್ತು ಬಾಲಕಿಯರಿಗೆ ರಾಜ್ಯ ಮಟ್ಟದ ಟೆನಿಸ್ ಪಂದ್ಯಾವಳಿ ಆಯೋಜನೆ

ಧಾರವಾಡ : ಧಾರವಾಡ ಜಿಲ್ಲಾ ಟೆನಿಸ್ ಸಂಸ್ಥೆಯ ಆಶ್ರಯದಲ್ಲಿ 10 ಮತ್ತು 12 ವರ್ಷದೊಳಗಿನ ಬಾಲಕರು ಮತ್ತು ಬಾಲಕಿಯರಿಗಾಗಿ ರಾಜ್ಯಮಟ್ಟದ ರ್‍ಯಾಂಕಿಂಗ್ ಟೆನಿಸ್ ಪಂದ್ಯಾವಳಿಯನ್ನು ಧಾರವಾಡ ಕೋರ್ಟ ಸರ್ಕಲ್ ಹತ್ತಿರದಲ್ಲಿರುವ ರಾಜಾಧ್ಯಕ್ಷ ಪೆವಿಲಿಯನ್ ಆವರಣದಲ್ಲಿ ನವೆಂಬರ 30 ಮತ್ತು ಡಿಸೆಂಬರ 1, 2024 ರಂದು ಆಯೋಜಿಸಲಾಗಿದೆ.

ಆಸಕ್ತ ಆಟಗಾರರು ನವೆಂಬರ 29, 2024 ರೊಳಗಾಗಿ ಚೇತನ ಗಂಜಾಳಿ, ಧಾರವಾಡ ಜಿಲ್ಲಾ ಟೆನಿಸ್ ಸಂಸ್ಥೆ, ಧಾರವಾಡ ಕೋರ್ಟ ಸರ್ಕಲ್ ಹತ್ತಿರದಲ್ಲಿರುವ ರಾಜಾಧ್ಯಕ್ಷ ಪೆವಿಲಿಯನ್ ಇಲ್ಲಿಗೆ ಪ್ರವೇಶ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ನಂ: 9740141979 ಗೆ ಸಂಪರ್ಕಿಸಬಹುದು ಎಂದು ಡಿ.ಡಿ.ಎಲ್.ಟಿ.ಎ ಕಾರ್ಯದರ್ಶಿ ಸಂತೋಷ ಆರ್. ಶೆಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಧಾರವಾಡ : 2024-25ನೇ ಸಾಲಿನಲ್ಲಿ ಮೆಟ್ರಿಕ ನಂತರದ ಕೋರ್ಸಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಸ್ನಾತಕೋತ್ತರ ಪದವಿ, ವೃತ್ತಿ ಪರ ಪದವಿ ಹಾಗೂ ವೃತ್ತಿ ಪರ ಸ್ನಾತಕೋತ್ತರ ಪದವಿಗಳ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ-ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿತ್ತು.

ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಪೋಷಕರು, ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು ಮನವಿ ಸಲ್ಲಿಸಿದ್ದು, ಪ್ರಯುಕ್ತ ವಿದ್ಯಾರ್ಥಿಗಳ ಹಿತದೃಷ್ಟಿಯಿಚಿದ ನವೆಂಬರ 30, 2024 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770005, ಅಥವಾ bcwdhelpline@gmail.com ಗೆ ಭೇಟಿ ನೀಡಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಪಂಚಾಯತ ಸಾಮಾನ್ಯ ಸಭೆ

# ನಿಗದಿತ ಅವಧಿಯಲ್ಲಿ ಕಾಮಗಾರಿಯನ್ನು ಉತ್ತಮ ಗುಣಮಟ್ಟದೊಂದಿಗೆ ಪೂರ್ಣಗೊಳಿಸಬೇಕು

ಗದಗ : ಅನುಮೋದನೆಕೊಂಡ ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಉತ್ತಮ ಗುಣಮಟ್ಟದೊಂದಿಗೆ ಪೂರ್ಣಗೊಳಿಸಬೇಕು ಎಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಪಂಚಾಯತ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೆಲವು ಇಲಾಖೆಯ ಕಾಮಗಾರಿಗಳ ಕ್ರಿಯಾ ಯೋಜನೆಗಳು ಬದಲಾವಣೆಗೊಂಡಿದ್ದು ಬದಲಾವಣೆಗೊಂಡ ಕಾಮಗಾರಿಗಳನ್ನು ಒಳಗೊಂಡಂತೆ ಈಗಾಗಲೇ ಅನುಮೋದನೆಗೊಂಡ ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಿಂದ ಪೂರ್ಣಗೊಳಿಸಬೇಕು, ಕೃಷಿ ಬೆಳೆಗಳ ವಿಮೆ ಬಗ್ಗೆ ರೈತರಿಗೆ ಸಮಗ್ರ ಮಾಹಿತಿ ನೀಡಬೇಕು ಎಂದರು.

ಜಿಲ್ಲೆಯಲ್ಲಿನ ಅಂಗನವಾಡಿಗಳಲ್ಲಿ




ಉತ್ತಮ ರೀತಿಯ ಗಾಳಿ ಬೆಳಕು ಸೇರಿದಂತೆ ಮೂಲಭೂತ ಸೌಕರ್ಯಗಳು ಇರುವಂತೆ ನೋಡಿಕೊಳ್ಳಬೇಕು, ಈ ಬಾರಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆ ಯಲ್ಲಿ ಜಿಲ್ಲೆಯು ಉತ್ತಮ ಫಲಿತಾಂಶ ಹೊಂದುವಂತೆ ಎಲ್ಲರೂ ಶ್ರಮಿಸಬೇಕು, ವಿವಿಧ ಇಲಾಖೆಗಳ ವಸತಿ ನಿಲಯಗಳಲ್ಲಿ ಮಕ್ಕಳಿಗೆ ವಿದ್ಯಾಭ್ಯಾಸ ಮಾಡಲು ಅನುಕೂಲಕರ ವಾತಾವರಣ ನಿರ್ಮಾಣ ಮಾಡುವುದು ಇಲಾಖೆ ಅಧಿಕಾರಿಗಳ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಭರತ ಎಸ್ ಅವರು ಮಾತನಾಡಿ ಜಿಲ್ಲೆಯಲ್ಲಿ ನಗರ ಸಮುದಾಯ ಆರೋಗ್ಯ ಕೇಂದ್ರ ಸ್ಥಾಪಿಸಲು ನಗರದ ಹೃದಯ ಭಾಗದಲ್ಲಿನ ಕಟ್ಟಡದ ಲಭ್ಯವಿದೆ.

ಹಾಗಾಗಿ ಭಾರತ ಸರ್ಕಾರದ ಎನ್‌ಎಚ್‌ಎಮ್‌ನಿಂದ ಅನುಮೋದನೆ ನೀಡಿದರೆ ಸಾರ್ವಜನಿಕರಿಗೆ ಅನುಕೂಲ ಆಗುತ್ತದೆ ಎಂದು ತಿಳಿಸಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕಿ ತಾರಾಮಣಿ ಮಾತನಾಡಿ ಜಿಲ್ಲೆಯಲ್ಲಿ ಹಿಂಗಾರಿನಲ್ಲಿ ಕಡಲೆ,ಜೋಳ,ಗೋದಿ,ಬೆಳೆಗಳ ಬೆತ್ತನೆಯಾಗಿದೆ ಹಾಗೂ ಬಿತ್ತನೆ ಬೀಜ ಹಾಗೂ ರಸ ಗೊಬ್ಬರ ಸಮರ್ಪಕ ಪ್ರಮಾಣದಲ್ಲಿ ಲಭ್ಯವಿದ್ದು ಯಾವುದೇ ಅಭಾವವಿರುವುದಿಲ್ಲ.

ರೈತರಿಗೆ ಈಗಾಗಲೇ ಬೆಳೆ ವಿಮೆ ಬಗ್ಗೆ ಮಾಹಿತಿ ನೀಡಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಮಹೇಶ ಪೋತದಾರ ಮಾತನಾಡಿ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ 42 ವಸತಿ ನಿಲಯಗಳಿದ್ದು, ಅದರಲ್ಲಿ 35 ವಸತಿ ನಿಲಯಗಳಿಗೆ ಸ್ವಂತ ಕಟ್ಟಡವಿದೆ, ಉಳಿದ ವಸತಿ ನಿಲಯಗಳಿಗೆ ಜಾಗ ಲಭ್ಯವಿದ್ದು ಈಗಾಗಲೇ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದೆ ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್ ಎಸ್ ಬುರಡಿ ಮಾತನಾಡಿ ಎಲ್ಲಾ ಶಾಲೆಗಳಲ್ಲಿ ಉತ್ತಮ ಭೋದನೆ ನಡೆಯುತ್ತಿದ್ದು,ಶಿಕ್ಷಕರ ಕೊರತೆಯಿರುವ ಶಾಲೆಗಳಲ್ಲಿ ಅತಿಥಿ ಶಿಕ್ಷಕರನ್ನು ನೇಮಿಕ ಮಾಡಲಾಗಿದೆ. ವಿವೇಕ ಯೋಜನೆಯಡಿ 95 ಶಾಲೆಗಳಲ್ಲಿ 124 ಕೊಠಡಿಗಳ ನಿರ್ಮಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ತೋಟಗಾರಿಕೆ ಇಲಾಖೆ,ಮೀನುಗಾರಿಕೆ ಇಲಾಖೆ, ಶಿಕ್ಷಣ ಇಲಾಖೆ,ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರೇಶ್ಮೆ, ಪಶು ಸಂಗೋಪನೆ, ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗ್ರಾಮೀಣ ಕುಡಿಯುವ ನೀರುಸರಬರಾಜು ಮತ್ತು ನೈರ್ಮಲ್ಯ ವಿಭಾಗ ಸೇರಿದಂತೆ ವಿವಿಧ ಇಲಾಖೆಯ ಅಭಿವೃದ್ಧಿ ಕಾಮಗಾರಿಗಳ ಪ್ರಗತಿಯನ್ನು ಚರ್ಚಿಸಲಾಯಿತು. .

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂಉಪಕಾರ್ಯದರ್ಶಿ ಸಿಆರ್ ಮುಂಡರಗಿ, ಹಿಂದುಳಿದ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ರವಿ ಗುಂಜಿಕರ್,ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತಿ ಕೋಟಿಮನಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್. ಎಸ್.ನೀಲಗುಂದ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದು ಇಲಾಖೆಯ ಮಾಹಿತಿ ಒದಗಿಸಿದರು.

# ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮ: ಹಿರೇಅರಳಿಹಳ್ಳಿಯಲ್ಲಿ ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಸ್ಪರ್ಧೆ

ಕೊಪ್ಪಳ : ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಯಲಬುರ್ಗಾ ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಹಾಗೂ ವಜ್ರಬಂಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಹಿರೇಅರಳಿಹಳ್ಳಿ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಗುರುವಾರ ವಿದ್ಯಾರ್ಥಿಗಳಿಗೆ "ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ" ಕುರಿತು ರಸಪ್ರಶ್ನೆ ಸ್ಪರ್ಧೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ ಅವರು ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ರಾಷ್ಟ್ರೀಯ ಕಾರ್ಯಕ್ರಮಗಳು, ಸಾಂಕ್ರಾಮಿಕ ರೋಗಗಳ ನಿಯಂತ್ರಣ ಹಾಗೂ ಅಸಾಂಕ್ರಾಮಿಕ ರೋಗಗಳ ಬಗ್ಗೆ ಮುಂಜಾಗ್ರತೆ ತೆಗೆದುಕೊಳ್ಳುವ ಕುರಿತು, ನಿರಂತವಾಗಿ ವಿವಿಧ ಮಾಧ್ಯಮದ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ ಎಂದರು.

ಬಳಿಕ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳಾದ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮ, ಆರ್.ಸಿ.ಹೆಚ್ ಕಾರ್ಯಕ್ರಮ, ರಾಷ್ಟ್ರೀಯ ಶ್ರವಣದೋಷ ನಿವಾರಣಾ ಮತ್ತು ನಿಯಂತ್ರಣ ಕಾರ್ಯಕ್ರಮ, ಹದಿಹರೆಯದವರ ಆರೋಗ್ಯದ ಮಹತ್ವ, ಸೊಳ್ಳೆಗಳಿಂದ ಹರಡುವ ರೋಗಗಳ ನಿಯಂತ್ರಣ, ಕುಟುಂಬ ಕಲ್ಯಾಣ ಕಾರ್ಯಕ್ರಮ, ಮಾನಸಿಕ ಆರೋಗ್ಯ ಕಾರ್ಯಕ್ರಮ, ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮ, ಐ.ಡಿ.ಎಸ್.ಪಿ,




ಅಸಾಂಕ್ರಾಮಿಕ ರೋಗಗಳ ಬಗ್ಗೆ ಹಾಗೂ ಇತರೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ವಿವರವಾಗಿ ಮಾತನಾಡಿದರು.

ಸ್ಪರ್ಧೆಯಲ್ಲಿ 6 ತಂಡಗಳು ಭಾಗವಹಿಸಿದ್ದು, ಅದರಲ್ಲಿ ರಾಣಿ ಅಬ್ಬಕ್ಕದೇವಿ ತಂಡ ಪ್ರಥಮ(ರೂ.750), ಕಿತ್ತೂರಾಣಿ ಚನ್ನಮ್ಮ ತಂಡ ದ್ವಿತಿಯ(ರೂ.500) ಹಾಗೂ ಇಮ್ಮಡಿ ಪುಲಿಕೇಶಿ ತಂಡ ತೃತಿಯ(ರೂ250) ಬಹುಮಾನಗಳನ್ನು ಪಡೆದುಕೊಂಡವು. ಬಹುಮಾನವನ್ನು ನೇರವಾಗಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡುವುದಾಗಿ ಕಾರ್ಯಕ್ರಮ ಆಯೋಜಕರು ತಿಳಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ದೊಡ್ಡಪ್ಪ ತಳವಾರ ಅವರು ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಮ್ಮಿಕೊಳ್ಳುವ ಇಂತಹ ಜಾಗೃತಿ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಬಹಳ ಉಪಯುಕ್ತವಾಗಿವೆ. ವಿದ್ಯಾರ್ಥಿಗಳು ಇಂತಹ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಂಡು ತಮ್ಮ ತಮ್ಮ ಗ್ರಾಮಗಳಲ್ಲಿ ಹಾಗೂ ಸುತ್ತ ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸಬೇಕೆಂದರು.

ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶಂಕ್ರಯ್ಯ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಶೋಭಾ ಪತ್ತಾರ, ಸಮುದಾಯ ಆರೋಗ್ಯಾಧಿಕಾರಿ ಬಸವರಾಜ ಮತ್ತು ಪ್ರಭು ಸೇರಿದಂತೆ ಕಾಲೇಜಿನ ಸಹಉಪನ್ಯಾಸಕ ವರ್ಗದವರು, ಆಶಾ ಕಾರ್ಯಕರ್ತೆಯರು, ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ನ.೩೦ರಂದು ದತ್ತು ಗ್ರಾಮಗಳ ಅಡಿಗಲ್ಲು ಸಮಾರಂಭ

# ನರೇಗಾದಡಿ ಮೊರನಾಳ ಹಾಗೂ ಕಾಮನೂರುಗಳ ದತ್ತು ಗ್ರಾಮಗಳನ್ನಾಗಿ ಆಯ್ಕೆ : ಸಂಸದ ಕೆ.ರಾಜಶೇಖರ ಹಿಟ್ನಾಳ್

ಕೊಪ್ಪಳ : ನರೇಗಾ ಯೋಜನೆಯಡಿ ಮೂಲಭೂತ ಸೌಕರ್ಯಗಳ ಸಮಗ್ರ ಅಭಿವೃದ್ಧಿಗೆ ಕೊಪ್ಪಳ ತಾಲ್ಲೂಕಿನ ಮೊರನಾಳ ಮತ್ತು ಕಾಮನೂರು ಗ್ರಾಮಗಳನ್ನು ದತ್ತು ಗ್ರಾಮಗಳನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ್ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ನಗರದ ಪ್ರವಾಸಿ ಮಂದಿರದಲ್ಲಿ ದತ್ತು ಗ್ರಾಮಗಳ ಅಡಿಗಲ್ಲು ಸಮಾರಂಭ ಕುರಿತು ಮಾಹಿತಿ ನೀಡಲು ಕರೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಪ್ರತಿ ಹಳ್ಳಿಗಳು ಸ್ವಾವಲಂಬಿಗಳಾಗಬೇಕೆಂಬುವುದು ಗಾಂಧೀಜಿಯವರ ಕನಸಾಗಿತ್ತು. ಭಾರತದ ಭವಿಷ್ಯವು ಹಳ್ಳಿಗಳಲ್ಲಿ ಅಡಗಿದೆ ಎಂದು ಅವರು ನಂಬಿದ್ದರು. ರಾಜಕೀಯ ಮತ್ತು ಆರ್ಥಿಕ ಪ್ರಜಾಪ್ರಭುತ್ವವನ್ನು ತಳಮಟ್ಟದಲ್ಲಿ ಪ್ರಾರಂಭಿಸಲು ಅತ್ಯಂತ ಸೂಕ್ತವಾದ ಸಾಧನವೆಂದರೆ ಪಂಚಾಯತ್ ರಾಜ್ ವ್ಯವಸ್ಥೆ, "ಸರಳ ಜೀವನ ಮತ್ತು ಉನ್ನತ ಚಿಂತನೆಯ ಮೂಲವನ್ನು ಆಧರಿಸಿ ಹಳ್ಳಿಗಳನ್ನು ಗ್ರಾಮ ಪಂಚಾಯಿತಿಗಳು ನಿಯಂತ್ರಿಸಿದರೆ ಭಾರತಕ್ಕೆ ಲಾಭವಾಗುತ್ತದೆ ಎಂಬ ಗಾಂಧೀಜಿಯವರ ನಂಬಿಕೆಯನ್ನು ಬಲಪಡಿಸುತ್ತದೆ ಎಂದರು.

ಕಳೆದ ತಿಂಗಳು ನಡೆದ ದಿಶಾ



ಸಮಿತಿ ಸಭೆಯಲ್ಲಿ ಚರ್ಚಿಸಿದಂತೆ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೊಪ್ಪಳ ವಿಧಾನಸಭಾ ಕ್ಷೇತ್ರದ ಬೆಟಗೇರಿ ಗ್ರಾಮ ಪಂಚಾಯತಿಯ ಮೋರನಾಳ ಗ್ರಾಮ ಮತ್ತು ಗಂಗಾವತಿ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುವ ಲೇಬಗೇರಿ ಗ್ರಾಮ ಪಂಚಾಯತಿಯ ಕಾಮನೂರು ಗ್ರಾಮಗಳನ್ನು ದತ್ತು ಗ್ರಾಮಗಳನ್ನಾಗಿ ಆಯ್ಕೆ ಮಾಡಿಕೊಂಡು ಗ್ರಾಮಕ್ಕೆ ಅವಶ್ಯವಿರುವ ಎಲ್ಲಾ ಕಾಮಗಾರಿಗಳನ್ನು 2024-25ನೇ ಸಾಲಿನಲ್ಲಿ ಅನುಷ್ಠಾನಗೊಳಿಸಿ ಈ ಗ್ರಾಮಗಳನ್ನು ಮೂಲಭೂತ ಸೌಕರ್ಯ ಹೊಂದುವುದು ಮತ್ತು ಗ್ರಾಮೀಣ ನೈರ್ಮಲ್ಯ ಕಾಪಾಡುವ ಗ್ರಾಮಗಳನ್ನಾಗಿ ಅಭಿವೃದ್ಧಿಪಡಿಸುವದಾಗಿದೆ ಎಂದು ಹೇಳಿದರು.

ದತ್ತು ಗ್ರಾಮದ ಅಭಿವೃದ್ಧಿಗಾಗಿ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ 2024-25ನೇ ಸಾಲಿನಲ್ಲಿ ಈಗಾಗಲೇ ಕ್ರಿಯಾ ಯೋಜನೆ ಸಿದ್ಧಪಡಿಸಿ ಜಿಲ್ಲಾ ಪಂಚಾಯತಿಯಿಂದ ಅನುಮೋದನೆ ಪಡೆಯಲಾಗಿದ್ದು ನ.30ರಂದು ಮೊರನಾಳ ಗ್ರಾಮದಲ್ಲಿ ಬೆಳಿಗ್ಗೆ 11 ಗಂಟೆಗೆ ಮತ್ತು ಅದೇ ದಿನದಂದು ಮಧ್ಯಾಹ್ನ 4 ಗಂಟೆಗೆ ಕಾಮನೂರು ಗ್ರಾಮದಲ್ಲಿ ಅಡಿಗಲ್ಲು ಸಮಾರಂಭವು ಜರುಗಲಿದೆ. ಈ ಸಮಾರಂಭದಲ್ಲಿ ಪರಮಪೂಜ್ಯ ಗವಿಮಠ ಶ್ರೀಗಳಾದ ಶ್ರೀ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು, ಶಾಸಕರು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಗ್ರಾಮ ಪಂಚಾಯತಿಯ ಸರ್ವ ಸದಸ್ಯರು, ಜನಪ್ರತಿನಿಧಿಗಳು, ಜಿಲ್ಲಾ ಮತ್ತು ತಾಲೂಕ ಮಟ್ಟದ ಅಧಿಕಾರಿಗಳು, ಗ್ರಾಮಸ್ಥರು, ಗೃಹಲಕ್ಷ್ಮಿ ಫಲಾನುಭವಿಗಳು, ಸಂಜೀವಿನಿ ಸ್ವಸಹಾಯ ಸಂಘದ ಮಹಿಳೆಯರು, ನರೇಗಾ ಯೋಜನೆಯ ಫಲಾನುಭವಿಗಳು ಸೇರಿದಂತೆ ಆಯಾ ಗ್ರಾಮಗಳ ಜನರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

*ಮೊರನಾಳ ಗ್ರಾಮದ ಅಭಿವೃದ್ಧಿಗೆ 5.13 ಕೋಟಿ ರೂ. ಅನುದಾನ:* ಮೊರನಾಳ ಗ್ರಾಮದಲ್ಲಿ ಕರೆ ಅಭಿವೃದ್ಧಿ, ವೈಯಕ್ತಿಕ ಕೃಷಿ ಹೊಂಡ ಕಾಮಗಾರಿ, ಬದು ನಿರ್ಮಾಣ, ದನದ ದೊಡ್ಡಿ, ಕುರಿ-ಮೇಕೆ ಸಾಕಾಣಿಕೆ ಶೆಡ್, ಶಾಲಾ ಕಂಪೌಂಡ್, ಶಾಲಾ ಶೌಚಾಲಯ, ಶಾಲಾ ಆಟದ ಮೈದಾನ, ಶಾಲಾ ಮಳೆ ನೀರಿನ ಕೊಯ್ಲು, ಶಾಲಾ ಅಡುಗೆ ಕೋಣೆ, ಗ್ರಾಮೀಣ ಗೋದಾಮು, ಹೊಸ ಅಂಗನವಾಡಿ ಕಟ್ಟದ ನಿರ್ಮಾಣ, ರಸ್ತೆ ಕಾಮಗಾರಿಗಳು, ಚರಂಡಿ ಕಾಮಗಾರಿಗಳು, ಸ್ಮಶಾನ ಅಭಿವೃದ್ಧಿ ಹಾಗೂ ತೋಟಗಾರಿಕೆ ಇಲಾಖೆ ಕಾಮಗಾರಿಗಳಿಗೆ ನರೇಗಾ ಯೋಜನೆಯಡಿ 4.98 ಕೋಟಿ ರೂ. ಮೊತ್ತದಲ್ಲಿ ಮತ್ತು ಸಂಸದರ ನಿಧಿಯಲ್ಲಿ 15 ಲಕ್ಷ ರೂ. ವೆಚ್ಚದಲ್ಲಿ ಈ ಗ್ರಾಮದಲ್ಲಿ ಎಲ್.ಇ.ಡಿ ವಿದ್ಯುತ್ ದೀಪಗಳ ಅಳವಡಿ ಸೇರಿದಂತೆ ಒಟ್ಟು 5.13 ಕೋಟಿ ರೂ. ಅನುದಾನದಲ್ಲಿ ಮೊರನಾಳ ಗ್ರಾಮದ ಸಮಗ್ರ ಅಭಿವೃದ್ಧಿಗೆ ವಿಶೇಷ ಗಮನ ಹರಿಸಲಾಗುತ್ತಿದೆ ಎಂದು ಹೇಳಿದರು.

*ಕಾಮನೂರು ಗ್ರಾಮದ ಅಭಿವೃದ್ಧಿಗೆ 4.62 ಕೋಟಿ ರೂ. ಅನುದಾನ:* ಕಾಮನೂರು ಗ್ರಾಮದಲ್ಲಿ ಕೆರೆ ಅಭಿವೃದ್ಧಿ, ವೈಯಕ್ತಿಕ ಕೃಷಿ ಹೊಂಡ ಕಾಮಗಾರಿ, ಬದು ನಿರ್ಮಾಣ, ವೈಯಕ್ತಿಕ ಬಚ್ಚಲ ಗುಂಡಿ, ದನದ ದೊಡ್ಡಿ, ಕುರಿ-ಮೇಕೆ ಸಾಕಾಣಿಕೆ ಶೆಡ್, ಶಾಲಾ ಕಂಪೌಂಡ್, ಶಾಲಾ ಶೌಚಾಲಯ, ಶಾಲಾ ಆಟದ ಮೈದಾನ, ಶಾಲಾ ಪೋಷ್ಟಕ ತೋಟ, ಶಾಲಾ ಅಡುಗೆ ಕೋಣೆ, ಗ್ರಾಮೀಣ ಗೋದಾಮು, ಹೊಸ ಅಂಗನವಾಡಿ, ಎನ್.ಆರ್.ಎಲ್.ಎಂ ಶೆಡ್, ಗ್ರಾಮೀಣ ಸಂತೆ ಕಟ್ಟೆ, ರಸ್ತೆ ಕಾಮಗಾರಿಗಳು, ಚರಂಡಿ ಕಾಮಗಾರಿಗಳು, ಸ್ಮಶಾನ ಅಭಿವೃದ್ಧಿ, ತೋಟಗಾರಿಕೆ ಇಲಾಖೆ ಕಾಮಗಾರಿಗಳಿಗೆ ನರೇಗಾ ಯೋಜನೆಯಡಿ 4.47 ಕೋಟಿ ರೂ. ಮೊತ್ತದಲ್ಲಿ ಮತ್ತು ಸಂಸದರ ನಿಧಿಯಲ್ಲಿ 15 ಲಕ್ಷ ರೂ. ವೆಚ್ಚದಲ್ಲಿ ಗ್ರಾಮದಲ್ಲಿ ಎಲ್.ಇ.ಡಿ ವಿದ್ಯುತ್ ದೀಪಗಳ ಅಳವಡಿ ಸೇರಿದಂತೆ ಒಟ್ಟು 4.62 ಕೋಟಿ ರೂ. ಅನುದಾನದಲ್ಲಿ ಕಾಮನೂರು ಗ್ರಾಮದ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುತ್ತಿದೆ ಎಂದರು

ಎರಡೂ ಗ್ರಾಮಗಳ ಕಾಮಗಾರಿಗಳನ್ನು ನ.30ರಿಂದ ಪ್ರಾರಂಭಿಸಿ ಮಾರ್ಚ್-2025ರ ಮಾಹೆಯ ಅಂತ್ಯಕ್ಕೆ ಪೂರ್ಣಗೊಳಿಸುವ ಗುರಿ ನಿಗದಿಪಡಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ (ದಿಶಾ) ಸಮಿತಿ ಸದಸ್ಯರಾದ ಸರಸ್ವತಿ ಇಟ್ಟಂಗಿ ಹಾಗೂ ಅಂಬಣ್ಣ, ಕೊಪ್ಪಳ ನಗರಸಭೆ ಸದಸ್ಯರಾದ ರಾಜಶೇಖರ ಆಡೂರ, ಗಣ್ಯರಾದ ಕೃಷ್ಣ ಇಟ್ಟಂಗಿ ಮತ್ತು ಜಿಲ್ಲೆಯ ಪತ್ರಕರ್ತರು ಸೇರಿದಂತೆ ಮತ್ತಿತರರಿದ್ದರು.

# ಜಿಲ್ಲೆಯ 2551 ಸರಕಾರಿ ಕಚೇರಿ ಕಟ್ಟಡಗಳ ಮೇಲ್ಛಾವಣಿ ಮೇಲೆ ಸೋಲಾರ್ ಘಟಕ ಸ್ಥಾಪನೆ

ಜಿಲ್ಲೆಯ ಎಲ್ಲಾ ಸರಕಾರಿ ಕಚೇರಿಗಳು ತಮ್ಮ ಕಟ್ಟಡದಲ್ಲಿನ ವಿದ್ಯುತ್ ಬಳಕೆಯಲ್ಲಿ ಸ್ವಾವಲಂಬನೆ ಸಾಧಿಸುವ ಮತ್ತು ಪರಿಸರ ಸ್ನೇಹಿಯಾಗಿ ವಿದ್ಯುತ್ ಉತ್ಪಾದಿಸುವ ನಿಟ್ಟಿನಲ್ಲಿ ಪ್ರಧಾನ ಮಂತ್ರಿ ಸೂರ್ಯ ಘರ್ ಯೋಜನೆಯಡಿ ಉತ್ತರ ಕನ್ನಡ ಜಿಲ್ಲೆಯ 2551 ಸರಕಾರಿ ಕಟ್ಟಡಗಳ ಮೇಲ್ಛಾವಣಿಗಳ ಮೇಲೆ ಸೋಲಾರ್ ಘಟಕಗಳನ್ನು ಸ್ಥಾಪಿಸುವ ಕಾರ್ಯ ಪ್ರಗತಿಯಲ್ಲಿದೆ.

ಹೆಸ್ಕಾಂ ಇಲಾಖೆಯಲ್ಲಿನ ಆರ್. ಆರ್. ಸಂಖ್ಯೆಯ ಮಾಹಿತಿಯಂತೆ ಉತ್ತರ ಕನ್ನಡ ಜಿಲ್ಲೆಯಲ್ಲಿ ಒಟ್ಟು 2697 ಸರಕಾರಿ ಕಟ್ಟಡಗಳಿದ್ದು ಅವುಗಳಲ್ಲಿ 73 ಕಟ್ಟಡಗಳ ಮೇಲ್ಛಾವಣಿಯಲ್ಲಿ ಈಗಾಗಲೇ ವಿವಿಧ ಯೋಜನೆಗಳ ಮೂಲಕ ಸೌರ ವಿದ್ಯುದೀಕರಣ ಆಗಿದ್ದು, 73 ಕಟ್ಟಡಗಳಲ್ಲಿ ವಿವಿಧ ಕಾರಣಗಳಿಂದ ಸೋಲಾರ್ ಸ್ಥಾವರಗಳನ್ನು ಅಳವಡಿಸುವುದು ಕಾರ್ಯಸಾದ್ಯವಿಲ್ಲವೆಂದು ಗುರುತಿಸಲಾಗಿದ್ದು, ಬಾಕಿ ಉಳಿದ 2551 ಸರಕಾರಿ ಕಟ್ಟಡಗಳ ಕಟ್ಟಡಗಳ ಮೇಲ್ಛಾವಣಿಯಲ್ಲಿ ಸೌರ ವಿದ್ಯುತ್ ಸ್ಥಾವರ ಅಳವಡಿಸುವ ಕುರಿತಂತೆ ಸಮೀಕ್ಷೆ ಕಾರ್ಯ ಆರಂಭಿಸಲಾಗಿದೆ.

ಜಿಲ್ಲೆಯಲ್ಲಿ ಹೆಸ್ಕಾಂನ ಶಿರಸಿ ವಿಭಾಗದಲ್ಲಿ 650 ಸರಕಾರಿ ಕಟ್ಟಡಗಳಿದ್ದು, ಇವುಗಳಲ್ಲಿ ಈಗಾಗಲೇ 25 ಕಟ್ಟಡಗಳಿಗೆ ಸೌರ ವಿದ್ಯುದೀಕರಣ ಪೂರ್ಣಗೊಂಡಿದ್ದು, 625 ಕಟ್ಟಡಗಳ ಮೇಲ್ಛಾವಣಿಯಲ್ಲಿ ಸೋಲಾರ್ ಸ್ಥಾವರ ಅಳವಡಿಸಬಹುದಾಗಿದ್ದು, ದಾಂಡೇಲಿ ವಿಭಾಗದ 537 ಕಟ್ಟಡಗಳಲ್ಲಿ 26 ಕಟ್ಟಡಗಳಿಗೆ ಸೌರ ವಿದ್ಯುದೀಕರಣ ಪೂರ್ಣಗೊಂಡಿದ್ದು, 510 ಕಟ್ಟಡಗಳ ಮೇಲ್ಛಾವಣಿಯಲ್ಲಿ ಸೋಲಾರ್ ಸ್ಥಾವರ ಅಳವಡಿಸಬಹುದಾಗಿದೆ. ಕಾರವಾರ ವಿಭಾಗದ 1359 ಕಟ್ಟಡಗಳಲ್ಲಿ 12 ಕಟ್ಟಡಗಳಿಗೆ ಸೌರ ವಿದ್ಯುದೀಕರಣ ಪೂರ್ಣಗೊಂಡಿದ್ದು, 1277 ಕಟ್ಟಡಗಳ ಮೇಲ್ಛಾವಣಿಯಲ್ಲಿ ಸೋಲಾರ್ ಸ್ಥಾವರ ಅಳವಡಿಸಬಹುದಾಗಿದ್ದು 70 ಕಟ್ಟಡಗಳಲ್ಲಿ ಸ್ಥಾವರಗಳನ್ನು ಅಳವಡಿಸುವುದು ಕಾರ್ಯಸಾದ್ಯವಿಲ್ಲವಾಗಿದೆ. ಹೊನ್ನಾವರ ವಿಭಾಗದ 151 ಕಟ್ಟಡಗಳಲ್ಲಿ 10 ಕಟ್ಟಡಗಳಿಗೆ ಸೌರ ವಿದ್ಯುದೀಕರಣ ಪೂರ್ಣಗೊಂಡಿದ್ದು, 139 ಕಟ್ಟಡಗಳ ಮೇಲ್ಛಾವಣಿಯಲ್ಲಿ ಸೋಲಾರ್ ಸ್ಥಾವರ ಅಳವಡಿಸಬಹುದಾಗಿದ್ದು 2 ಕಟ್ಟಡಗಳಲ್ಲಿ ಸ್ಥಾವರಗಳನ್ನು ಅಳವಡಿಸುವುದು ಕಾರ್ಯಸಾದ್ಯವಿಲ್ಲವಾಗಿದೆ.

ಪ್ರಸ್ತುತ ಈಗಾಗಲೇ ಸೌರ ವಿದ್ಯುದೀಕರಣಗೊಂಡಿರುವ 73 ಸರಕಾರಿ ಕಟ್ಟಡಗಳಲ್ಲಿ ಒಟ್ಟು 406.86 ಕಿ.ವ್ಯಾ ಸಾಮರ್ಥ್ಯದ ವಿದ್ಯುತ್ ಉತ್ಪಾದನೆಯಾಗುತ್ತಿದ್ದು, ಸೌರ ವಿದ್ಯುದೀಕರಣಗೊಳಿಸಲು ಗುರುತಿಸಲಾಗಿರುವ 2551 ಸರಕಾರಿ ಕಟ್ಟಡಗಳಿಂದ 73,299 ಕಿ.ವ್ಯಾ, ವಿದ್ಯುತ್ ಉತ್ಪಾದನೆಯಾಗುವ ಗುರಿ ಹೊಂದಲಾಗಿದೆ. ಜಿಲ್ಲೆಯ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ಗ್ರಾಮ ಪಂಚಾಯತ್, ಕಂದಾಯ ಇಲಾಖೆ, ಪೊಲೀಸ್ ಇಲಾಖೆ, ಶಾಲೆಗಳು, ಅಂಗನವಾಡಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮತ್ತು ಮೇಲ್ಛಾವಣಿಯ ಸ್ಥಿತಿಗತಿ ಕುರಿತಂತೆ ಸಮಗ್ರ ವರದಿ ಸಂಗ್ರಹಿಸಲಾಗುತ್ತಿದ್ದು, ಈ ಕಟ್ಟಡಗಳ ಮೇಲ್ಛಾವಣಿಯಲ್ಲಿ ಸೋಲಾರ್ ಘಟಕಗಳನ್ನು ಅಳವಡಿಸುವ ಕುರಿತಂತೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ನಿಖರ ಮಾಹಿತಿ ಸಿದ್ದಪಡಿಸಲಿದ್ದು ಇದರ ಆಧಾರದಲ್ಲಿ ಹೆಸ್ಕಾಂ ಇಲಾಖೆ ವತಿಯಿಂದ ಕಟ್ಟಡಗಳ ಮೇಲ್ಛಾವಣಿಯಲ್ಲಿ ಸೋಲಾರ್ ಘಟಕಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಸಾಂಪ್ರದಾಯಿಕ ಮೂಲದಿಂದ ಉತ್ಪಾದಿಸುವ ವಿದ್ಯುತ್ ಉತ್ಪಾದನೆಯ ವೆಚ್ಚದಲ್ಲಿ ದಿನೇ ದಿನೇ ಹೆಚ್ಚಳವಾಗುತ್ತಿರುವುದು ಮಾತ್ರವಲ್ಲದೇ ಪರಿಸರ ಮತ್ತು ಜೀವ ವೈವಿಧ್ಯತೆಯ ಮೇಲೆ ಉಂಟಾಗುವ ವ್ಯತಿರಿಕ್ತ ಪರಿಣಾಮಗಳು ಉಂಟಾಗುತ್ತಿದ್ದು, ಈ ವಿದ್ಯುತ್ ಮೂಲಗಳು ಕಾಲಕ್ರಮೇಣ ನಶಿಸಲಿವೆ. ಸೂರ್ಯಶಕ್ತಿಯಿಂದ ಪಡೆಯುವ ವಿದ್ಯುತ್‌ಗೆ ಯಾವುದೇ ಮೊತ್ತವನ್ನು ಪಾವತಿಸಬೇಕಾಗಿಲ್ಲ ಮತ್ತು ಶಾಶ್ವತ ಮತ್ತು ನಿರಂತರವಾಗಿ ವಿದ್ಯುತ್ ಪಡೆಯಬಹುದಾಗಿರುವುದು ಮಾತ್ರವಲ್ಲದೇ ಇದು ಪರಿಸರ ಸ್ನೇಹಿಯಾಗಿರುವುದರ ಜೊತೆಗೆ ಕಟ್ಟಡಗಳ ಮೇಲ್ಛಾವಣಿಯನ್ನು ವ್ಯವಸ್ಥಿತ ರೀತಿಯಲ್ಲಿ ಬಳಕೆ ಮಾಡಿಕೊಳ್ಳಲು ಸಾಧ್ಯವಾಗಲಿದೆ.

ಪ್ರಧಾನ ಮಂತ್ರಿ ಸೂರ್ಯ ಘರ್ ಯೋಜನೆಯಡಿ ದೇಶದಾದ್ಯಂತ 1 ಕೋಟಿ ಕುಟುಂಬಗಳಿಗೆ ಸೌರ ಮೇಲ್ಛಾವಣಿ ಸ್ಥಾಪಿಸುವ ಗುರಿ ಹೊಂದಲಾಗಿದೆ. ಇದರಿಂದ ಪ್ರತಿ ಮನೆಗೆ ತಿಂಗಳಿಗೆ 300 ಯೂನಿಟ್ ವರೆಗೆ ಉಚಿತ/ಕಡಿಮೆ ದರದ ವಿದ್ಯುತ್ ಒದಗಿಸಲು ಸಹಾಯ ಮಾಡಲಾಗುತ್ತಿದೆ. ಈ ಯೋಜನೆಯಿಂದ ಗ್ರಾಹಕರು ತಮ್ಮ ಮನೆಗೆ ತಾವೇ ವಿದ್ಯುತ್ ಉತ್ಪಾದಿಸುವ ಜೊತೆಗೆ ಹೆಚ್ಚುವರಿ ವಿದ್ಯುತ್‌ನ್ನು ಹೆಸ್ಕಾಂಗೆ ನೀಡಿ ಆರ್ಥಿಕ ಲಾಭ ಪಡೆಯಬಹುದಾಗಿದೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಮನೆಗಳ ಮೇಲ್ಛಾವಣಿಯಲ್ಲಿ ಸೋಲಾರ್ ಘಟಕ ಅಳವಡಿಸಲು 1849 ಸಾರ್ವಜನಿಕರು ಈಗಾಗಲೇ ಅರ್ಜಿ ಸಲ್ಲಿಸಿದ್ದಾರೆ. ಭಟ್ಕಳ ತಾಲೂಕಿನ ಹೆಬ್ಳೆ ಗ್ರಾಮವನ್ನು ಮಾದರಿ ಸೌರ ಗ್ರಾಮ ಯೋಜನೆಗೆ ಆಯ್ಕೆ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದ್ದು, 79 ನೀರಾವರಿ ಪಂಪ್‌ಸೆಟ್‌ಗಳಿಗೆ ಸೋಲಾರ್ ಪಂಪ್‌ಸೆಟ್ ಅಳವಡಿಸುವ ಕಾರ್ಯ ಪ್ರಗತಿಯಲ್ಲಿದೆ. ಪ್ರಸ್ತುತ ಜಿಲ್ಲೆಯ ಎಲ್ಲಾ ಸರಕಾರಿ ಕಟ್ಟಡಗಳ ಮೇಲ್ಛಾವಣಿಗಳ ಮೇಲೆ ಸೋಲಾರ್ ಘಟಕಗಳನ್ನು ಸ್ಥಾಪಿಸುವ ಕುರಿತಂತೆ ಕಟ್ಟಡಗಳ ಸ್ಥಿತಿಗತಿ ಮತ್ತು ಸ್ಥಳಾವಕಾಶದ ಕುರಿತು ಸಮೀಕ್ಷೆ ಕೈಗೊಳ್ಳಲಾಗಿದ್ದು, ಸಮೀಕ್ಷೆ ನಂತರ ಆದಷ್ಟು ಶೀಘ್ರದಲ್ಲಿ ಸರಕಾರಿ ಕಟ್ಟಡಗಳ ಮೇಲೆ ಸೋಲಾರ್ ಘಟಕಗಳನ್ನು ಅಳವಡಿಸುವ ಕಾರ್ಯ ನಡೆಯಲಿದೆ. ದೀಪಕ್ ಕಾಮತ್, ಅಧೀಕ್ಷ ಕ ಇಂಜಿನಿಯರ್, ಹೆಸ್ಕಾಂ, ಶಿರಸಿ.

# ಬೆಲ್ಲದ ಹಣ್ಣಿನಲ್ಲಿದೆ ಔಷಧೀಯ ಗುಣ



ಯಾವಕಾಲದಲ್ಲಾದರೂ ಎಲ್ಲಾ ಹಣ್ಣುಗಳು ಸಿಗುತ್ತವೆ ಆದರೆ ಈ ಬೇಲದ ಹಣ್ಣು ಮಾತ್ರ ಆಯಾ ಕಾಲಕ್ಕೆ ಮಾತ್ರ ಸಿಗುತ್ತದೆ. ಈ ಹಣ್ಣಿನಲ್ಲಿ ಹಲವಾರು ಔಷಧಿಗುಣಗಳು ಅಡಗಿವೆ. ಕಫ ನಿವಾರಣೆಗೆ ಬಾಯಿಂದತ ಬರುವ ದುರ್ವಾಸನೆ ತಡಗಟ್ಟಲು ವಸಡುಗಳ ತೊಂದರೆ ಇದ್ದವರು ಹಾಗೂ ಆಮಶಂಕೆ ಭೇಧಿಯ ನಿವಾರಣೆಗೆ ಹಣ್ಣಾದ ಬೇಲದ ಹಣ್ಣಿನಿಂದ ಮೂಲವ್ಯಾಧಿ ಹಾಗೂ ಸಕ್ಕರೆ ಖಾಯಿಲೆಯವರು ಬಳಸ ಬಹುದು.

ಬೇಲದ ಹಣ್ಣಿಗೆ ಸಮಪ್ರಮಾಣ ಕಲ್ಲುಸಕ್ಕರೆ ಬೆರೆಸಿ ಸೇವಿಸಿದರೆ ಕಫ ಕಡಿಮೆಯಾಗುತ್ತದೆ.

ಆಮಶಂಕೆ ಭೇದಿಯಾಗುತ್ತಿದ್ದರೆ ಬೀಜಗಳನ್ನು ತೆಗೆದ ಬೇಲದ ಕಾಯಿಯ ತಿರುಳನ್ನು ನುಣ್ಣಗೆ ರುಬ್ಬಿ ಸೇವಿಸಿದರೆ ಭೇದಿ ನಿಲ್ಲುತ್ತದೆ.

ಬೇಲದ ಎಳೆಗಳ ರಸಕ್ಕೆ ಸೈನದವ ಉಪ್ಪು ಮತ್ತು ಬಿಸಿ ನೀರನ್ನು ಸೇರಿಸಿ ಸೇವಿಸಿದರೆ ಅಸ್ತಮಾ ಕಡಿಮೆಯಾಗುತ್ತದೆ.

ಬಿಕ್ಕಳಿಕೆ ಸಮಸ್ಯೆಯಿಂದ ಬಳಲುತ್ತಿದ್ದರೆ ಬೇಲದ ಹಣ್ಣಿನ ರಸ ಮತ್ತು ನೆಲ್ಲಿಕಾಯಿ ರಸ ಸೇವಿಸಿ ದಿನಕ್ಕೆ 2 ಚಮಚ ಸೇವಿಸಿದರೆ ಬಿಕ್ಕಳಿಕೆ ನಿಲ್ಲುತ್ತದೆ ಬೇಲದ ಹಣ್ಣಿನ ರಸಕ್ಕೆ ಒಣಶುಂಠಿ ಪುಡಿ ಮತ್ತು ಬೆಲ್ಲ ಸೇರಿಸಿ ಸೇವಿಸಿದರೆ ತಾಯಿಯ ಎದೆಹಾಲು ವೃದ್ಧಿಸುತ್ತದೆ. ಶರೀರವನ್ನು ತಂಪುಗೊಳಿಸಲು ಮತ್ತು ಬಾಯಿಯ ದುರ್ಗಂಧವನ್ನು ನಿವಾರಣೆ ಮಾಡಲು ಬೇಲದ ಹಣ್ಣಿನ ಪಾನಕವನ್ನು ಸೇವಿಸಬೇಕು.

# ಆರೋಗ್ಯಕರ ಮತ್ತು ಮೊಡವೆ ರಹಿತ ತ್ವಚೆ ಪಡೆಯಬೇಕೆ? ಈ ನೈಸರ್ಗಿಕ ಜ್ಯೂಸ್ ಸೇವಿಸಿ!



ತ್ವಚೆಯ ವಿಚಾರದಲ್ಲಿ ಸಾಮಾನ್ಯವಾಗಿ ಎಲ್ಲರೂ ಹೆಚ್ಚು ಆಸಕ್ತಿವಹಿಸಬೇಕಾಗುತ್ತದೆ. ಕೆಲವೊಮ್ಮೆ ಹೆಚ್ಚಿದ ಮೊಡವೆಯಿಂದ ನಿಮ್ಮ ಮುಖದ ಕಾಂತಿಯು ಕಳೆಗುಂದುತ್ತದೆ. ಮೊಡವೆಗೆ ಕಾರಣಗಳು ಹಲವಾರು ಇರಬಹುದು. ಇದಕ್ಕಾಗಿ ಮಾರುಕಟ್ಟೆಯಲ್ಲಿ ಹಲವಾರು ಪರಿಹಾರಗಳು ಸಿಗಬಹುದು ಆದರೆ ಅವೆಲ್ಲವೂ ಕೆಮಿಕಲ್ ಯುಕ್ತವಾಗಿದ್ದು ತ್ವಚೆಗೆ ಹಾನಿಯಾಗಬಹುದು.

ಆರೋಗ್ಯಕರ ಮತ್ತು ಮೊಡವೆ ರಹಿತ ತ್ವಚೆ ಪಡೆಯಬೇಕೆ? ಈ ನೈಸರ್ಗಿಕ ಜ್ಯೂಸ್ ಸೇವಿಸಿ!

ತ್ವಚೆಯ ಆರೋಗ್ಯವಹಿಸುವುದು ಅತ್ಯಂತ ಮುಖ್ಯವಾಗುತ್ತದೆ. ಅದರಲ್ಲೂ ಮೊಡವೆಯುಕ್ತ ತ್ವಚೆಯು ಕಿರಿಕಿರಿಯನ್ನುಂಟು ಮಾಡುವುದು ಸಹಜ . ಮೊಡವೆ ಹೋಗಲಾಡಿಸಲು ಮಾರುಕಟ್ಟೆಯಲ್ಲಿ ನಾನಾ ಉತ್ಪನ್ನಗಳು ಸಿಗಬಹುದು.ಆದರೆ ಅವುಗಳಲ್ಲಿ ರಾಸಾಯನಿಕಗಳು ಸೇರಿರುವುದರಿಂದ ಕೆಲವೊಮ್ಮೆ ಅಡ್ಡ ಪರಿಣಾಮಗಳೂ ಉಂಟಾಗುವ ಸಾಧ್ಯತೆಗಳು ಇರುತ್ತವೆ.

ಹಾಗಾಗಿ ಸಾಮಾನ್ಯವಾಗಿ ತ್ವಚೆಯ ವಿಷಯ ಬಂದಾಗ ನಾವು ನೈಸರ್ಗಿಕ ಪರಿಹಾರವನ್ನು ಪ್ರಯತ್ನಿಸುತ್ತೇವೆ. ಮೊಡವೆ ರಹಿತ ತ್ವಚೆಯನ್ನು ಪಡೆಯಲು ಕೆಲವು ತರಕಾರಿ ಮತ್ತು ಹಣ್ಣುಗಳ ಪಾನೀಯಗಳು ಅತ್ಯುತ್ತಮ ಎನ್ನಲಾಗುಗುತ್ತವೆ. ಈ ಜ್ಯೂಸ್ ಗಳು ಮೊಡವೆ ವಿರೋಧಕಗಳಾಗಿ ಕೆಲಸ ಮಾಡುತ್ತವೆ.

**ನೈಸರ್ಗಿಕ ಪಾನೀಯಗಳು**

ಅಂದರೆ ಇವುಗಳಲ್ಲಿ ತ್ವಚೆಗೆ ಬೇಕಾಗುವ ವಿಟಮಿನ್ ಗಳು, ಉರಿಯೂತದ ವಿರುದ್ಧ ಹೋರಾಡುವ ಉತ್ಕರ್ಷಣ ನಿರೋಧಕಗಳು, ತ್ವಚೆಯನ್ನು ನಿರ್ವಿಷಗೊಳಿಸುತ್ತಾ ತ್ವಚೆಯ ಸಮಸ್ಯೆಯನ್ನು ಗುಣಪಡಿಸುವ ಗುಣವನ್ನು ಹೊಂದಿರುತ್ತವೆ.

ಇನ್ನಿತರ ಸಮತೋಲಿತ ಆಹಾರದ ಜೊತೆಗೆ ನಿಯಮಿತವಾಗಿ ಇಂತಹ ನೈಸರ್ಗಿಕ ಪಾನೀಯಗಳ ಸೇವನೆಯು ಮೊಡವೆಗಳನ್ನು ಹೋಗಲಾಡಿಸಲು ಸಹಾಯ ಮಾಡುತ್ತದೆ . ಪೌಷ್ಟಿಕ ತಜ್ಞೆ ಸಲೋನಿ ಅವರು ತಮ್ಮ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಈ ಕೆಲವು ಪಾನೀಯಗಳು ಮೊಡವೆ ಹೋಗಲಾಡಿಸಿ ಆರೋಗ್ಯಕರ ತ್ವಚೆ ಪಡೆಯಲು ಅತ್ಯುತ್ತಮ ಎಂದು ಹಂಚಿಕೊಳ್ಳುತ್ತಾರೆ. ಅವು ಯಾವುವು ನೋಡೋಣ.

**ಅನಾನಸು**

ಅನಾನಸ್ ನಲ್ಲಿ ಬ್ರೊಮೆಲೈನ್ ಎನ್ನುವ ಕಿಣ್ವ ಇದ್ದು, ಇದು ನೈಸರ್ಗಿಕ ಉರಿಯೂತ ವಿರೋಧಿ ಗುಣ ಲಕ್ಷಣಗಳನ್ನು ಹೊಂದಿದೆ. ಅಂದರೆ ಬ್ರೊಮೆಲಿನ್ ಚರ್ಮದಲ್ಲಿನ ಅಥವಾ ಮೊಡವೆಯ ಸಾಮಾನ್ಯ ಲಕ್ಷಣಗಳಾದ ಊತ, ಕಿರಿ ಕಿರಿ ಮತ್ತು ಕೆಂಪು ಬಣ್ಣವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಉರಿಯೂತವನ್ನು ಕಡಿಮೆ ಮಾಡುವ ಮೂಲಕ ಅನಾನಸ್ ಚರ್ಮವನ್ನು ಶಾಂತಗೊಳಿಸಲು ಸಹಾಯ ಮಾಡುತ್ತದೆ ಮತ್ತು ಯಾವುದೇ ಚರ್ಮದ ಒಡೆಯುವಿಕೆ , ಕೆಂಪಾಗುವಿಕೆ ಇತ್ಯಾದಿಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಅನಾನಸನ್ನು ಸೇವಿಸುವುದು ಅಥವಾ ತ್ವಚೆಯ ಆರೈಕೆಯಲ್ಲಿ ಇದನ್ನು ಬಳಸುವುದರಿಂದ ಮೊಡವೆ ಪೀಡಿತ ಚರ್ಮವನ್ನು ಸುಧಾರಿಸುವಲ್ಲಿ ಅತ್ಯಂತ ಉಪಯೋಗಕಾರಿ.

**ಸೇಬು ಹಣ್ಣು**

ಸೇಬು ಹಣ್ಣಿನ ಸೇವನೆಯು ಒಟ್ಟಾರೆ ಆರೋಗ್ಯಕ್ಕೆ ಅತ್ಯುತ್ತಮವಾದುದಾಗಿದೆ. ಇದನ್ನು ಜ್ಯೂಸ್ ಮೂಲಕವೂ ಸೇವಿಸಬಹುದು. ಈ ಹಣ್ಣು ವಿಟಮಿನ್ ಸಿ ಯ ಸಮೃದ್ದ ಮೂಲವಾಗಿದೆ. ಇದು ಶಕ್ತಿಯುತವಾದ ಉತ್ಕರ್ಷಣ ನಿರೋಧಕವಾಗಿದೆ. ಈ ಎಲ್ಲಾ ಗುಣಗಳನ್ನು ಹೊಂದಿರುವ ಸೇಬು ಹಣ್ಣು ಕಾಲಜನ್ ಉತ್ಪಾದನೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

ಕಾಲಜನ್ ಒಂದು ಪ್ರೊಟೀನ್ ಆಗಿದ್ದು, ಇದು ಚರ್ಮವನ್ನು ದೃಢವಾಗಿ , ಮೃದುವಾಗಿಡಲು ಸಹಾಯ ಮಾಡುತ್ತದೆ.





ಅಲ್ಲದೆ ಚರ್ಮದ ಸ್ಥಿತಿಸ್ಥಾಪಕತ್ವವನ್ನು ಕಾಪಾಡುತ್ತದೆ. ಈ ಹಣ್ಣಿನ ಸೇವನೆಯು ಕಾಲಜನ್ ಮಟ್ಟವನ್ನು ಹೆಚ್ಚಿಸುವುದಲ್ಲದೆ , ಇದರಲ್ಲಿರುವ ವಿಟಮಿನ್ ಸಿ ಯು ಸುಕ್ಕುಗಳು, ಸೂಕ್ಷ್ಮ ರೇಖೆಗಳು ಮತ್ತು ಇನ್ನಿತರ ಚರ್ಮದ ಸಮಸ್ಯೆಯನ್ನು ಕಡಿಮೆ ಮಾಡುತ್ತದೆ. ಅಷ್ಟೇ ಅಲ್ಲದೆ ವಿಟಮಿನ್ ಸಿ ಯು ಅಕಾಲಿಕ ವಯಸ್ಸಾಗುವಿಕೆಗೆ ಕಾರಣವಾಗಬಲ್ಲ ಸ್ವತಂತ್ರ ರಾಡಿಕಲ್ ಗಳಿಂದ ಉಂಟಾಗುವ ಹಾನಿಯಿಂದ ಚರ್ಮವನ್ನು ರಕ್ಷಿಸಲು ಸಹಾಯ ಮಾಡುತ್ತದೆ. ಇವೆಲ್ಲಾ ಕಾರಣಗಳಿಂದ ಸೇಬು ಹಣ್ಣಿನ ಸೇವನೆಯು ನಿಮ್ಮ ಒಟ್ಟಾರೆ ಚರ್ಮದ ಆರೋಗ್ಯವನ್ನು ಬೆಂಬಲಿಸುತ್ತದೆ. ಮತ್ತು ಚರ್ಮವು ಹೊಳೆಯುವಂತೆ ಮಾಡಲು ಸಹಾಯ ಮಾಡುತ್ತದೆ.

**ಸೌತೆಕಾಯಿ**

ಸೌತೆಕಾಯಿಯ ಹೆಚ್ಚಿನ ಭಾಗವು ನೀರಿನಿಂದ ಕೂಡಿರುವುದಾಗಿದ್ದು, ಇದು ತ್ವಚೆಯ ತೇವಾಂಶವನ್ನು ಕಾಪಾಡಲು ಅತ್ಯಂತ ಸಹಾಯಕಾರಿ. ತ್ವಚೆಯನ್ನು ಹೊಳೆಯುವಂತೆ ಮತ್ತು ಚರ್ಮದ ಆರೋಗ್ಯವನ್ನು ನಿರ್ವಹಿಸುವಲ್ಲಿ ಮಹತ್ತರ ಪಾತ್ರವಹಿಸುತ್ತದೆ. ಸೌತೆಕಾಯಿಯ ತನ್ನಲ್ಲಿರುವ ತೇವಾಂಶ ಕಾಪಾಡುವ ಗುಣದಿಂದಾಗಿ, ಇದರ ಸೇವನೆಯಿಂದ ಚರ್ಮವು ಒಣಗುವುದು ಅಥವಾ ಮೊಡವೆಗಳನ್ನು ಹದಗೆಡಿಸುವ ಶುಷ್ಕತೆ ಅಥವಾ ಕಿರಿಕಿರಿಯನ್ನು ತಡೆಯಲು ಸಹಾಯ ಮಾಡುತ್ತದೆ. ನೀರಿನ ಜೊತೆಗೆ ಸೌತೆಕಾಯಿಯಲ್ಲಿ ಚರ್ಮದ ಪೋಷಣೆಗೆ ಕೊಡುಗೆ ನೀಡುವಂತಹ ವಿಟಮಿನ್ ಸಿ, ವಿಟಮಿನ್ ಕೆ ಹಾಗೂ ಪೊಟ್ಯಾಸಿಯಂ ಮತ್ತು ಮೆಗ್ನೀಸಿಯಮ್ ನಂತಹ ಖನಿಜಗಳಿಂದ ಸಮೃದ್ದವಾಗಿದೆ . ಸೌತೆಕಾಯಿಯ ಸೇವನೆಯು ಒಟ್ಟಾರೆ ಚರ್ಮದ ಆರೋಗ್ಯಕ್ಕೆ ಕೊಡುಗೆ ನೀಡುವುದಲ್ಲದೆ, ಇದರ ಪೋಷಕಾಂಶಗಳು ಸ್ಥಿತಿಸ್ಥಾಪಕತ್ವನ್ನು ಸುಧಾರಿಸಲು ಮತ್ತು ಉರಿಯೂತ ಶಮನಗೊಳಿಸಲು ಸಹಕರಿಸುತ್ತದೆ. ಅಲ್ಲದೆ ಆರೋಗ್ಯಕರ ಚರ್ಮದ ಕಾಂತಿಯನ್ನು ಹೊಂದುವಲ್ಲಿ ಇದು ಸಹಾಯ ಮಾಡುತ್ತದೆ.

# ಬಾದಾಮಿಯನ್ನು ಜೇನುತುಪ್ಪದಲ್ಲಿ ನೆನೆಸಿ ತಿನ್ನೋದರ ಪ್ರಯೋಜನಗಳಿವು

ಬಾದಾಮಿ ಹಾಗೂ ಜೇನುತುಪ್ಪ ಎರಡೂ ಆರೋಗ್ಯಕರ ಆಹಾರಗಳಾಗಿವೆ. ಇವುಗಳ ಸೇವನೆಯು ಆರೋಗ್ಯಕ್ಕೆ ಸಾಕಷ್ಟು ಪ್ರಯೋಜನಗಳನ್ನು ನೀಡುತ್ತದೆ. ರೋಗ ನಿರೋಧಕ ಶಕ್ತಿ ಹೆಚ್ಚಿಸುವುದರಿಂದ ಹಿಡಿದು ತೂಕ ಇಳಿಸುವವರೆಗೂ ಇದು ಸಹಕಾರಿಯಾಗಿದೆ. ಅವುಗಳ ಬಗ್ಗೆ ನಾವಿಲ್ಲಿ ತಿಳಿಯೋಣ.

ಬಾದಾಮಿಯನ್ನು ಹುರಿದು ತಿನ್ನುವುದು ಅಥವಾ ರಾತ್ರಿ ನೀರಿನಲ್ಲಿ ನೆನೆಸಿಟ್ಟು ಬೆಳಗ್ಗೆ ಸಿಪ್ಪೆ ತೆಗೆದು ತಿನ್ನುವುದರಿಂದ ಆರೋಗ್ಯಕ್ಕೆ ಹಲವಾರು ಪ್ರಯೋಜನಗಳಿವೆ ಎನ್ನುವುದನ್ನು ನೀವು ಕೇಳಿರಬಹುದು. ಆದರೆ ಜೇನುತುಪ್ಪದಲ್ಲಿ ನೆನೆಸಿದ ಬಾದಾಮಿಯನ್ನು ತಿನ್ನುವುದರಿಂದ ಹಲವಾರು ಆರೋಗ್ಯ ಪ್ರಯೋಜನಗಳನ್ನು ಪಡೆಯಬಹುದು ಎಂದು ನಿಮಗೆ ತಿಳಿದಿದೆಯೇ.

ಬಾದಾಮಿ ಮತ್ತು ಜೇನು ಎರಡೂ ಪೋಷಕಾಂಶಗಳಲ್ಲಿ ಸಮೃದ್ಧವಾಗಿವೆ ಮತ್ತು ಅವುಗಳ ಸಂಯೋಜನೆಯು ದೇಹಕ್ಕೆ ಹಲವು ವಿಧಗಳಲ್ಲಿ ಪ್ರಯೋಜನವನ್ನು ನೀಡುತ್ತದೆ. ಪ್ರತಿದಿನ ಬೆಳಗ್ಗೆ ಜೇನುತುಪ್ಪದಲ್ಲಿ ನೆನೆಸಿದ ಬಾದಾಮಿಯನ್ನು ತಿನ್ನುವುದರಿಂದ ಏನೆಲ್ಲಾ ಪ್ರಯೋಜನಗಳನ್ನು ಪಡೆಯಬಹುದು ಎಂಬುದನ್ನು ತಿಳಿದುಕೊಳ್ಳೋಣ.

**ಜೇನು ಮತ್ತು ಬಾದಾಮಿಯಲ್ಲಿರುವ ಪೋಷಕಾಂಶಗಳು**



ಬಾದಾಮಿಯು ಪ್ರೋಟೀನ್, ಫೈಬರ್, ವಿಟಮಿನ್ ಇ, ಮೆಗ್ನೀಸಿಯಮ್ , ಪೊಟ್ಯಾಶಿಯಂ, ಸತು ಮತ್ತು ಇತರ ಅನೇಕ ಖನಿಜಗಳ ಉತ್ತಮ ಮೂಲವಾಗಿದೆ. ಇವು ಹೃದಯದ ಆರೋಗ್ಯಕ್ಕೆ ಒಳ್ಳೆಯದು, ಮೆದುಳಿಗೂ ಒಳ್ಳೆಯದು ಮತ್ತು ತೂಕ ಇಳಿಸಲು ಸಹ ಸಹಾಯ ಮಾಡುತ್ತದೆ.

ಜೇನುತುಪ್ಪವು ಆಂಟಿಆಕ್ಸಿಡೆಂಟ್, ಆಂಟಿಬ್ಯಾಕ್ಟೀರಿಯಲ್ ಮತ್ತು ಆಂಟಿಫಂಗಲ್ ಗುಣಗಳನ್ನು ಹೊಂದಿದೆ.

ಇದು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಮತ್ತು ಚರ್ಮವನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ. ಹಾಗಾಗಿ ಜೇನುತುಪ್ಪವನ್ನು ಆಯುರ್ವೇದಿಕ್ ಔಷಧಿಗಳಲ್ಲೂ ಬಳಸಲಾಗುತ್ತದೆ.

**ಜೀರ್ಣಾಂಗ ವ್ಯವಸ್ಥೆಯನ್ನು ಸುಧಾರಿಸುತ್ತದೆ**

ಬೀಜಗಳನ್ನು ಜೇನುತುಪ್ಪದಲ್ಲಿ ನೆನೆಸಿಟ್ಟರೆ ಅವುಗಳನ್ನು ಜೀರ್ಣಿಸಿಕೊಳ್ಳಲು ಸುಲಭವಾಗುತ್ತದೆ. ಬಾದಾಮಿ ಫೈಬರ್ ಅನ್ನು ಹೊಂದಿರುತ್ತದೆ, ಇದು ಜೀರ್ಣಕ್ರಿಯೆಯನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಇದು ಮಲಬದ್ಧತೆ ಮತ್ತು ಅಜೀರ್ಣದಂತಹ ಸಮಸ್ಯೆಗಳನ್ನು ತೊಡೆದುಹಾಕಲು ಸಹಾಯ ಮಾಡುತ್ತದೆ.

ಜೇನುತುಪ್ಪವು ಪ್ರೋಬಯಾಟಿಕ್‌ಗಳನ್ನು ಹೊಂದಿರುತ್ತದೆ, ಇದು ಕರುಳಿನ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ.



**ಹೃದಯದ ಆರೋಗ್ಯಕ್ಕೆ ಪ್ರಯೋಜನಕಾರಿ**

ಬಾದಾಮಿ ಆರೋಗ್ಯಕರ ಕೊಬ್ಬನ್ನು ಹೊಂದಿರುತ್ತದೆ ಅದು ಕೊಲೆಸ್ಟ್ರಾಲ್ ಮಟ್ಟವನ್ನು ಸುಧಾರಿಸುತ್ತದೆ. ಇದರಲ್ಲಿರುವ ಅಪರ್ಯಾಪ್ತ ಕೊಬ್ಬುಗಳು ಹೃದಯದ ಆರೋಗ್ಯಕ್ಕೆ ತುಂಬಾ ಒಳ್ಳೆಯದು.

ಇವು ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಲು ಮತ್ತು ಒಳ್ಳೆಯ ಕೊಲೆಸ್ಟ್ರಾಲ್ ಅನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ.

ಜೇನುತುಪ್ಪದಲ್ಲಿರುವ ಉತ್ಕರ್ಷಣ ನಿರೋಧಕಗಳು ಹೃದಯ ಸಂಬಂಧಿ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.ಹಾಗಂತ ಅಧಿಕ ಬಾದಾಮಿಯನ್ನು ತಿನ್ನಬಾರದು.



**ಚರ್ಮಕ್ಕೆ ಪ್ರಯೋಜನಕಾರಿ**

ಜೇನುತುಪ್ಪವು ಉತ್ಕರ್ಷಣ ನಿರೋಧಕ ಮತ್ತು ಉರಿಯೂತದ ಗುಣಲಕ್ಷಣಗಳನ್ನು ಹೊಂದಿದೆ. ಇದು ಚರ್ಮವನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ.

ಇದು ಮೊಡವೆ, ಕಲೆಗಳು ಮತ್ತು ಸುಕ್ಕುಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಬಾದಾಮಿಯಲ್ಲಿ ವಿಟಮಿನ್ ಇ ಇದ್ದು ಚರ್ಮಕ್ಕೆ ತೇವಾಂಶ ನೀಡುತ್ತದೆ.

**ರೋಗನಿರೋಧಕ ಶಕ್ತಿ ಹೆಚ್ಚಿಸುತ್ತದೆ**

ಜೇನುತುಪ್ಪವು ಉತ್ಕರ್ಷಣ ನಿರೋಧಕ ಮತ್ತು ಬ್ಯಾಕ್ಟೀರಿಯಾ ವಿರೋಧಿ ಗುಣಗಳನ್ನು ಹೊಂದಿದೆ, ಇದು ನಿಮ್ಮ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಇದರಿಂದ ಅನೇಕ ರೋಗಗಳನ್ನು ದೂರವಿಡಬಹುದು.

**ತೂಕ ನಷ್ಟಕ್ಕೆ ಸಹಾಯಕ**

ಬಾದಾಮಿಯಲ್ಲಿ ನಾರಿನಂಶ ಮತ್ತು ಪ್ರೊಟೀನ್ ಅಧಿಕವಿದ್ದು, ಕಡಿಮೆ ಕ್ಯಾಲರಿಯನ್ನು ಹೊಂದಿದೆ. ಇದು ನಿಮಗೆ ದೀರ್ಘಕಾಲ ಹೊಟ್ಟೆ ತುಂಬಿದ ಅನುಭವವನ್ನು ನೀಡುತ್ತದೆ.

ಇದು ಹಸಿವನ್ನು ಕಡಿಮೆ ಮಾಡುತ್ತದೆ ಹಾಗಾಗಿ ನೀವು ಕಡಿಮೆ ಆಹಾರ ಸೇವಿಸುತ್ತೀರಿ. ಜೇನುತುಪ್ಪವು ತೂಕವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

# ಕೋ.ಶಿವಾಪೂರ ಗ್ರಂಥಾಲಯದಲ್ಲಿ ಸಂವಿಧಾನದ ಕುರಿತು ಸಂಭ್ರಮಾಚರಣೆ




ಯರಗಟ್ಟಿ: ಸಮೀಪದ ಕೋಟೂರ ಶಿವಾಪೂರ ಗ್ರಾಮ ಪಂಚಾಯತಿಯ ಗ್ರಂಥಾಲಯ ಅರಿವು ಕೇಂದ್ರದಲ್ಲಿ ಮಂಗಳವಾರ ದಿ.26ರಂದು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಭಾವ ಚಿತ್ರಕ್ಕೆ ಕಾರ್ಯಧರ್ಶಿ ಎ ಎಸ್ ಮುಲ್ಲಾ ಪೂಜೆ ಸಲ್ಲಿಸಿದರು. ಇದಕ್ಕೂ ಮೂದಲಿಗೆ ಸಂವಿಧಾನ ಪಿಠಿಕೆ ಹೇಳುವುವದರ ಮೂಲಕ ಶಿಕ್ಷಕಿಯರಾದ ಶ್ರೀಮತಿ ರತ್ನಾ ದ್ಯಾವೂನಶಿ ಅವರಿಂದ ಓದಿಸಿ ತಿಳಿಸಲಾಯಿತು. ನಂತರ ಸಂವಿಧಾನದ ಕುರಿತು ಶಾಲಾ ಮಕ್ಕಳು ವಿವಿದ ಮಹಿಳಾ ಸಂಘದ ಪಧಾಧಿಕಾರಿಗಳಿಂದ ಪ್ರಬಂಧ ಸ್ಪರ್ದೆ, ಬಾಷನ, ಗಟ್ಟಿ ಓದು, ಮುಂತಾದ ಹಲವಾರ ಚಟುವಟಿಕೆ ಕಾರ್ಯಕ್ರಮಗಳು ಸಂಭ್ರಮದಿಂದ ಜರುಗಿದವು.

ಶಾಲಾ ಪ್ರಧಾನ ಗುರು ಮಂಜುನಾಥ ಕುಡ್ಲಿಂಗಪ್ಪಗೋಳ ಮಾತನಾಡಿ ಸಂವಿಧಾನ ಸಾಕ್ಷರತೆಗೆ ಮಹತ್ವ ನೀಡುತ್ತಾ ಸ್ವಾತಂತ್ರ ?ಯ ಸಮಾನತೆ ಸಹೋದರತೆ ಜಾತ್ಯಾತೀತೀತತೆ ಮತ್ತು ನ್ಯಾಯದ ತತ್ವಗಳನ್ನು ಆಧರಿಸಿ ಸಂವಿಧಾನದ ಮೌಲ್ಯಗಳ ಸಾರ್ವಜನಿಕರಿಗೆ ತಿಳಿಸಿದರು.

ಸಂದರ್ಬದಲ್ಲಿ ಡಾ. ಬಿ ಕೆ ಪಡೆಪ್ಪನವರ, ಶ್ರೀಮತಿ ಸರಸ್ವತಿ ಬೆಟಸೋರ, ಮಹಾದೇವ ಜಕ್ಕನ್ನವರ, ಮಹಾದೇವ ಹರಿಜನ, ಎಸ್ ಎಮ್ ಪಾಟೀಲ, ಮಹಾಂತೇಶ ಮಠಪತಿ, ಎಸ್ ಎಮ್ ಪಾಟೀಲ, ಗ್ರಾಪಂ ಶಿಬ್ಬಂದಿವರ್ಗ, ಶಾಲಾ ಮಕ್ಕಳು, ಗ್ರಾಮಸ್ಥರು ಮಹಿಳಾ ಸಂಘದ ಪಧಾಧಿಕಾರಿಗಳು ಉಪಸ್ಥಿತ–ರಿದ್ದರು.

# ದೇವಸ್ಥಾನದ ಕಾಂಕ್ರೀಟ್ ಕಾಮಗಾರಿಗೆ ಪೂಜೆ ಸಲ್ಲಿಸಿದ ಚನ್ನರಾಜ ಹಟ್ಟಿಹೊಳಿ



ಬೆಳಗಾವಿ : ಬೆಳಗಾವಿ ಗ್ರಾಮೀಣ ಕ್ಷೇತ್ರದ ಸಹ್ಯಾದ್ರಿ ನಗರದಲ್ಲಿರುವ ಶ್ರೀ ಮಹಾಬಳೇಶ್ವರ ದೇವಸ್ಥಾನದ ಮೇಲ್ಛಾವಣಿಗೆ ಕಾಂಕ್ರೀಟ್ ಹಾಕುವ ಕಾಮಗಾರಿಗೆ (ಸ್ಲ್ಯಾಬ್) ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಗುರುವಾರ ಪೂಜೆ ನೆರವೇರಿಸಿ, ಚಾಲನೆ ನೀಡಿದರು.

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ವಿಶೇಷ ಕಾಳಜಿ ಹಾಗೂ ಅವರ ಅನುದಾನದಡಿ ದೇವಸ್ಥಾನ ಜೀರ್ಣೋದ್ಧಾರಗೊಳ್ಳಲಿದ್ದು, ಸ್ಥಳೀಯ ನಿವಾಸಿಗಳ ಸಲಹೆ ಸೂಚನೆ ಪಡೆದು, ಕಾಮಗಾರಿಯನ್ನು ಆದ–'ಷ್ಟು ಬೇಗ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಚನ್ನರಾಜ ಹಟ್ಟಿಹೊಳಿ ಸೂಚಿಸಿದರು.

ಈ ವೇಳೆ ಸುರೇಶ ಜಾಡಗಿ, ಮಠಪತಿ, ಪ್ರಭಾಕರ ಮತ್ತಿಕಟ್ಟಿ, ವಿವೇಕ ಹಿರೇಮಠ, ಮನೋಹರ ಸದಲಗಿ, ಕೃಷ್ಣ ಕೊನೇರಿ ಸೇರಿದಂತೆ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

### ರಸ್ತೆಯಲ್ಲಿರುವ ಮೊಬೈಲ್ ಶಾಪ್ ತೆರವುಗೆ ಆಗ್ರಹಿಸಿ ಪುರಸಭೆ ಮುಂದೆ ಧರಣಿ ಸತ್ಯಾಗ್ರಹ

# ಪುರಸಭೆ ಅಧ್ಯಕ್ಷರು–ಮುಖ್ಯಾಧಿಕಾರಿ ಬರವಸೆಗೆ ಧರಣಿ ಸತ್ಯಾಗ್ರಹ ಅಂತ್ಯ



ಮುದ್ದೇಬಿಹಾಳ : ಪಟ್ಟಣದಲ್ಲಿ ಅತಿಕ್ರಮಣ ತೆರವಿನಲ್ಲಿ ತಾರತಮ್ಯ ಮಾಡಲಾಗಿದೆ ಎಂದು ಪರಶುರಾಮ ಮುರಾಳ ಹಾಗೂ ಯಲ್ಲಪ್ಪ ಅಜಮನಿ ಪುರಸಭೆ ಮುಂದೆ ಧರಣಿಗೆ ಕುಳಿತಿದ್ದರು ಧರಣಿ ನಿರತರ ಬಳಿ ಬಂದ ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ ಅವರಿಗೆ ಪುರಸಭೆ ಹಿಂದೆ ಮೊಬೈಲ್ ಸೆಂಟರ್ ತೆರವುಗೊಳಿಸಬೇಕೆಂದು ಧರಣಿನಿರತರು ಪಟ್ಟುಹಿಡಿದರು ಮಾತ್ರವಲ್ಲದೆ ತೆರವು ಕಾರ್ಯಾಚರಣೆಯಲ್ಲಿ ಜಾತಿ ತಾರತಮ್ಯ ಮಾಡಲಾಗಿದೆ ಎಂದು ಆರೋಪಿಸಿದರು.

ಇದಕ್ಕೆ ಪ್ರಕ್ರಿಯೆ ನೀಡಿದ ಪುರಸಭೆ ಅಧ್ಯಕ್ಷರು ಹಾಗೂ ಮುಖ್ಯಾಧಿಕಾರಿಗಳು ಪಟ್ಟಣದಲ್ಲಿ ಅತಿ–ಕ್ರಮಣ ಮಾಡಿಕೊಂಡು ಚರಂಡಿ ಹಾಗೂ ಪುಟಪಾತ್ ತೆರವು ಕಾರ್ಯಾಚರಣೆಯಲ್ಲಿ ಯಾವುದೇ ತಾರತಮ್ಯ ಮಾಡಿಲ್ಲ ಇಲ್ಲಿ ಜಾತಿ ಧರ್ಮದ ಪ್ರಶ್ನೆ ಬರುವುದಿಲ್ಲ ಸುಗಮ ಸಂಚಾರಕ್ಕೆ ನಗರದ ಸೌಂದರ್ಯಕರಣ–ಕ್ಕೆ ಅತಿಕ್ರಮಣ ತೆರವು ಮಾಡಲಾಗುತ್ತಿದೆ ಈಗಲೂ ಸಹ ತೆರವು ಕಾರ್ಯಾಚರಣೆ ಪ್ರಗತಿಯಲ್ಲಿದೆ ಒಂದೇ ವಿಷಯವನ್ನು ಇಟ್ಟುಕೊಂಡು ತೆರವು ಮಾಡಲು ಸಾಧ್ಯವಾಗುವುದಿಲ್ಲವೆಂದರು

ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಹ–ರೀಶ ನಾಟಿಕಾರ, ಪರಶುರಾಮ ಮುರಾಳ ರಸ್ತೆಯಲ್ಲಿರುವ ಮೊಬೈಲ್ ಶಾಪ್ ತೆರವು ಮಾಡಿ ಅಥವಾ ತೆರೆವು ಮಾಡುವವರುಗೆ ಸೀಜ್ ಮಾಡಿ ಎಂದರು ,ಯಲ್ಲಪ್ಪ ಅಜಮನಿ ಪಟ್ಟಣದಲ್ಲಿರುವ ಎಲ್ಲಾ ಅತಿಕ್ರಮಣ ಸಂಪೂರ್ಣ ತೆರವುಗೂಳಿಸಬೇಕು ಇದರಲ್ಲಿ ತಾರತಮ್ಯ ಮಾಡಲಾಗಿದೆ ಎಂದರು.

ಪುರಸಭೆಯ ಸಾಮಾನ್ಯ ಸಭೆಯಲ್ಲಿ ಅತಿಕ್ರಮಣ ತೆರವು ಸಂಬಂಧಿಸಿದ ಚರ್ಚಿಸಲಾಗುತ್ತದೆ ಅದರಲ್ಲಿ ಧರಣಿ ನಿರತರ ಬೇಡಿಕೆ ಸಹ ಚರ್ಚಿಸಿ ಪಟ್ಟಣದಲ್ಲಿಯ ಉಳಿದ ಅತಿಕ್ರಮಣ ತೆರವುಗೂಳಿಸುವಾಗ ಈ ಮೊಬೈಲ್ ಶಾಪ್ ಸಹ ತೆರವುಗೂಳಿಸಲಾಗುತ್ತದೆ ಎಂದು ಧರಣಿ ನಿರತರ ಮನವೊಲಿಸುವಲ್ಲಿ ಮುಖ್ಯಾಧಿಕಾರಿಗಳು ಪುರಸಭೆ ಅಧ್ಯಕ್ಷರು ಯಶಸ್ವಿಯಾದರು ಡಿ.8 ವರಗೆ ಕಾಲಾವಕಾಶವನ್ನು ಧರಣಿ ನಿರತರು ನೀಡಿ ಧರಣಿಯನ್ನು ಅಂತ್ಯಗೂಳಿಸಿದರು. ಈ ವೇಳೆ ದಲಿತ ಮುಖಂಡ ಬಸವರಾಜ ಪೂಜಾರಿ ( ಸಿದ್ದಾಪುರ) ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ ,ನಾಮನಿರ್ದೇಶಿತ ಸದಸ್ಯರಾದ ಗೋಪಿ ಮಡಿವಾಳರ, ಸಂತೋಷ ನಾಯ್ಕೋಡಿ,ಹುಸೇನ್ ಹುಣಚಗಿ,ಸೇರಿದಂತೆ ಉಪಸ್ಥಿತರಿದ್ದರು.

# ಶಿಸ್ತು, ಆರೋಗ್ಯ, ಶುಚಿತ್ವ ಪ್ರತಿಯೊಬ್ಬರ ಜೀವನದ ಧ್ಯೇಯವಾಗಬೇಕು ಕುಲಪತಿ: ಪ್ರೊ.ಸಿ.ಎಂ.ತ್ಯಾಗರಾಜ



**ಬೆಳಗಾವಿ:** ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಪಂಡಿತ ದೀನದಯಾಳ ಉಪಾಧ್ಯಾಯ ಅಧ್ಯಯನ ಪೀಠ ಬೆಳಗಾವಿ, ಬೆಳಗಾವಿ ವೈದ್ಯಕೀಯ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಮತ್ತು ನ್ಯಾಷನಲ್ ಮೇಡಿಕೋಸ್ ಅಸೋಸಿಯೆಶನ್ ವತಿಯಿಂದ ಶುಕ್ರವಾರ ನವೆಂಬರ್ 29,2024 ರಂದು ಭೂತರಾಮನಹಟ್ಟಿ ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣಾ ಮತ್ತು ನೇತ್ರ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಯಿತು.

ನೀತಿಕತೆಯ ಮೂಲಕ ಎಲ್ಲ ವಿದ್ಯಾರ್ಥಿಗಳಿಗೆ ಆರೋಗ್ಯದ ಮಹತ್ವವನ್ನು ವಿವರಿಸುತ್ತಾ ಮಕ್ಕಳು ಸರಿಯಾದ ಸಮಯಕ್ಕೆ ಊಟ, ವ್ಯಾಯಾಮ, ನಿದ್ದೆ ಮಾಡಿ ಹೊರಗಿನ ಆಹಾರ ಕಡಿಮೆ ಸೇವನೆ ಮಾಡಿ ಆರೋಗ್ಯ ಕಾಪಾಡಿಕೊಳ್ಳುವದು ಇವತ್ತಿನ ದಿನಮಾನಗಳಲ್ಲಿ ಬಹಳ ಮುಖ್ಯವಾಗಿದೆ ಎಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಗೌರವಾನ್ವಿತ ಕುಲಪತಿಗಳಾದ ಪ್ರೊ. ಸಿ. ಎಂ. ತ್ಯಾಗರಾಜ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜೀವನದಲ್ಲಿ ಪ್ರತಿಯೊಬ್ಬರು ಶಿಸ್ತು, ಶುಚಿತ್ವ, ಸಂಯಮದಿಂದ ಕಲಿಕೆ ಕಡೆ ಗಮನ ಕೊಡಬೇಕು ಮತ್ತು ಆರೋಗ್ಯವನ್ನು ಕಾಪಾಡಿಕೊಂಡು ಸದಾ ಯಶಸ್ಸಿನೆಡೆಗೆ ಸಮಾಜದ ಒಳಿತಿಗಾಗಿ ಜೀವನ ನಡೆಸುವದು ಅವಶ್ಯ ಎಂದು ತಿಳಿಸಿದರು. ಸರಕಾರಿ ಮಾದರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ಭೂತರಾಮನಹಟ್ಟಿ ಮಕ್ಕಳ ಸಂಗೀತದ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ವಿವಿಧ ಆರೋಗ್ಯ ತಪಾಸಣಾ ಕಾರ್ಯಗಳ ಕುರಿತಾದ ಸವಿಸ್ತಾರ ಮಾಹಿತಿ ನೀಡಲಾಯಿತು. ಬೆಳಗಾವಿ ವೈದ್ಯಕೀಯ ಮಹಾವಿದ್ಯಾಲಯದ ಹಿರಿಯ ವ್ಯದ್ಯರಾದ ಡಾ. ಎ. ಎಸ್. ನಾಗಲಿಕರ, ಡಾ. ಕಿರಣ ಪಡಿಯಪ್ಪನವರ, ಎನ್.ಎಸ್.ಎಸ್. ಸಂಯೋಜಕರಾದ ಡಾ. ಮಂಜುನಾಥ ಕಾಂಬಳೆ ಹಾಗೂ ಪದವಿ ಮತ್ತು ಸ್ನಾತ್ತಕೊತ್ತರ ಪದವಿಯ 45 ಜನ ವೈದ್ಯರ ತಂಡ ಸರಿಸುಮಾರು 318 ಚಿಕ್ಕ ಮಕ್ಕಳ ಮತ್ತು 186 ಜನ ಗ್ರಾಮಸ್ಥರ ಆರೋಗ್ಯ ತಪಾಸಣೆ ಕೈಗೊಳ್ಳಲಾಯಿತು. ನೇತ್ರ, ಕಿವಿ, ಮೂಗು, ಗಂಟಲು, ಎಲುವು ಮತ್ತು ಕೀಲು, ಚರ್ಮ, ಸ್ತ್ರೀರೋಗ ಮತ್ತು ಪ್ರಸೂತಿ ವಿಭಾಗಗಳ ವೈದ್ಯರ ತಂಡ ಸಂಪೂರ್ಣ ಆರೋಗ್ಯ ತಪಾಸಣೆ ಮಾಡಿದರು. ಅಧ್ಯಯನ ಪೀಠದ ಸಹಾಯಕ ಪ್ರಾಧ್ಯಾಪಕರಾದ ಡಾ. ಶಿವಲಿಂಗಯ್ಯ ಗೋಠೆ ಕಾರ್ಯಕ್ರಮ ನಿರೂಪಿಸಿದರು. ಮತ್ತು ದೀನದಯಾಳ ಅಧ್ಯಯನ ಪೀಠದ ನಿರ್ದೇಶಕರಾದ ಪ್ರೊ. ಬಿ. ಎಸ್. ನಾವಿ ವಂದಿಸಿದರು. ಭೂತರಾಮನಹಟ್ಟಿ ಸರಕಾರಿ ಶಾಲೆಯ ಮುಖ್ಯೋಪಾಧ್ಯಾಯ ಶ್ರೀ. ಬಸವರಾಜ ಸುಂಗಾರಿ. ಎಸ್.ಡಿ.ಎಮ್.ಸಿ, ಅಧ್ಯಕ್ಷರು ಪರಸಪ್ಪ ಪಾಟೀಲ, ಸದಸ್ಯರಾದ ಈರಪ್ಪ ಪಾಟೀಲ, ಅನೀಲ, ಅಧ್ಯಯನ ಪೀಠದ ಸಹಾಯಕ ಸಂಶೋಧಕ ಯಲ್ಲಪ್ಪ ಮೂಡಲಗಿ ಹಾಗೂ ಶಾಲೆಯ ಶಿಕ್ಷಕ ವೃಂದ, ಗ್ರಾಮಸ್ಥರು ಮತ್ತು ವಿದ್ಯಾರ್ಥಿ/ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಭಗವದ್ಗೀತಾ ಅಭಿಯಾನ ಕರ್ನಾಟಕ-೨೦೨೪ ಸಂಬಂಧಿ ಶ್ಲೋಕ ಪಠಣ



**ಮುದ್ದೇಬಿಹಾಳ:** ಸಂಬಂಧ ಮುಖ್ಯವಲ್ಲ ಧರ್ಮವೇ ಪ್ರಧಾನವೆನ್ನುವ ಆದರ್ಶ ಗೀತೆಯ ತತ್ವದಲ್ಲಿ ಅಡಕವಾಗಿದೆಯೆಂದು ಸಾಹಿತಿ ನಿವೃತ್ತ ಮುಖ್ಯಗುರು ಅಶೋಕ ಮಣಿ ಹೇಳಿದರು. ಪಟ್ಟಣದ ರೇವಣ ಸಿದ್ದೇಶ್ವರ ಪ್ರೌಢ ಶಾಲೆಯಲ್ಲಿ ಶಿರಸಿಯ ಸೋಂದಾ ಸ್ವರ್ಣವಲ್ಲೀ ಸಂಸ್ಥಾನದ ಯತಿವರೇಣ್ಯರಾದ ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಶ್ರೀಮದ್ ಗಂಗಾಧರೇಂದ್ರ ಸರಸ್ವತೀ ಮಹಾಸ್ವಾಮಿಗಳು ಆಯೋಜಿಸಿರುವ ಭಗವದ್ಗೀತಾ ಅಭಿಯಾನ ಕರ್ನಾಟಕ–2024 ಸಂಬಂಧಿ ಶ್ಲೋಕ ಪಠಣ ಕೇಂದ್ರದಲ್ಲಿ ಮಾತನಾಡಿದರು. ರಾಮಾಯಣ, ಮಹಾಭಾರತದಂತಹ ಮಹಾಕಾವ್ಯಗಳಲ್ಲಿ ಅಧರ್ಮಕ್ಕೆ ಆದ ಅವನತಿಯನ್ನು ನೋಡಬಹುದಾಗಿದೆ. ಎಂತಹ ಕಠಿಣ ಪರಿಸ್ಥಿತಿಯನ್ನು ಎದು–ರಿಸದರೂ ಧರ್ಮ ಜಯವನ್ನೆ ಸಾಧಿಸಿದೆ. ಅಧರ್ಮದ ಕಾರ್ಯವನ್ನು ಮಾಡಬಾರದು. ಅಲ್ಲದೆ ಅಧರ್ಮಕ್ಕೆ ಎಂದೂ ಪ್ರೋತ್ಸಾಹಕೊಡಬಾದರು. ಜೀವನದ ಮೌಲ್ಯವನ್ನು ಎತ್ತಿ ಹಿಡಿಯುವುದು ಗೀತೆಯಾಗಿದೆ. ಸ್ತುತಿಗಳಿಂದ ಕ್ಲೇಶ ನಿವಾರಣೆ ಯಾಗುತ್ತದೆ ಎಂದು ಹೇಳಿದರು.

ಮುಖ್ಯಗುರು ಎಚ್.ಎನ್.ಇಟಗಿ ಮಾತನಾಡಿ ವಿದ್ಯಾರ್ಥಿ ಜೀವನದಲ್ಲಿ ಎದುರಾಗುವ ಅತಿ ಕಷ್ಟದ ಸಮಸ್ಯೆಗಳಿಗೆ ಸುಲಭದ ಮಾರ್ಗದಲ್ಲಿ ಪರಿಹಾರ ಭಗವದ್ಗೀತೆಯಲ್ಲಿದೆ. ಅದನ್ನು ಅರಿಯ ಬೇಕಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಭಿಯಾನದ ಸಂಚಾಲಕ ರಾಮಚಂದ್ರ ಹೆಗಡೆ, ಪ್ರಶಿಕ್ಷಕಿ ರಂಜಿತಾ ಹೆಗಡೆ ಶಿಕ್ಷಕರಾದ ಆರ್. ಎಸ್.ಲಮಾಣಿ. ವೈ.ಎಚ್.ಹಳೇನಿಡಗುಂದಿ, ಬಿ.ಜಿ.ತಾಳಿಕೋಟಿ ಸೇರಿದಂತೆ ಇತರರು ಹಾಜರಿದ್ದರು.

# ಕಿಸ್ನಾ ಡೈಮಂಡ್ - ಗೋಲ್ಡ್ ಜ್ಯುವಲ್ಲರಿಯಯ ಬೆಳಗಾವಿಯಲ್ಲಿ 58 ನೇ ಶಾಕೆ ಉದ್ಘಾಟನೆ.!






**ಬೆಳಗಾವಿ** : ಹರಿಕೃಷ್ಣ ಗ್ರುಫ್ ನ ಕಿಸ್ನಾ ಡೈಮಂಡ್ ಮತ್ತು ಗೋಲ್ಡ್ ಜ್ಯುವೆಲ್ಲರಿಯು, ಬೆಳಗಾವಿಯ ಮಹಾತ್ಮ ಕೊಲೆ ರೋಡ್ ನಲ್ಲಿ ತನ್ನ 58 ನೇ ಶಾಖೆ ಉದ್ಘಾಟನೆ ಮಾಡಲಾಯಿತು.

ಹರಿಕೃಷ್ಣ ಗ್ರೂಪಿನ ಸ್ಥಾಪಕ ಮತ್ತು ಮ್ಯಾನೇಜಿಂಗ್ ಡೈರೆಕ್ಟರ್ ಘನಶ್ಯಾಮ್ ಢೊಲಕಿಯಾ, ಕಿಸ್ನಾ ಡೈಮಂಡ್ ಆ?ಯಂಡ್ ಗೋಲ್ಡ್ ಜ್ಯುವೆಲ್ಲರಿ ಡೈರೆಕ್ಟರ್ ಪರಾಗ್ ಶಾ, ನೇತ್ರತ್ವದಲ್ಲಿ ಶೋರೂಮ್ ಉದ್ಘಾಟನೆ ಮಾಡಲಾಯಿತು. ಹರಿಕೃಷ್ಣ ಗ್ರೂಪ್ ಭಾರತ ದೇಶಾದ್ಯಂತ ತನ್ನ 58 ಬ್ರಾಂಚ್ ಶೋರೂಮ್ ಗಳನ್ನು ಹೊಂದಿದೆ. ಡೈಮಂಡ್ ಜ್ಯುವೆಲ್ಲರಿ ತಯಾರಿಕಾ ಶುಲ್ಕದಲ್ಲಿ ಶೇಕಡಾ 100% ವರೆಗೆ ಮತ್ತು ಚಿನ್ನದ ಆಭರಣ ತಯಾರಿಕಾ ಶುಲ್ಕದಲ್ಲಿ 20% ವರೆಗೆ ರಿಯಾಯಿತಿ ನೀಡಲಾಗುವುದು. ಕಿಸ್ನಾ ತನ್ನ ಅಬ್ಕಿ ಬಾರ್ ಆಪ್ಕೆಲಿಯೇ ಶಾಪ್ ಮತ್ತು ಎನ್ ಎ ಕಾರ್ ಅಭಿಯಾನವನ್ನು ಪ್ರಾರಂಬಿಸಿದೆ. ಗ್ರಾಹಕರು 20 ಸಾವಿರ ಮೌಲ್ಯದ ಡೈಮಂಡ್ ಪ್ಲಾಟನಮ್ ಅಥ–'ವಾ ಸೋಲಿಟೇರ್ ಜ್ಯುವೆಲ್ಲರಿ ಅಥವಾ 50 ಸಾವಿರ ಮೌಲ್ಯದ ಚಿನ್ನದ ಆಭರಣಗಳನ್ನು ಕರಿದಿಸಬಹುದು ಎಂದು ತಿಳಿಸಿದರು. ತನ್ನ 58ನೇ ಶೋರೂಮ್ ಉದ್ಘಾಟಸಿದ ಬಳಿಕ ಹರಿಕೃಷ್ಣ ಗ್ರೂಪ್ನ ಮ್ಯಾನೇಜಿಂಗ್ ಡೈರೆಕ್ಟರ್ ಘನಶ್ಯಾಮ್ ಢೊಲಕಿಯಾ ಮಾತನಾಡಿ, ಬೆಳಗಾವಿ ಜನತೆಯು ಕಿಸ್ನಾ ಡೈಮಂಡ್ ಮತ್ತು ಗೋಲ್ಡ್ ಜ್ಯುವೆಲ್ಲರಿಯ ಲಾಭವನ್ನು ಪಡೆದುಕೊಳ್ಳುವು ಅವಕಾಶ ಇದಾಗಿದೆ ಎಂದರು.

ಇನ್ನು ಕಿಸ್ನಾನ ಫ್ರಾಂಚೈಯ ಪಾಲುದಾರರು ಪ್ರಮೋದ ಬುಗಟೆ ಮಾತನಾಡ ಕಿಸ್ನಾ ಡೈಮಂಡ್ ಹಾಗೂ ಹರಿಕೃಷ್ಣ ಗ್ರುಫ್ನ ಬಗ್ಗೆ ಕೊಂಡಾಡಿದರು. ಕಾರ್ಯಕ್ರಮ ಬಳಿಕ ಕಿಸ್ನಾ ಶೋರೂಮ್ ವತಿಯಿಂದ ರಕ್ತದಾನ ಅಸಿಬಿರವನ್ನು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಘನಶ್ಯಾಮ್ ಢೊಲಕಿಯಾ, ಪರಾಗ್ ಶಾ, ಪ್ರಮೋದ್ ಬುಗಟೆ, ವಿನಾಯಕ್ ಜಾಧವ್, ಸಚಿನ್ ಕದಂ, ಕಿಸ್ನಾ ಡೈಮಂಡ್ ಶೋರೂಮ್ ಸಿಬ್ಬಂದಿಗಳು, ಕಿಸ್ನಾ ಡೈಮಂಡ್ ಮತ್ತು ಗೋಲ್ಡ್ ಜ್ಯುವೆಲ್ಲರಿ ಎಂಡಿ ಘನಶ್ಯಾಮ್ ಢೊಲಕಿಯಾ ಕುಟುಂಬಸ್ಥರು ಶೋರೂಮ್ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಡಿ.02 ರಂದು ವಿಶ್ವ ಏಡ್ಸ್ ದಿನ ಜಾಗೃತಿ ಜಾಥಾ ಕಾರ್ಯಕ್ರಮ

**ಬೆಳಗಾವಿ** : ವಿಶ್ವ ಏಡ್ಸ್ ದಿನ ಅಂಗವಾಗಿ ಡಿ.02 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾಧಿಕಾ–ರಿಗಳ ಕಾರ್ಯಾಲಯದ ಆವರಣದಿಂದ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಬಿಮ್ಸ್ ) ಆಡಿಟೋ–ರಿಯಂ ಸಭಾಂಗಣದವರೆಗೆ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಬೆಳಗ್ಗೆ 11 ಗಂಟೆಯಿಂದ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಬಿಮ್ಸ್ ) ಆಡಿಟೋರಿಯಂ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಜಾಗೃತಿ ಕಾರ್ಯಕ್ರಮ ನಡೆಯಲಿದೆ.

ಅದೇ ರೀತಿಯಲ್ಲಿ ಸಂಜೆ 6.30 ಗಂಟೆಗೆ ಕನ್ನಡ ಸಾಹಿತ್ಯ ಭವನದಿಂದ ಚನ್ನಮ್ಮ ಸರ್ಕಲ್ ದವರೆಗೆ ಕ್ಯಾಂಡಲ್ ಡೇ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಏಡ್ಸ್ ನಿರೋಧಕ ಮತ್ತು ನಿಯಂತ್ರಣ ಘಟಕದ ಜಿಲ್ಲಾ ಕಾರ್ಯಕ್ರಮ ಅಧಿಕಾರಿಗಳು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯ ಶಿಬಿರ ಕಾರ್ಯಕ್ರಮ





**ಬೆಳಗಾವಿ:** ಸರಕಾರಿ ಸರಸ್ವತಿ ಬಾಲಕಿಯರ ಪದವಿ ಪೂರ್ವ ಕಾಲೇಜು ಶಹಪುರ ಬೆಳಗಾವಿಯ ರಾಷ್ಟ್ರೀಯ ಸೇವಾ ಯೋಜನೆಯ 2024–25 ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರವನ್ನು ಬೆಳಗಾವಿ ಜಿಲ್ಲೆ, ಬೆಳಗಾವಿ ತಾಲೂಕಿನ ಮಾಸ್ತಮರ್ಡಿ ಗ್ರಾಮದ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದು ದಿನಾಂಕ 29.11.2024 ರಂದು " ಉಚಿತ ಆರೋಗ್ಯ ತಪಾಸಣಾ ಕಾರ್ಯಕ್ರಮವನ್ನು" ಹಮ್ಮಿಕೊಳ್ಳಲಾಗಿತ್ತು.

ಡಾ. ಅಶ್ವಿನಿ ನರಸನ್ನವರ. ಸಹಾಯಕ ಪ್ರಾಧ್ಯಾಪಕರು, ಸಾರ್ವಜನಿಕ ಆರೋಗ್ಯ ಇಲಾಖೆ ಜವಾಹರಲಾಲ್ ನೆಹರು ಮೆಡಿಕಲ್ ಕಾಲೇಜು ಬೆಳಗಾವಿ ಇವರ ನೇತೃತ್ವದಲ್ಲಿ ಕೆ.ಎಲ್.ಇ. ಆಸ್ಪತ್ರೆಯ ವಿವಿಧ ವಿಭಾಗಗಳಾದ ಮಕ್ಕಳ ಚಿಕಿತ್ಸಾ ವಿಭಾಗ, ಎಲವು ಕೀಲುಗಳ ಚಿಕಿತ್ಸಾ ವಿಭಾಗ, ಸಾಮಾನ್ಯ ಚಿಕಿತ್ಸಾ ವಿಭಾಗ, ಸ್ತ್ರೀ ರೋಗ ಚಿಕಿತ್ಸಾ ವಿಭಾಗ ಹಾಗೂ ಕಣ್ಣಿನ ತಪಾತನೆಯ ವಿಭಾಗದ ತಜ್ಞ ವೈದ್ಯರುಗಳ ತಂಡದಿಂದ ಗ್ರಾಮದ ಸುಮರು 150 ಜನರ ತಪಾಸಣೆಯನ್ನು ನಡೆಸಲಾಯಿತು. ರೋಗಿಗಳಿಗೆ ಅಲ್ಲಿಯೇ ಕೆ. ಎಲ್.ಇ. ಯ ಲ್ಯಾಬ್ ಟೆಕ್ನಿಷಿಯನ್ ತಂಡದಿಂದ ಉಚಿತವಾಗಿ ರಕ್ತ ತಪಾಸಣೆ ಮಾಡಲಾಯಿತು.

ಎಲ್ಲಾ ರೋಗಿಗಳಿಗೆ ಉಚಿತವಾಗಿಯೇ ಮಾತ್ರೆ ಔಷಧಿಗಳನ್ನು ವಿತರಿಸಲಾಯಿತು.

## ಬಾಲಭವನದಲ್ಲಿ ಮಕ್ಕಳ ದಿನಾಚರಣೆ

# ಮಕ್ಕಳ ಆರೋಗ್ಯ- ಶಿಕ್ಷಣ- ಸುರಕ್ಷತೆ ಸರ್ಕಾರಕ್ಕೆ ವಿಶೇಷ ಕಾಳಜಿ -ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಹಲವು ಯೋಜನೆ - ಸಚಿವೆ ಲಕ್ಷ್ಮೀ ಹೆಬ್ಬಾಳಕರ್



**ಬೆಂಗಳೂರು:** ರಾಜ್ಯದಲ್ಲಿ ಮಕ್ಕಳ ಆರೋಗ್ಯ, ಶಿಕ್ಷಣ, ಸುರಕ್ಷತೆಗೆ ಸರ್ಕಾರ ವಿಶೇಷ ಕಾಳಜಿ ವಹಿಸಿದ್ದು; ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತರಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.

ನಗರದ ಜವಾಹರ ಬಾಲ ಭವನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಆಯೋಜಿಸಿದ್ದ ಮಕ್ಕಳ ದಿನಾಚರಣೆ– 2024 ಹಾಗೂ ಮಕ್ಕಳಿಗೆ ಶೌರ್ಯ ಪ್ರಶಸ್ತಿ, ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಸಂಸ್ಥೆಗಳಿಗೆ ಮತ್ತು ವ್ಯಕ್ತಿಗಳಿಗೆ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿದ ನಂತರ ಸಚಿವರು ಮಾತನಾಡಿದರು.

ಮಕ್ಕಳ ಹಕ್ಕುಗಳಿಗೆ ಚ್ಯುತಿ ಬರದಂತೆ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಮುಂದಿನ ದಿನಗಳಲ್ಲಿ ಇಲಾಖೆಯ ಮೂಲಕ ಮಕ್ಕಳಿಗಾಗಿಯೇ ಹತ್ತು ಹಲವು ಕೈಗೊಳ್ಳಲು ಸರ್ಕಾರ ಮುಂದಾಗಿದೆ. ಮಕ್ಕಳ ಆರೋಗ್ಯ, ಶಿಕ್ಷಣ ಮತ್ತು ಸುರಕ್ಷತೆಗೆ ಹೆಚ್ಚಿನ ಆದ–'ತೆ ನೀಡಿದೆ. ಈಗಾಗಲೇ ಅಂಗನವಾಡಿ ಕೇಂದ್ರಗಳನ್ನು ಸರ್ಕಾರಿ ಮಾಂಟೆಸ್ಸರಿಗಳನ್ನಾಗಿ ಮೇಲ್ದರ್ಜೇರಿಸಲಾಗಿದೆ ಎಂದು ತಿಳಿಸಿದರು.

ಮಕ್ಕಳು ದೇಶದ ಶಕ್ತಿ– ಭವಿಷ್ಯ

ಮಕ್ಕಳು ಎಂದರೇ ಒಂದು ರೀತಿ ಚಂಚಲ. ಮಕ್ಕಳೆಂದರೆ ಎಲ್ಲರಿಗೂ ಪ್ರೀತಿ. ಸ್ವತಂತ್ರ ಭಾರತದ ಮೊದಲ ಪ್ರಧಾನಿ ಪಂಡಿತ್ ಜವಾಹರ ಲಾಲ ನೆಹರು ಮಕ್ಕಳ ಮೇಲೆ ವಿಶೇಷವಾದ ಪ್ರೀತಿ, ಕಾಳಜಿ ಹೊಂದಿದ್ದರು. ಏಕೆಂದರೆ, ಇಂದಿನ ಮಕ್ಕಳು ನಾಡಿನ, ದೇಶದ ಶಕ್ತಿ ಮತ್ತು ಭವಿಷ್ಯ ಎಂದು ಭಾವಿಸಿದ್ದರು ಎಂದು ಸಚಿವರು ಹೇಳಿದರು.

ಭಾರತ 75 ವರ್ಷಗಳ ಹಿಂದೆ ಹೇಗಿ–ತ್ತು, ಜನರ ಪರಿಸ್ಥಿತಿ ಹೇಗಿತ್ತು ಅಂದಿನ ಶಿಕ್ಷಣ ಹೇಗಿತ್ತು ಎನ್ನುವುದನ್ನು ಊಹಿಸಲು ಕೂಡ ಆಗದು. ಅತ್ಯಂತ ಬಡತನದ ಪರಿಸ್ಥಿತಿ ಇತ್ತು. ಆಗ ದೇಶದ ಜನಸಂಖ್ಯೆ ಕೇವಲ 35 ಕೋಟಿ. ಆದರೆ, ಈಗ ದೇಶದ 135 ಕೋಟಿಗಿಂತಲೂ ಹೆಚ್ಚಿದೆ. ಇಷ್ಟೊಂದು ಜನಸಂಖ್ಯೆ ಇದ್ದರೂ ಭಾರತ ಈಗ ವಿಶ್ವದ ಹಿರಿಯಣ್ಣನಾಗುವ ಎಲ್ಲ ಲಕ್ಷಣಗಳು ನಮ್ಮ ದೇಶಕ್ಕಿದೆ. ಇದು ಹೇಗೆ ಸಾಧ್ಯವಾಯಿತು ಎನ್ನುವುದನ್ನು ಮಕ್ಕಳು ಅರ್ಥ ಮಾಡಿಕೊಳ್ಳಬೇಕು. ಅಂದಿನ ಮಕ್ಕಳೇ ಹಿರಿಯ ನಾಗರಿಕರಾಗಿ ದೇಶವನ್ನು ಈ ಸ್ಥಿತಿಗೆ ತಂದಿದ್ದಾರೆ ಎಂದರು.

ದೇಶದ 75 ವರ್ಷಗಳ ಪರಿಸ್ಥಿತಿ ಊಹಿಸಲಾಗದು

ದೇಶದ 75 ವರ್ಷಗಳ ಹಿಂದಿನ ಜನರು ಬಡತನದಲ್ಲಿ ಹುಟ್ಟಿ, ಕರೆಂಟ್ ಇಲ್ಲದ ಸಂದರ್ಭದಲ್ಲಿ ಓದಿ ಮೇರು ವ್ಯಕ್ತಿಗಳಾಗಿ ನಮ್ಮೆಗೆಲ್ಲ ಆದರ್ಶರಾಗಿದ್ದಾರೆ. ಇದಕ್ಕೆ ಅತ್ಯುತ್ತಮ ಉದಾಹರಣೆ ಎಂದರೆ, ಅದು ಡಾ. ಬಾಬಾ ಸಾಹೇಬ ಅಂಬೇಡ್ಕರ್ ರವರು. ಎಂತಹ ಪರಿಸ್ಥಿತಿಯಲ್ಲಿ ಎಷ್ಟು ದೊಡ್ಡವರಾಗಿ ಬೆಳೆದರು; ದೇಶಕ್ಕೆ ಸಂವಿಧಾನವನ್ನು ಕೊಟ್ಟರು. ಸ್ವತಂತ್ರ ಭಾರತದ ಪ್ರಥಮ ಕಾನೂನು ಸಚಿವರಾದರು. ಆಗಿನ ಮಕ್ಕಳು ಬಹಳ ಕಷ್ಟುಪಟ್ಟು ಭಾರತವನ್ನು ಕಟ್ಟಿ, ಇಂದು ವಿಶ್ವದಲ್ಲೇ ನಂಬರ್ ಒನ್ ಆಗಲು ಶ್ರಮಿಸಿದ್ದಾರೆ. ಅವರು ಅನುಭವಿಸಿದ ಕಷ್ಟ ಇಂದಿನ ಮಕ್ಕಳಿಲ್ಲ. ಆದರೆ, ಇಂದಿನ ಮಕ್ಕಳು ವಿಶ್ವಮಟ್ಟದಲ್ಲಿ ಪ್ರಜ್ವಲಿಸಬೇಕು ಎಂದು ಸಚಿವರು ಆಶಿಸಿದರು.

ಮಾತೃಲಕ್ಷ್ಮಿ ಬಿಡುಗಡೆ

ನಂತರ ಸಚಿವರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಗಳ ವತಿಯಿಂದ ಹೊರತಂದ ಇಲಾಖೆಯ ಯೋಜನೆಯ ಮತ್ತು ಕಾರ್ಯಕ್ರಮಗಳ ಮಾಹಿತಿ ಕೈಪಿಡಿ– 2024 ಮಾತೃಲಕ್ಷ್ಮಿ ಯನ್ನು ಬಿಡುಗಡೆ ಮಾಡಿದರು.

ಶಿವಾಜಿನಗರ ಶಾಸಕ ರಿಜ್ವಾನ್ ಹರ್ಷದ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಲ್ಯಾಣ ಸಮಿತಿ ಅಧ್ಯಕ್ಷ ಹಾಗೂ ಶಾಸಕ ಎನ್. ಎಚ್. ಕೋನರೆಡ್ಡಿ, ಸಮಿತಿಯ ಸದಸ್ಯರು ಮತ್ತು ಶಾಸಕರಾದ ಕೊತ್ತನೂರು ಮಂಜುನಾಥ್, ಮಂಜುಳಾ ಅರವಿಂದ ಲಿಂಬಾವಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪದ್ಮಾವತಿ, ಬಾಲಭವನದ ಅಧ್ಯಕ್ಷ ಬಿ.ಆರ್. ನಾಯ್ಡು, ಧಾರವಾಡ ಭಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷ ನಾಗನಗೌಡ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಡಾ. ಶಾಮ್ಲಾ ಇಕ್ಬಾಲ್, ಇಲಾಖಾ ನಿರ್ದೇಶಕರಾದ ಸಿದ್ದೇಶ್ವರ, ಜಂಟಿ ನಿರ್ದೇಶಕರಾದ ಬಿ.ಎಚ್. ನಿಶ್ಚಲ್ ಮತ್ತಿತರರು ಉಪಸ್ಥಿತರಿದ್ದರು.

**ಪ್ರದರ್ಶನ ಮಳಿಗೆಗೆ ಭೇಟಿ :** ಇದಕ್ಕೂ ಮುನ್ನ ಸಚಿವರು ಮಕ್ಕಳ ದಿನಾಚರಣೆ ಅಂಗವಾಗಿ ಬಾಲಭವನದ ಆವರಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರು ಹಾಗೂ ಹಿರಿಯ ನಾಗ–ರಿಕರ ಸಬಲೀಕರಣ ಇಲಾಖೆಗಳ ವತಿಯಿಂದ ಏರ್ಪಡಿಸಿದ್ದ ವಸ್ತು ಪ್ರದರ್ಶನ ಮಳಿಗೆಗಳಿಗೆ ಚಾಲನೆ ನೀಡಿದರು.

ಪೂರ್ವ ಶಿಕ್ಷಣ ಮತ್ತು ಪೂರಕ ಪೌಷ್ಠಿಕ ಆಹಾರ ಮಳಿಗೆ, ವಿಕಲಚೇತನರ ಸಪ್ತಾಹ ನಿಮಿತ್ತ ಜಾಗೃತಿ ಮಳಿಗೆ ಹಾಗೂ ಬೆಂಗಳೂರ ಉತ್ತರ ತಾಲ್ಲೂಕು ಮತ್ತು ಯಲಹಂಕ ತಾಲ್ಲೂಕಿನ ಗೋದಾವರಿ ಸ್ತ್ರೀಶಕ್ತಿ ಸ್ವಸಹಾಯ ಸಂಘ ಮತ್ತು ಅನುಗ್ರಹ ಸ್ತ್ರೀಶಕ್ತಿ ಸಂಘ ತೆರೆದಿದ್ದ ವಸ್ತುಪ್ರದರ್ಶನ ಮಳಿಗೆಗಳಿಗೆ ಭೇಟಿ ನೀಡಿ ಸಚಿವರು ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಇಲಾಖೆಯ ಅಧಿಕಾ–ರಿಗಳು ಹಾಜರಿದ್ದು, ಮಾಹಿತಿ ನೀಡಿದರು.

**ಪುಷ್ಪ ಪ್ರದರ್ಶನಕ್ಕೆ ಚಾಲನೆ** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಾಲ ಭವನ, ತೋಟಗಾರಿಕೆ ಇಲಾಖೆಯ ಸಹಯೋಗದಲ್ಲಿ ಶ್ರೀ ಚಾಮರಾಜೇಂದ್ರ (ಕಬ್ಬನ್) ಉದ್ಯಾನವನ ಮತ್ತು ಬಾಲ ಭವನ ಆವರಣದಲ್ಲಿ ಆಯೋಜಿಸಿದ್ದ ಮಕ್ಕಳ ವಿಷಯಾಧಾರಿತ ಪುಷ್ಪ ಪ್ರದರ್ಶನವನ್ನು ಮಕ್ಕಳೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಉದ್ಘಾಟಿಸಿದರು.

ಇದೇ ವೇಳೆ ಹೂವಿನಿಂದ ತಯಾ–ರಿಸಲ್ಪಟ್ಟ ಪುಷ್ಪ ಕ್ಷಿಪಣಿಗೂ ಸಚಿವರು ಚಾಲನೆ ನೀಡಿದರು.

**ವಾದ್ಯರಂಗ ಮಂಟಪದಲ್ಲಿ ನಾಟ್ಯ ತರಂಗ ಪುನಾರಂಭ**

ತೋಟಗಾರಿಕಾ ಇಲಾಖೆ ವತಿಯಿಂದ ಬೆಂಗಳೂರಿನ ಕಬ್ಬನ್ ಉದ್ಯಾನವನದ ವಾದ್ಯರಂಗ ಮಂಟಪದಲ್ಲಿ ಪ್ರತಿ ಭಾನುವಾರ ಬೆಳಿಗ್ಗೆ ನಾಟ್ಯ ತರಂಗ– ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿತ್ತು. ಆದರೆ, ಕೋವಿಡ್ ಹಿನ್ನೆಲೆಯಲ್ಲಿ ಸ್ಥಗಿ–ತಗೊಳಿಸಲಾಗಿತ್ತು. ಆದರೆ. ಇಂದು ನಾಟ್ಯ ತರಂಗ ಕಾರ್ಯಕ್ರಮಕ್ಕೆ ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ಚಾಲನೆ ನೀಡಿದರು.

ಇದೇ ವೇಳೆ ಬೆಂಗಳೂರಿನ ನೃತ್ಯ ಕಲಾವಿದರು ಪ್ರಸ್ತುತಪಡಿಸಿದ ನೃತ್ಯರೂಪಕವನ್ನು ಸಚಿವರು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

## ಆಸ್ತಿ ಖಾತೆ ಗಣಿಕಿಕೃತ ಕಡ್ಡಾಯ



ತಾಳಿಕೋಟೆ, ಸಾರ್ವಜನಿಕರ ಸಂಬಂದಿತ ಆಸ್ತಿಗಳ ಖಾತೆಗಳನ್ನು ಗಣಕಿಕೃತಗೊಳಿಸಿಕೊಳ್ಳುವದು ಕಡ್ಡಾಯವಾಗಿದ್ದು ತಾಳಿಕೋಟೆ ಪಟ್ಟಣದ ಎಲ್ಲ ಆಸ್ತಿ ಮಾಲಿಕರು ತಮ್ಮ ತಮ್ಮ ಆಸ್ತಿಗಳ ಖಾತೆಗಳನ್ನು ಗಣಕಿಕೃತ ಮಾಡಿಸಿಕೊಳ್ಳಬೇಕೆಂದು ಪುರಸಭೆ ಮುಖ್ಯಾಧಿಕಾರಿ ಮೋಹನ್ ಜಾಧವ ಅವರು ತಿಳಿಸಿದ್ದಾರೆ.

ಸಿಟಿಎಸ್ ಆಸ್ತಿಯಾದಲ್ಲಿ ಸಿಟಿಎಸ್ ಉತಾರೆ, ಸಿಟಿಎಸ್ ನಕ್ಷೆ, ಮಾಲಿಕರ ಭಾವಚಿತ್ರ, ಮನೆ ಜಿಪಿ-ಎಸ್ ಪೋಟೊ, ಓಟರ್ ಐಡಿ ಅಥವಾ ಪ್ಯಾನ ಕಾರ್ಡ, ಸನ್ 2024-25ನೇ ಸಾಲಿನ ಎಸ್‌ಎಎಸ್, ಸನ್ 2024-25ರವರೆಗೆ ಭರಣಾ ಮಾಡಿದ ನೀರಿನ ಕರ, ಅರ್ಜಿ ನಮೂನೆ, ಕಟ್ಟಡ ಪರವಾನಿಗೆ ಅಥವಾ ಪೂರ್ಣಗೊಂಡ ಪ್ರಮಾಣ ಪತ್ರ ಲಗತ್ತಿಸಬೇಕೆಂದು ಅವರು ತಿಳಿಸಿದ್ದಾರೆ.

ಬಿನ್ ಶೇತ್ಕಿ ಆಸ್ತಿಯಾದಲ್ಲಿ ಎನ್‌ಎ ಆರ್ಡರ್ ಕ್ವಾಪಿ, ಕೆಜಿಪಿ ಅಥವಾ ನಕ್ಷೆ, ಖರೀದಿ ಬಾಂಡ, ಮನೆ ಅಥವಾ ಖಾಲಿ ಜಾಗೆ ಜಿಪಿಎಸ್ ಪೋಟೊ, ಮಾಲಿಕರ ಭಾವಚಿತ್ರ, ಓಟರ್ ಐಡಿ ಅಥವಾ ಪ್ಯಾನ್ ಕಾರ್ಡ, ಸನ್ 2024-25ನೇ ಸಾಲಿನ ಎಸ್‌ಎಎಸ್, ನೀರಿನ ಕರ ಭರಣಾ ಮಾಡಿದ ಚಲನ, ಅರ್ಜಿ ನಮೂನೆ, ಕಟ್ಟಡ ಪರವಾನಿಗೆ ಅಥವಾ ಪೂರ್ಣಗೊಂಡ ಪ್ರಮಾಣ ಲಗತ್ತಿಸಿ ಪುರಸಭೆಯ ಕಂದಾಯ ವಿಭಾಗದಲ್ಲಿ ಅರ್ಜಿ ಸಲ್ಲಿಸಿ ಗಣಿಕಿಕೃತ ಉತಾರೆ ಪಡೆದುಕೊಳ್ಳಬೇಕೆಂದು ಪುರಸಭೆ ಮುಖ್ಯಾಧಿಕಾರಿ ಮೋಹನ್ ಜಾಧವ ಅವರು ಪ್ರಕಟನೆ ಮೂಲಕ ಕೋರಿದ್ದಾರೆ.

# ವ್ಯಕ್ತಿ ಕಾಣೆ



ರಬಕವಿ-ಬನಹಟ್ಟಿ,ನ29: ಸಮೀಪದ ಜಗದಾಳ ಗ್ರಾಮದ ಮಾನಸಿಕ ಕಾಯಿಲೆ ವ್ಯಕ್ತಿ ಗಣಪತಿ ಲೋಹಾರ(84) ಇವರು ಜಗದಾಳ ಗ್ರಾಮದಿಂದ ಧಾರವಾಡದ ಪಾಂಡುರಂಗೆ ಆಸ್ಪತ್ರೆಗೆ ಚಿಕಿತ್ಸೆಗೆಂದು ತೆರಳಿದಾಗ ನ.20 ರಂದು ಬೆಳಗಿನ ಜಾವ 6 ಗಂಟೆ ಸುಮಾ-ರಿಗೆ ಪರಿಚಯಸ್ಥರಾಗಿದ್ದ ಶ್ರೀಶೈಲ ಅಸ್ಕಿಯವರ ಕೋಣೆಯಿಂದ ಯಾರಿಗೂ ಹೇಳದೆ ಎಲ್ಲಿಯೋ ಕಾಣೆಯಾಗಿದ್ದಾರೆಂದು ಪೊಲೀಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

84 ವರ್ಷದವರಾದ ಗಣಪತಿ ಎತ್ತರ 5.3 ಅಡಿ, ತಲೆ ಮುಂಭಾಗ ಬಕ್ಕ ತಲೆಯಾಗಿದ್ದು, ಬಿಳಿ ಕೂದಲಿನ ಜುಟ್ಟು ಇರುತ್ತದೆ. ದುಂಡು ಮುಖ, ದಪ್ಪ ಮೂಗು, ದಪ್ಪ ಮೀಸೆ ಮತ್ತು ಗಡ್ಡ ಬಿಟ್ಟಿರುತ್ತಾರೆ. ಬಲಭುಜದ ಮೇಲೆ ಹಳೆಯ ಮಾಸಿಕ ಗಾಯದ ಕಲೆ ಮತ್ತು ಬಲಕಾಲಿಗೆ ಗಜಕರ್ಣವಾಗಿದೆ. ಕನ್ನಡ ಭಾಷೆ ಮಾತನಾಡುವ ಈತ ಕೋಣೆಯಿಂದ ತೆರಳುವಾಗ ಬಿಳಿ ಬಣ್ಣದ ಫುಲ್ ತೋಳಿನ ಅಂಗಿ ಹಾಗು ಬಿಳಿ ಬಣ್ಣದ ಧೋತಿ ಧರಿಸಿದ್ದಾರೆ. ಇವರ ಬಗ್ಗೆ ಮಾಹಿತಿ ದೊರೆತಲ್ಲಿ ಪೊಲೀಸ್ ಠಾಣೆ ನಂ:94808-02033 ಅಥವಾ 73494-61416 ನಂಬರನ್ನು ಸಂಪರ್ಕಿಸಲು ಕೋರಲಾಗಿದೆ.

## ಇಂದು ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ

ಬಾಗಲಕೋಟೆ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ ಹಾಗೂ ನವನಗರ ಸರಕಾರಿ ಪ್ರಥಮ ದರ್ಜೆ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ನ.30 ರಂದು ಬೆಳಿಗ್ಗೆ 11 ಗಂಟೆಗೆ ನವನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ 2024-25ನೇ ಸಾಲಿನ ಬಾಗಲಕೋಟೆ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಾಕ್ರಮವನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪೂರ ಉದ್ಘಾಟಿಸುವರು. ಶಾಸಕ ಹಾಗೂ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಹೆಚ್.ವಾಯ್.ಮೇಟಿ ವಹಿಸುವರು.

## ಡಿ. 1 ರಂದು ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿಕಲಚೇತನರು ಭಾಗವಹಿಸಲು ಮನವಿ

ಬಾಗಲಕೋಟೆ: ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಡಿಸೆಂಬರ 1 ರಂದು ರವಿವಾರ ಬೆಳಿಗ್ಗೆ 10.30ಕ್ಕೆ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ವಿಕಲಚೇತನ-ರಿಗಾಗಿ ವಿವಿಧ ಕ್ರೀಡೆ ಮತ್ತು ಸಾಂಸ್ಕೃತಿ-ಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ವಿಕಲಚೇತನರ ವಯೋಮಾನವಾರು ವಿವಿಧ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, 6 ರಿಂದ 18 ವಯೋಮಾನದ ಬುದ್ದಿ ಮಾಂದ್ಯತೆಯ ವಿಕಲಚೇತನ ಮಕ್ಕಳಿಗೆ 200 ಮೀಟರ ಓಟ, ಹಗುರವಾದ ಚೆಂಡು ಎಸೆಯುವುದು, ಲೆಮನ್ ಸ್ಪೂನ್ ಸ್ಪರ್ಧೆ,ಗುಂಪು ನೃತ್ಯ, ವಾಕ್ ಮತ್ತು ಶ್ರವಣದೋಷವುಳ್ಳ ಮಕ್ಕಳಿಗಾಗಿ ಗುಂಡು ಎಸೆತ, 200 ಮೀಟರ ಓಟ, ಗುಂಪು ನೃತ್ಯ, ದೃಷ್ಠಿದೋಷ ಮಕ್ಕಳಿಗಾಗಿ ಸಂಗೀತ ಗಾಯನ, ಗುಂಪು ನೃತ್ಯ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆಯಲಿದ್ದು ಆಸಕ್ತ ವಿಕಲಚೇತನರು ಭಾಗವಹಿಸಿ ಕ್ರೀಡಾಕೂಟವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ವಿಕಚೇತನರ ಕಲ್ಯಾಣಾಧಿಕಾರಿ ಮಹಾಂತೇಶ ಕುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜವಳಿ ಅಧಿಕಾರಿ ಭೇಟ್ಟಿ: ನೇಕಾರರಿಂದ ಡಿ. 3 ಗಡುವು ; ಹೋರಾಟದ ಸ್ವರೂಪ ಬದಲಿಸುವಲ್ಲಿ ನೇಕಾರರ ಚಿಂತನೆ



ರಬಕವಿ-ಬನಹಟ್ಟಿ,ನ29: ಕಳೆದ 10 ದಿನಗಳಿಂದ ಸರದಿ ಸತ್ಯಾಗ್ರಹ ನಡೆಸುತ್ತಿರುವ ಇಲ್ಲಿನ ಕೈಮಗ್ಗ ನೇಕಾರರ ಸ್ಥಳಕ್ಕೆ ಜವಳಿ ಇಲಾಖೆ ಉಪನಿರ್ದೇಶಕ ಬಿ.ಎ. ಫೀರಜಾದೆ ಭೆಟ್ಟಿ ನೀಡಿದರು.

ನೇಕಾರರ ಸಮಸ್ಯೆಗಳನ್ನು ಆಲಿಸಿದ ಅಧಿಕಾರಿ ಫೀರಜಾದೆ, ಇವೆಲ್ಲವು ಕೇಂದ್ರ ಕಛೇ-ರಿಯ ಆಡಳಿತ ವ್ಯವಸ್ಥಾಪಕರ ಹಾಗು ನಿಗಮದ ಹಿರಿಯ ಅಧಿಕಾರಿಗಳ ಮಟ್ಟದಲ್ಲಿದ್ದು, ನೇಕಾರರ ಸಮಸ್ಯೆಗಳ ಬಗ್ಗೆ ಮನದಟ್ಟು ಮಾಡುವ ಮೂಲಕ ಪರಿಹಾರಕ್ಕೆ ಪ್ರಾಮಾಣಿಕವಾಗಿ ಶ್ರಮಿಸುವದಾಗಿ ಭರವಸೆ ನೀಡಿದರು. ಇದೇ ಸಂದರ್ಭ ನೇಕಾರ ಮುಖಂಡ ಸದಾಶಿವ ಗೋಂದಕರ ಮಾತನಾಡಿ, ನಾಲ್ಕೈದು ದಶಕಗಳಿಂದ ನೇಕಾರಿಕೆ ಮಾಡುತ್ತಿರುವ ನೇಕಾರರಿಗೆ ನ್ಯಾಯ ಒದಗಿಸುವಲ್ಲಿ ಸರ್ಕಾರ ವಿಫಲಗೊಂಡಿದೆ. ನಿವೇಶನ, ಮನೆ ಹಾಗು ನಿರಂತರ ಉದ್ಯೋಗ ಸೇರಿ ಕನಿಷ್ಠ ಬೇಡಿಕೆಗಳಿಗೆ ಸರ್ಕಾರದ ಸ್ಪಂದನೆಯಾಗದಿರುವದು ತೀವ್ರ ಬೇಸರ ತರುವಂಥದ್ದೆಂದರು. ಗಡುವು: ಈಗಾಗಲೇ ಸತ್ಯಾಗ್ರಹನಿರತ ನೇಕಾರರು ಮನನೊಂದಿದ್ದಾರೆ. ಡಿ.3 ವರೆಗೆ ಸರ್ಕಾರಕ್ಕೆ ಗಡುವು ನೀಡಲಾಗುವದು. ಮುಂದಿನ ದಿನಗಳಲ್ಲಿ ನೇಕಾರರ ಹೋರಾಟದ ಸ್ವರೂಪ ಬದಲಿಸುವ ಮೂಲಕ ಸರ್ಕಾರಕ್ಕೆ ಬಿಸಿ ಮುಟ್ಟಿಸುವ ಕಾರ್ಯ ನಡೆಯಲಿದೆ ಎಂದು ನೇಕಾರ ಸೇವಾ ಸಂಘದ ರಾಜ್ಯಾಧ್ಯಕ್ಷ ಶಿವಲಿಂಗ ಟಿರ್ಕಿ ತಿಳಿಸಿದರು.

ಶಾಸಕರ ಮನೆ ಮುಂದೆ ಧರಣಿ: ಶೀಘ್ರವೇ ತೇರದಾಳ ಕ್ಷೇತ್ರದ ಶಾಸಕ ಸಿದ್ದು ಸವದಿಯವರ ನಿವಾಸದೆದುರು ಸತ್ಯಾಗ್ರಹ ನಡೆಸುವಲ್ಲಿ ನೇಕಾರರ ಚಿಂತನೆಯಾಗಿದ್ದು, ಇನ್ನೆರಡು ದಿನಗಳಲ್ಲಿ ನಿರ್ಧಾರ ಕೈಗೊಳ್ಳಲಾಗುವದೆಂದು ಟಿರ್ಕಿ ಸ್ಪಷ್ಟಪಡಿಸಿದರು.

ಇದೇ ಸಂದರ್ಭ ಸಹಾಯಕ ಉಪನಿರ್ದೇಶಕ ಎಸ್.ಬಿ. ಕಮಲದಿನ್ನಿ, ಸಿದ್ದು ಖವಲಗಿ, ಯೋಜನಾಧಿಕಾರಿ ವಿಜಯಕುಮಾರ ಚಲವಾದಿ ಆಗಮಿಸಿದ್ದರು. ಮನವಿ ತಿರಸ್ಕಾರ: ಅಧಿಕಾರಿಗಳು ಸತ್ಯಾಗ್ರಹಿಗಳಿಗೆ ಮನವಿ ಮಾಡುವ ಮೂಲಕ ಸತ್ಯಾಗ್ರಹ ಕೈಬಿಟ್ಟು ಮಾತುಕತೆ ಮೂಲಕ ಪರಿಹಾರ ಕಂಡುಕೊಳ್ಳುವಂತೆ ಮನವಿ ಮಾಡಿದರು. ನೇಕಾರರು ಇದಕ್ಕೆ ಸುತಾರಾಂ ಒಪ್ಪದೆ ಅಧಿಕಾರಿಗಳ ಮನವಿಯನ್ನು ತಿರಸ್ಕ-ರಿಸುವ ಮೂಲಕ ಧರಣಿ ಮುಂದುವರೆಸುವಲ್ಲಿ ಕಾರಣವಾಯಿತು.

## ಜಿಪಂ ಸಿಇಒ ರಾಹುಲ್ ಶಿಂಧೆ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಪ್ರಗತಿ ಪರಿಶೀಲನಾ ಸಭೆ

**ಬೆಳಗಾವಿ** : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ 03.12.2024 ರಂದು ಜರುಗುವ ಪ್ರಗತಿ ಪರಿಶೀಲನಾ ಸಭೆಯ ಅಂಗವಾಗಿ ಪೂರ್ವಭಾವಿ ಸಭೆಯನ್ನು ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಎಲ್ಲ ತಾಲೂಕು ಮಟ್ಟದ ಅಧಿಕಾರಿಗಳಿಗೆ ಜರುಗಿಸಿ ಸೂಕ್ತ ಸಲಹೆ ಮತ್ತು ನಿರ್ದೇಶನಗಳನ್ನು ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿದ ಪ್ರಗತಿ ಪರಿಶೀಲನೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಪಂಚಾಯತ್ ರಾಜ್ ವಿಷಯಗಳು** : ಕರವಸೂಲಾತಿ ಕುರಿತಂತೆ ಮೊಬೈಲ ಟವರ್, ಕೈಗಾರಿಕೆ ಕೇಂದ್ರಗಳು ಹಾಗೂ ಇತರೇ ಎಲ್ಲ ಖಾಸಗೀ ಕ್ಷೇತ್ರಗಳಿಂದ ಮೂಲಕಗಳಿಂದ ಮುಂದಿನ 15 ದಿನಗಳಲ್ಲಿ 50% ಪ್ರಗತಿ ಸಾಧಿಸಲು ಎಲ್ಲ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆರ ರವರು ಸೂಚನೆ ನೀಡಿದರು. ಅದರಂತೆ "ಸಕಾಲ" ಅಧಿನಿಯಮದಡಿ ಬಾಕಿ ಇರುವ ಅರ್ಜಿಗಳನ್ನು ಆದ್ಯತೆ ಮೇರೆಗೆ 03 ದಿನಗಳಲ್ಲಿ ವಿಲೇವಾರಿ ಮಾಡಲು ಕ್ರಮ ಜರುಗಿಸುವುದು, ಗ್ರಾಮ ಪಂಚಾಯತ ಹಂತದಲ್ಲಿ ವಾರ್ಡ ಸಭೆ, ಸಾಮಾನ್ಯ ಸಭೆ ಹಾಗೂ ಇತರೇ ಎಲ್ಲ ಸಭೆಗಳನ್ನು ಆನ್-ಲೈನ್ ಮೂಲಕ ನಿರ್ವಹಿಸಲು ಕಟ್ಟುನಿಟ್ಟಿನ ಕ್ರಮ ವಹಿಸುವುದು, ಗ್ರಾಮ ಪಂಚಾಯತ ಸಿಬ್ಬಂದಿಗಳ ಬಯೋ-ಮೆಟ್ರಿಕ್ ಮೂಲಕ ಹಾಜರಾತಿ ಕಡ್ಡಾಯಗೊಳಿಸಿ, ನಿಗದಿತ ಸಮಯದಲ್ಲಿ ಸಿಬ್ಬಂದಿಗಳ ಸಂಬಳ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಎಲ್ಲ ತಾಲೂಕು ಮಟ್ಟದ ಅಧಿಕಾರಿಗಳಿಗೆ ಮಾನ್ಯರು ಸೂಚನೆ ನೀಡಿದರು.

ಡಿಜಿಟಲ್ ಗ್ರಂಥಾಲಯಕ್ಕೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಒಟ್ಟು 500 ಗ್ರಾಮ ಪಂಚಾಯಿತಿಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ 486 ಗ್ರಾಮ ಪಂಚಾಯತ ಗ್ರಂಥಾಲಯಗಳು ಸರ್ಕಾರದಿಂದ ಮಂಜೂರಾಗಿ ಕಾರ್ಯನಿರ್ವಹಿಸುತ್ತಿವೆ. ಇದರಲ್ಲಿ 480 ಡಿಜಿಟಲ್ ಗ್ರಂಥಾಲಯಗಳನ್ನಾಗಿ ಪರಿವರ್ತಿಸಲಾಗಿದೆ. ಬಾಕಿ ಉಳಿದಿರುವ 6 ಹೊಸ ಗ್ರಾಮ ಪಂಚಾಯತಿಗಳಲ್ಲಿ ಹೊಸ ಕಟ್ಟಡಗಳ ನಿರ್ಮಾಣವಾದ ಕೂಡಲೇ ಡಿಜಿಟಲ್ ಗ್ರಂಥಾಲಯಗಳನ್ನಾಗಿ ಪರಿವರ್ತನೆ ಮಾಡಲು ಕ್ರಮವಹಿಸುವಂತೆ ಎಲ್ಲ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಉಪಕಾರ್ಯದರ್ಶಿ(ಅಭಿವೃದ್ಧಿ) ಬಸವರಾಜ್ ಅಡವಿಮಠ 15ನೇ ಹಣಕಾಸು ಯೋಜನೆಗೆ ಸಂಬಂಧಿಸಿದಂತೆ ಮಾತನಾಡಿ ಆನ್ಲೈನ್ ಹಾಗೂ ಪಾಸ್ ಬುಕ್ಕಿಗೆ ಹೊಂದಾಣಿಕೆ ಮಾಡಿಕೊಳ್ಳುವಂತೆ ಹಾಗೂ ಕಾಮಗಾರಿಗಳ ಅನುಸಾರವಾಗಿ ಪೇಮೆಂಟ್ ಪ್ರೊಸಸ್ ಮಾಡಲು ತಾಲೂಕು ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (MGNREGA) ಜಿಪಂ ಸಿಇಒ ರಾಹುಲ್ ಶಿಂಧೆರ ರವರು ಮಾತನಾಡಿ ಮಾನವ ದಿನ ಸೃಜನೆಯಲ್ಲಿ ಡಿಸೆಂಬರ ಅಂತ್ಯದವರೆಗೆ ಎಲ್ಲ ತಾಲೂಕುಗಳು



ಶೇ.85% ರಷ್ಟು ಪ್ರಗತಿ ಸಾಧಿಸುವುದು, 2021-22 ರಿಂದ 2023-24 ರ ವರೆಗೆ ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ಆದ-್ಯತೆ ಮೇಲೆ ಪೂರ್ಣಗೊಳಿಸುವುದು. ಮುಂದುವರೆದು ಬೆಳಗಾವಿಯ ಜಿಲ್ಲೆಯ ಆದ್ಯತೆ ಕಾಮಗಾರಿಗಳಾದ ಶಾಲಾ ಕಂಪೌಂಡ, ಅಡುಗೆ ಕೋಣೆ ಶೌಚಾಲಯ, ಆಟದ ಮೈದಾನ, ಗ್ರಾಮ ಪಂಚಾಯತಿ ಕಟ್ಟಡ ಹಾಗೂ ತ್ಯಾಜ್ಯ ನಿರ್ವಹಣಾ ಘಟಕಗಳ(ಖಘಟ) ಪ್ರಗತಿಯನ್ನು ಆದ್ಯತೆ ಮೇಲೆ ಪ್ರಗತಿ ಸಾದಿಸುವುದು, ಒಂಬಡ್ಸಮೆನ್ ಪ್ರಕರಣಗಳ ಮೇಲೆ ವಸೂಲಾತಿಯನ್ನು ಹೆಚ್ಚಿನ ಪ್ರಮಾಣದಲ್ಲಿ ಪ್ರಗತಿ ಸಾಧಿಸುವುದು, ಸಾಮಾಜಿಕ ಲೆಕ್ಕ ಪರಿಶೋದನೆಯಲ್ಲಿ ಬಾಕಿ ಇರುವ 3240 ಕಂಡಿಕೆಗಳನ್ನು ಎಮ್ ಐ ಎಸ್ (MIS) ನಲ್ಲಿ ಎ ಟಿ ಆರ್(ATR) ಅಪ್ಲೋಡ್ ಮಾಡುವುದು.

ಜಿಲ್ಲೆಯ 2024-25ನೆ ಸಾಲಿಗೆ 36 ಗ್ರಾಮಗಳಲ್ಲಿ ಬೂದು ನಿರ್ವಹಣಾ ಘಟಕಗಳನ್ನು ಅನುಷ್ಠಾನಗೊಳಿಸಲಾಗುವ ಕಾಮಗಾರಿಗಳಿಗೆ ಈಗಾಗಲೇ ಟೆಂಡರ ಪ್ರಕ್ರಿಯೆ ಜರುಗಿಸಲಾಗಿದ್ದು, ಶೀಘ್ರವಾಗಿ ಕಾಮಗಾರಿಗಳನ್ನು ಪ್ರಾರಂಭಿಸುವುದು, ಸವಳು ಜವಳು ಕಾರ್ಯಕ್ರಮದಡಿ ಆಯ್ದ 21 ಗ್ರಾಮಗಳ ಕಾಮಗಾರಿಗಳಿಗೆ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದ್ದು, ಟೆಂಡರ ಪ್ರಕ್ರಿಯೆಗಳ ಮೂಲಕ ಕಾಮಗಾರಿಗಳನ್ನು ಅನುಷ್ಠಾನಗೋಳಿಸುವುದು, ಪ್ರಾರಂಭಿಸದೇ ಇರುವ 26 ಕೂಸಿನ ಮನೆಗಳನ್ನು ಒಂದು ವಾರದ ಒಳಗಾಗಿ ಪ್ರಾರಂಭಿಸಿ ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸುವುದು.

ಸನ್ 2025-26ನೇ ಸಾಲಿನಲ್ಲಿ ಆನ್ ಲೈನ್ ಮೂಲಕ ಕಾಮಗಾರಿಗಳನ್ನು ಎಂಟ್ರಿ ಮಾಡುವುದು (ಸಾರ್ವಜನಿಕರು, ಗ್ರಾಮ ಪಂಚಾಯತ ಹಾಗೂ ಅನುಷ್ಠಾನ ಇಲಾಖೆ) ಇಲ್ಲಿಯವರೆಗೆ 47334 ಕಾಮಗಾರಿಗಳನ್ನು ಎಂಟ್ರಿ ಮಾಡಿದ್ದು, ಕಾಲ ಮಿತಿಯೋಳಗಾಗಿ ಎಲ್ಲ ಪ್ರಕ್ರಿಯೆಗಳನ್ನು ಪೂರ್ಣಗೊಳಿಸುವುದು ಹಾಗೂ ಈಗಾಗಲೇ ಎಂಟ್ರಿ ಮಾಡಿದ ಸಮುದಾಯ ಕಾಮಗಾರಿಗಳಿಗೆ ಪೂರ್ವ ಅಳತೆ ದಾಖಲಿಸಲು ಮತ್ತು ಕಾಮಗಾರಿ ಸ್ಥಳ ಪರಿಶೀಲಿಸಲು ಗ್ರಾಮ ಪಂಚಾಯತಿ ಮಟ್ಟದಲ್ಲಿ ತಾಂತ್ರಿಕ ಸಹಾಯಕರನ್ನು ನಿಯೋಜಿಸಿ, ಮೇಲ್ವಿಚಾರಣೆ ಮಾಡುವುದರೊಂದಿಗೆ ಪ್ರಗತಿ ಸಾಧಿಸಲು ಮಾನ್ಯರು ಜಿಲ್ಲೆಯ ಎಲ್ಲ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾ-ರಿಗಳಿಗೆ ಸೂಚನೆ ನೀಡಿದರು.

ಜಲ್ ಜೀವನ ಮಿಷನ್ ಯೋಜನೆ (ಎಎಂ) ಜಿಪಂ ಸಿಇಒ ರಾಹುಲ್ ಶಿಂಧೆ ಮಾತನಾಡಿ ಜಲಜೀವನ ಮಿಷನ್ ಯೋಜನೆ ಕಾಮಗಾ-ರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಅವುಗಳನ್ನು "ಹರ ಘರ ಜಲ್ ಗ್ರಾಮ " ಎಂದು ಘೋಷಣೆ ಮಾಡಲು ಕ್ರಮವಹಿಸುವಂತೆ ಕಾರ್ಯಪಾಲಕ ಅಭಿಯಂತರರು/ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಎಲ್ಲ ತಾಲೂಕು ಮಟ್ಟದ ಕಾರ್ಯನಿರ್ವಾಹಕ ಅಧಿಕಾ-ರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಮುಂದುವರೆದು, ಜಲಜೀವನ ಮಿಷನ್ ಕಾಮಗಾರಿ ಪೂರ್ಣಗೊಂಡ ಗ್ರಾಮಗಳಲ್ಲಿ ಪ್ರತಿ ತಾಲೂಕಿನಿಂದ ಒಂದು ಗ್ರಾಮವನ್ನು ಆಯ್ಕೆ ಮಾಡಿಕೊಂಡು ಆ ಗ್ರಾಮವನ್ನು 247 ಕುಡಿಯುವ ನೀರು ಸರಬರಾಜು ಗ್ರಾಮವನ್ನಾಗಿ ಪರಿವರ್ತನೆ ಮಾಡಲು ಮಾನ್ಯರು ಅಧಿಕಾರಿಗಳಿಗೆ ಸೂಚನೆ ನೀಡಿದರು.ಅದರಂತೆ, ತಾಲೂಕಿನ ಪ್ರತಿಯೊಂದು ಗ್ರಾಮ ಪಂಚಾಯತಿಗಳಲ್ಲಿ "ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ"ಯ ಸಭೆಯನ್ನು ಜರುಗಿಸಿ, ನಡುವಳಿಯ ಪ್ರತಿಯನ್ನು ಜಿಲ್ಲಾ ಪಂಚಾಯತಿಗೆ ಸಲ್ಲಿಸಬೇಕು. ನಿಪ್ಪಾಣಿ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕಅಧಿಕಾರಿ ರವರಿಗೆ ಇತ್ತೀಚಿಗೆ ವರದಿಯಾದ ಕಸನಾಳ್ ಗ್ರಾಮದ ಕಲುಷಿತ ನೀರಿನ ಪ್ರಕರಣ ದ ಬಗ್ಗೆ ಸಂಬಂಧ ಪಟ್ಟವರ ಮೇಲೆ ಈಖಖ ಧಾಖಲಾದ ಬಗ್ಗೆ ಖಾತ್ರಿ ಪಡಿಸಿ ಕೊಂಡರು. ಹಾಗೂ "ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ" ಹೆಸರಿನಲ್ಲಿ ಕಡ್ಡಾಯವಾಗಿ ಬ್ಯಾಂಕ ಖಾತೆಯನ್ನು ತುರ್ತಾಗಿ ಮಿಷನ್ ಮೋಡ್ ದಲ್ಲಿ ಕಾರ್ಯ ನಿರ್ವಹಿಸಿ ತೆರೆಯುವುದು, ಇಲ್ಲವಾದಲ್ಲಿ ತಮ್ಮ ಮೇಲೆ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು ಎಂದು ಎಲ್ಲ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮಾನ್ಯರು ಎಚ್ಚರಿಕೆ ನೀಡಿದರು.

ಪಂಚಮಿತ್ರ ಪೋರ್ಟಲ್ ಮೂಲಕ ಸ್ವೀಕೃತವಾದ ಖಕಉಖಖ ದೂರಗಳನ್ನು ತ್ವ-ರಿತವಾಗಿ ವಿಲೇವಾರಿ ಮಾಡಲು ಎಲ್ಲ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಕಾರ್ಯಪಾಲಕ ಅಭಿಯಂತರರು ಬೆಳಗಾವಿ/ಚಿಕ್ಕೋಡಿ ವಿಭಾಗದವ-ರಿಗೆ ಮಾನ್ಯರು ಸೂಚಿಸಿದರು. ಸಭೆಯಲ್ಲಿ ಯೋಜನಾ ನಿರ್ದೇಶಕ ರವಿ ಬಂಗಾರೆಪ್ಪನವರ, ಉಪಕಾರ್ಯದರ್ಶಿ(ಆಡಳಿತ) ಬಸವರಾಜ್ ಹೆಗ್ಗಾನಾಯಕ್, ಉಪಕಾರ್ಯದರ್ಶಿ(ಅಭಿವೃದ್ಧಿ) ಬಸವರಾಜ್ ಅಡವಿಮಠ, ಮುಖ್ಯ ಲೆಕ್ಕಾಧಿಕಾರಿ ಪರಶುರಾಮ್ ದುಡಗುಂಟಿ, ಪ್ರೊಬೆಷನರಿ ಐ.ಎ.ಎಸ್ ಅಧಿಕಾರಿ ದಿನೇಶಕುಮಾರ ಮೀನಾ, ಕಾರ್ಯನಿರ್ವಾಹಕ ಅಭಿಯಂತರರು ಶಶಿಕಾಂತ ನಾಯಕ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ವಿಭಾಗ ಬೆಳಗಾವಿ, ಕಾರ್ಯನಿರ್ವಾಹಕ ಅಭಿಯಂತರರು ಪಾಂಡುರಂಗರಾವ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ವಿಭಾಗ ಚಿಕ್ಕೋಡಿ, ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತರಾಜ್ ಇಲಾಖೆ, ಬೆಳಗಾವಿ/ಚಿಕ್ಕೋಡಿ, ಕಾರ್ಯನಿರ್ವಾಹಕ ಅಭಿಯಂತರರು, ಕೆ.ಆರ್.ಡಿ.ಎಲ್ ವಿಭಾಗ ಬೆಳಗಾವಿ/ಚಿಕ್ಕೋಡಿ, ಕಾರ್ಯನಿರ್ವಾಹಕ ಅಭಿಯಂತರರು, ಕೆ.ಆರ್.ಆರ್.ಡಿ.ಎ ವಿಭಾಗ ಬೆಳಗಾವಿ/ಚಿಕ್ಕೋಡಿ, ಜಿಲ್ಲೆಯ ಎಲ್ಲ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕಿನ ಎಲ್ಲ ಸಹಾಯಕ ನಿರ್ದೇಶಕರು(ಗ್ರಾ ಉ), ತಾಲೂಕಿನ ಎಲ್ಲ ಸಹಾಯಕ ನಿರ್ದೇಶಕರು(ಪಂ. ರಾಜ್) ಮುಂತಾದವರು ಹಾಜರಿದ್ದರು.

# ಮಕ್ಕಳಲ್ಲಿನ ಅಪೌಷ್ಠಿಕತೆ ತಡೆಗೆ ಕ್ರಮ : ಸಿಇಒ ಕುರೇರ್



ಬಾಗಲಕೋಟೆ: ಅಂಗನವಾಡಿಗಳಿಗೆ ಬರುವ ಮಕ್ಕಳಲ್ಲಿನ ಅಪೌಷ್ಠಿಕತೆಯನ್ನು ಕಡಿಮೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಸೂಚಿಸಿದರು.

ಜಿಲ್ಲಾ ಪಂಚಾಯತ್ ಹಳೆಯ ಸಭಾಂಗಣದಲ್ಲಿ ಶುಕ್ರವಾರ ಜರುಗಿದ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಂಗನಾಡಿ ಮೇಲ್ವಿಚಾರಕಿಯರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅಂಗನವಾಡಿ ಮೇಲ್ವಿಚಾರಕಿಯರು ಕಡ್ಡಾಯವಾಗಿ ಪ್ರತಿ ತಿಂಗಳು ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಅಪೌಷ್ಠಿಕತೆ ಇರುವ ಮಕ್ಕಳನ್ನು ಗುರುತಿಸಿ, ಅಂತಹ ಮಕ್ಕಳನ್ನು ಎನ್ ಆರ್ ಸಿ ಕೇಂದ್ರಗಳಿಗೆ ದಾಖಲಿಸಿ ಸೂಕ್ತ ಚಿಕಿತ್ಸೆಯನ್ನು ನೀಡಬೇಕು ಎಂದರು.

ಅಂಗನವಾಡಿಗಳಲ್ಲಿ ಮಕ್ಕಳಿಗೆ ನೀಡುವ ಆಹಾರ ಪದಾರ್ಥಗಳು ಗುಣಮಟ್ಟದಿಂದ ಕೂಡಿರಬೇಕು. ದೂರುಗಳು ಬರುತ್ತಿರುವ ಹಿನ್ನಲೆಯಲ್ಲಿ ಶಿಶುಪಾಲನಾ ಯೋಜನಾಧಿಕಾರಿ ಹಾಗೂ ಎಸಿಡಿಪಿಒ ಅಧಿಕಾರಿಗಳು ಕಡ್ಡಾಯವಾಗಿ ಅಂಗನವಾಡಿಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಬೇಕು ಎಂದು ಹೇಳಿದರು.

ಮಕ್ಕಳಿಗೆ ಮೂಲಭೂತ ಸೌಕರ್ಯಗಳಾದ ಶುದ್ದ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಸ್ವಚ್ಚ ಶೌಚಾಲಯದ ವ್ಯವಸ್ಥೆ ಮಾಡಬೇಕು. ಗ್ರಾಮಗಳಲ್ಲಿ ನಡೆಯುವ ಬಾಲ್ಯ ವಿವಾಹಗಳನ್ನು ತಡೆಗಟ್ಟಲು ಕ್ರಮ ವಹಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಪ್ರಭಾಕರ ಕವಿತಾಳ ಇದ್ದರು.

## ಇಂಡಿ ಶಾಲೆಯ ವಿದ್ಯಾರ್ಥಿಗಳು ಅತ್ಯುತ್ತಮವಾದಂತ ಸಾಧನೆ



ಇಂಡಿ: ತಾಲೂಕ ಮಟ್ಟದ ಪ್ರತಿಭಾ ಕಾರಂ-ಜಿಯಲ್ಲಿ ಸರಕಾರಿ ಆದರ್ಶ ವಿದ್ಯಾಲಯ ಇಂಡಿ ಶಾಲೆಯ ವಿದ್ಯಾರ್ಥಿಗಳು ಅತ್ಯುತ್ತಮವಾದಂತ ಸಾಧನೆಯನ್ನು ಮಾಡಿದ್ದಾರೆ ಹಿರಿಯರ ವಿಭಾಗದಲ್ಲಿ ಸಾತ್ವಿಕ್ ಪಾಟೀಲ್ ಭಕ್ತಿ ಗೀತೆಯಲ್ಲಿ ಪ್ರಥಮ ಸ್ಥಾನ, ಶಿವಾನಿ ಕಾಗೆ ಇಂಗ್ಲೀಷ್ ಕಂಠಪಾಠದಲ್ಲಿ ಪ್ರಥ-ಮ ಸ್ಥಾನ, ಪ್ರೌಢ ವಿಭಾಗದಲ್ಲಿ ತನು ಅಕಳವಾಡಿ ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ, ಸಹನಾ ದ್ಯಾಮಗೊಂಡ ಇಂಗ್ಲೀಷ್ ಭಾಷಣದಲ್ಲಿ ದ್ವಿತೀಯ ಸ್ಥಾನ, ಚಿತ್ರಕಲೆಯಲ್ಲಿ ಜ್ಯೋತಿ ಮೇತ್ರಿ ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಲ್ಲ ವಿದ್ಯಾರ್ಥಿಗಳಿಗೆ ಇಂಡಿ ಕ್ಷೇತ್ರ ಶಿಕ್ಷಣಾಧಿಕಾರಿ ಟಿ ಎಸ್ ಆಲಗೂರ ಮುಖ್ಯ ಗುರುಗಳಾದ ಎಸ್ ಜಿ ಬನ್ನಸೋಡೆ ಎಸ್ ಡಿ ಎಮ್ ಸಿ ಅಧ್ಯಕ್ಷರು ಸದಸ್ಯರು ಸಂಗೀತ ಶಿಕ್ಷಕಿಯರಾದ ಶ್ರೀಮತಿ ಟಿ ಎಸ್ ಹೂಗಾರ್ ಹಾಗೂ ಶಾಲೆಯ ಶಿಕ್ಷಕ ಸಿಬ್ಬಂದಿಯವರು ಅಭಿನಂದಿಸಿದ್ದಾರೆ

*******

### ಬಾಲಮಂದಿರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿ

## ಸ್ವಚ್ಛತೆಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚನೆ



ವಿಜಯಪುರ, : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಡಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಬಾಲಕಿಯರ ಬಾಲ ಮಂದಿರ ಹಾಗೂ ಸರ್ಕಾರಿ ಬಾಲಕರ ಬಾಲ ಮಂದಿರಕ್ಕೆ ಗುರುವಾರ ಸಂಜೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಾಲ ಮಂದಿರಗಳ ಮೂಲಭೂತ ಸೌಕರ್ಯ ಪರಿಶೀಲಿಸಿದ ಅವರು, ಬಾಲ ಮಂದಿರದಲ್ಲಿರುವ ಮಕ್ಕಳ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ,ಯಾವುದೇ ಕಾರಣಕ್ಕೂ ಮಕ್ಕಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಶೌಚಾಲಯಗಳಲ್ಲಿ ಸ್ವಚ್ಛತೆ, ಕುಡಿಯುವ ನೀರು, ಸ್ನಾನಕ್ಕೆ ಬಿಸಿ ನೀರು, ಉತ್ತಮ ಆಹಾರ ಸೇರಿದಂತೆ ಮೂಲ ಸೌಕರ್ಯಗಳನ್ನು ಸಮರ್ಪಕವಾಗಿ ಮಕ್ಕಳಿಗೆ ಒದಗಿಸಬೇಕು. ಕೌಶಲ್ಯತೆಯನ್ನು ಹೆಚ್ಚಿಸಲು ವಿದ್ಯಾಭ್ಯಾಸದ ಜೊತೆಗೆ ಪಠ್ಯೇತರ ಚಟುವಟಿ-ಕೆಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಬಾಲಮಂದಿರದ ಮಕ್ಕಳೊಂದಿಗೆ ಸಂವಾದ ನಡೆಸಿದ ಅವರು,ಮಕ್ಕಳಯೋಗ ಕ್ಷೇಮ ವಿಚಾರಿಸಿದರು.ಸತತ ಅಧ್ಯಯನಶೀಲತೆ ರೂಢಿಸಿಕೊಳ್ಳಬೇಕು.ಎಲ್ಲಾ ವಿಷಯಗಳನ್ನು ಕರಗತ ಮಾಡಿಕೊಳ್ಳಬೇಕು ಹೇಳಿದರು.

ಸರ್ಕಾರಿ ಬಾಲಕಿಯರ ಬಾಲ ಮಂದಿರದ ಕಟ್ಟಡ ಪರಿಶೀಲನೆ ನಡೆಸಿದ ಅವರು, ಕಟ್ಟಡದ ಅಗತ್ಯ ದುರಸ್ತಿ ಕಾಮಗಾರಿ ಕೈಗೊಳ್ಳುವಂತೆಯೂ, ಬಾಲಕರ ಬಾಲಮಂದಿರದ ಆವರಣದಲ್ಲಿ ವಿದ್ಯುದ್ದೀಪ ಅಳವಡಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಿದರು. ಮಕ್ಕಳ ಆಟಕ್ಕಾಗಿ ಆಟದ ಮೈದಾನದಲ್ಲಿ ಒಪನ್‌ಜಿಮ್ ವ್ಯವಸ್ಥೆ ಕಲ್ಪಿಸಲು ಮಹಾನಗರ ಪಾಲಿಕೆ ಆಯುಕ್ತರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಕೆ.ಕೆ.ಚವ್ಹಾಣ, ಬಸವರಾಜ ಜಿಗಳೂರು ಸೇರಿದಂತೆ ಅಧಿಕಾರಿ,ಸಿಬ್ಬಂದಿ ಉಪಸ್ಥಿತರಿದ್ದರು.

*****

## ಮಹಾನಗರ ಪಾಲಿಕೆ ವತಿಯಿಂದ ಅತಿಕ್ರಮಣ ತೆರವು ಕಾರ್ಯಾಚರಣೆ



ವಿಜಯಪುರ, : ವಿಜಯಪುರ ಮಹಾನಗರ ಪಾಲಿಕೆ ವತಿಯಿಂದ ವಾರ್ಡ ನಂ.13ರ ಜನತಾ ಬಜಾರ, ನೆಹರು ಮಾರುಕಟ್ಟೆ ಬಳಿ ಹಾಗೂ ಎಲ್‌ಬಿಎಸ್ ಮಾರುಕಟ್ಟೆ ಹತ್ತಿರ ಅತಿ-ಕ್ರಮಣವನ್ನು ತೆರವುಗೊಳಿಸಲಾಯಿತು.

ನಗರದಲ್ಲಿ ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸಲು ಪಾಲಿಕೆಯ ಆಯುಕ್ತರಾದ ವಿಜಯಕುಮಾರ ಮೆಕ್ಕಳಕಿ ಅವರ ನೇತೃತ್ವದಲ್ಲಿ ಶುಕ್ರವಾರ ಅತಿ-ಕ್ರಮಣ ತೆರವು ಕಾರ್ಯಾಚರಣೆ ಕೈಗೊಂಡಿದ್ದು, ನಗರದ ನೆಹರು ಮಾರ್ಕೆಟ್ ಹಿಂಭಾಗ, ಎಂ.ಆರ್.ಹೋಟೆಲ್ ಹತ್ತಿರ, ಕೆಎಸ್‌ಆರ್‌ಟಿಸಿ ಡಿಪೋ ಪಕ್ಕ, ಪ್ರವಾಸೋದ್ಯಮ ಮಂದಿರದ ಹಿಂದುಗಡೆ, ಸೈನಿಕ ಶಾಲೆ ರಸ್ತೆಯ ಜಿಮಖಾನಾ ಕ್ಲಬ್ ಹಿಂದೆ ಹಾಗೂ ಆಹಾರ ಮಾರಾಟಕ್ಕೆ ಇಂಡಿ ರಸ್ತೆಯಲ್ಲಿ ಜಿಲ್ಲಾ ಕ್ರೀಡಾಂಗಣದ ಹತ್ತಿರ ವೆಂಡಿಂಗ್ ಜೋನ್‌ಗಳನ್ನು ಗುರುತಿಸಲಾಗಿದ್ದು, ಸದರಿ ನಿಗದಿತ ಸ್ಥಳಗಳಲ್ಲಿಯೇ ಬೀದಿ ಬದಿ ವ್ಯಾಪಾರಸ್ಥರು ವ್ಯಾಪಾರ-ವಹಿವಾಟು ನಡೆಸುವಂತೆ ತಿಳಿಸಲಾಗಿದೆ. ಇಂದು ನಡೆದ ಅತಿಕ್ರಮಣ ತೆರವು ಕಾರ್ಯಾಚರಣೆಯಲ್ಲಿ ವಲಯ ಕಛೇರಿ-1ರ ವಲಯ ಆಯುಕ್ತರಾದ ಸುನೀಲ ಪಾಟೀಲ ಸೇರಿದಂತೆ ಪಾಲಿಕೆ ಅಧಿಕಾರಿ-ಸಿಬ್ಬಂದಿಗಳು, ಪೊಲೀಸ್ ಇಲಾಖೆ ಅಧಿಕಾರಿ-ಸಿಬ್ಬಂದಿಗಳು ಉಪಸ್ಥಿತರಿದ್ದರು

### ತೊಗರಿ ಬೆಳೆ ಹೂ-ಕಾಯಿ ಉದುರುವ ಸಮಸ್ಯೆ : ಸಂಪರ್ಕ ವಿಳಾಸ

ವಿಜಯಪುರ, : ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಅಲ್ಲಲ್ಲಿ ತೊಗರಿ ಬೆಳೆದ ರೈತರ ಜಮೀನುಗಳಲ್ಲಿ ಹವಾಮಾನ ವೈಪರಿತ್ಯದಿಂದ ಹೂ ಮತ್ತು ಕಾಯಿ ಉದುರುತ್ತಿರುವುದು ಕಂಡು ಬಂದಲ್ಲಿ ರೈತರು ಬೆಳೆ ವಿಮೆ ನೊಂದಣಿ ಮಾಡಿದ ರಶೀದಿ, ಜಿಪಿಎಸ್ ಫೋಟೋದೊಂದಿಗೆ ಅರ್ಜಿಯನ್ನು ಆಯಾ ರೈತ ಸಂಪರ್ಕ ಕೇಂದ್ರ ಅಥವಾ ವಿಮಾ ಸಂಸ್ಥೆಯ ಪ್ರತಿನಿಧಿಗಳಿಗೆ ಸಂಪರ್ಕಿಸುವಂತೆ ವಿಜಯಪುರ ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರ ಅಥವಾ ವಿಜಯಪುರ ತಾಲೂಕಿನ ವಿಮಾ ಸಂಸ್ಥೆ ಪ್ರತಿನಿಧಿ ಸಂತೋಷ ಜಗರಿ ಮೊ: 7349113727, ಬಬಲೇಶ್ವರ ತಾಲೂಕಿನ ಸಾಗರ ಔರಸಂಗ ಮೊ: 9590921699 ಹಾಗೂ ತಿಕೋಟಾ ತಾಲೂಕಿನ ರಮೇಶ ಹಳ್ಳಿ ಮೊ: 7892547066 ಸಂಖ್ಯೆಗೆ ಸಂಪರ್ಕಿಸುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಜಯಪುರ-ಇಂಡಿ ಬಸ್‌ಗಳ ನಗರ ಮಾರ್ಗ ಬದಲಾವಣೆ

ವಿಜಯಪುರ, :ವಿಜಯಪುರದಿಂದ ಇಂಡಿ ಮಾರ್ಗವಾಗಿ ಕಾರ್ಯಾಚರಣೆಯಾಗುವ ವೇಗದೂತ, ಸಾಮಾನ್ಯ ಸಾರಿಗೆ ಬಸ್‌ಗಳು ಹಾಗೂ ಅಲಿಯಾಬಾದ್‌ಗೆ ಹೋಗುವ ನಗರ ಸಾರಿಗೆ ಬಸ್‌ಗಳನ್ನು ಪ್ರಯಾಣಿಕರು, ವಿದ್ಯಾರ್ಥಿಗಳು ಹಾಗೂ ವ್ಯಾಪಾರಸ್ಥರಿಗೆ ಅನುಕೂಲ ಕಲ್ಪಿಸಲು ಗಾಂಧಿಚೌಕ-ನೆಹರು ಮಾರ್ಕೆಟ್, ಕಾಯಿಪಲ್ಯ ಮಾರ್ಕೆಟ್, ಅಟಲ್ ಬಿಹಾರಿ ವಾಜಪೇಯಿ ರಸ್ತೆ ಮೂಲಕ ಸಂಚ-ರಿಸಲಿವೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

*******

**ಪುರಸಭೆ ಕಾರ್ಯಾಲಯ ಮೂಡಲಗಿ.**
ತಾ:ಮೂಡಲಗಿ ಪಿನಕೋಡ 591312 ಜಿಲ್ಲಾ:ಬೆಳಗಾವಿ.
ದೂರವಾಣಿ: ಫ್ಯಾಕ್ಸ : 08334-251235
E Mail:itstaff_ulb_mudalagi@yahoo.com. Website:www.mudalagitown.mrc.gov.in

ಕ್ರ ಸಂ/ಪುಸಮೂ/ಲೋ.ಇ/2024-25 ದಿನಾಂಕ:27-11-2024

**॥ ಟೆಂಡರ ಪ್ರಕಟಣೆ ॥ ॥ ಕರ್ನಾಟಕ ಸರಕಾರದ ಇ-ಪ್ರೋಕ್ಯೂರಮೇಂಟ್ ಪೋರ್ಟಲ್ ಮುಖಾಂತರ ಮಾತ್ರ ॥ (ಕರ್ನಾಟಕ ಪಾರದರ್ಶಕ ಅಧಿನಿಯಮ 1999 ಮತ್ತು ನಿಯಮಗಳು 2000 ರನ್ವಯ)**

ಪುರಸಭೆ ಮೂಡಲಗಿ ವ್ಯಾಪ್ತಿಯಲ್ಲಿ ಪುರಸಭೆ ಅನುದಾನದಡಿ ಈ ಕೆಳಗೆ ವಿವರಿಸಿದ ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆ/ಜಿಲ್ಲಾ ಪಂಚಾಯತ ಇಂಜಿನಿಯರಿಂಗ ವಿಭಾಗದಲ್ಲಿ ನೊಂದಾಯಿಸಲ್ಪಟ್ಟ ಅರ್ಹ ಸಿವ್ಹಿಲ, ಗುತ್ತಿಗೆದಾರರಿಂದ ಕೆ.ಡಬ್ಲ್ಯೂ-II ಪ್ರಕಾರ ಐಟಂವಾರು ಪ್ರಕಾರ ಒಟ್ಟು – 3 ಕಾಮಗಾರಿಗಳು, ಇಂಡೆಂಟ ಸಂಖ್ಯೆ 32782, 32783 ಮತ್ತು 32784 ಪ್ರತಿ ಕಾಮಗಾರಿಗೆ ಇಟ್ಟ ಮೊತ್ತ ರೂ 29.80 ಲಕ್ಷಗಳು ಮಾಹಿತಿಗಾಗಿ ನಿಗಧಿಪಡಿಸಿದ ಟೆಂಡರ ದಾಖಲಾತಿಯನ್ನು ಕೆ.ಪಿ.ಪಿ.ಪಿ ಪೋರ್ಟಲ್‌ನಿಂದ ನಿಗಧಿತ ಶುಲ್ಕ ಪಾವತಿಯೊಂದಿಗೆ ಡೌನ್ ಲೋಡ್ ಮಾಡಿಕೊಳ್ಳತಕ್ಕದ್ದು ಇ.ಎಂ.ಡಿ ಮೊತ್ತದೊಂದಿಗೆ ಭರ್ತಿ ಮಾಡಿದ ಟೆಂಡರುಗಳನ್ನು ಕೊನೆಯ ದಿನಾಂಕ 11-12-2024 ರ ಸಾಯಂಕಾಲ 5-00 ಗಂಟೆಯೊಳಗಾಗಿ ಇ-ಪೋರ್ಟಲ್‌ನಲ್ಲಿ ಸಲ್ಲಿಸತಕ್ಕದ್ದು ಬಿಡ್ ಟೆಂಡರ ತೆರೆಯುವ ದಿನಾಂಕ 13-12-2024 ರಂದು ಬೆಳಿಗ್ಗೆ 11-00 ಗಂಟೆಗೆ ಕಾಮಗಾರಿಗಳ ಟೆಂಡರ್ ಪಡೆಯಲು ಬೇಕಾದ ಅರ್ಹತೆ, ಮೀಸಲಾತಿ ಹಾಗೂ ಇತರೆ ಷರತ್ತುಗಳನ್ನು ಟೆಂಡರ್ ಫಾರಂಗಳಲ್ಲಿ ವಿವರವಾಗಿ ನಮೂದಿಸಲಾಗಿದೆ. ವಿವರವಾದ ಟೆಂಡರ ಪ್ರಕಟಣೆಯನ್ನು ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದವರ ಕಛೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿದೆ. ಹಾಗೂ ಕಛೇರಿ ದೂರವಾಣಿ ನಂ- 08334-251235 ರಿಂದ ಮಾಹಿತಿ ಪಡೆಯಬಹುದು.ಮತ್ತು ಅಂತರ್ಜಾಲದ ಮೂಲಕ ವೆಬ್‌ಸೈಟ್. ಕಾಮಗಾರಿ ವಿವರ ಹಾಗೂ ಶರತ್ತುಗಳು https://kppp. karnataka. gov.in/,ಅಥವಾ ಈ ಕಛೇರಿ website:www.mudalagitown. mrc.gov.in ಇದರಲ್ಲಿ ಪಡೆಯಬಹುದು.

ಸಹಿ/-ಮುಖ್ಯಾಧಿಕಾರಿ ಪುರಸಭೆ ಮೂಡಲಗಿ

ಸಹಿ/-ಅಧ್ಯಕ್ಷರು ಪುರಸಭೆ ಮೂಡಲಗಿ

DIPR/BGM/RO-NO-1212/KSMCA/2024-25

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 247, Postal Reg No. PMG/KA/NK/BM/135/22-24 / POST AT Vantamury Colony Post Office